ಸಂಪುಟ: 03 | ಸಂಚಿಕೆ: 257 | ದಿನಾಂಕ: 28-08-2026 | ಶುಕ್ರವಾರ | ಪುಟ: 4 | ಬೆಲೆ: 2.00ರೂ.

ಸಂಪಾದಕರು, ಮಾಲೀಕರು: ರಾಧಿಕಾ ಎ.ಆರ್.

RNI:KARKAN/2023/88508, Postal Reg No:L2/RNP-1287/TMR/2025-27

# ಕರ್ನಾಟಕ ಸಕ್ಸಸ್ ನಂ 1

KARNATAKA SUCCESS NO1 Kannada Daily

Email: radhikaarno1@gmail.com Ph: 9380988530

ಕನ್ನಡ ದಿನಪತ್ರಿಕೆ

ಇದು ಸ್ವಾಭಿಮಾನಿಗಳ ಧ್ವನಿ

## ಪ್ರಜಾಸೇವೆ ಸಹಾಯವಾಣಿ ಕೆಂದ್ರ ಸ್ಥಾಪನೆ

**ತುಮಕೂರು:** ಜಿಲ್ಲೆಯ ಸಾರ್ವಜನಿಕರ ಕುಂದು-ಕೊರತೆಗಳನ್ನು ಆಲಿಸಿ ಅವುಗಳಿಗೆ ಸಕಾಲದಲ್ಲಿ ಸೂಕ್ತ ಸಮಾಧಾನದ ಪರಿಹಾರ ನೀಡಲು ಅನುವಾಗುವಂತೆ ಜಿಲ್ಲಾ ಪಂಚಾಯತ್ ಕಾರ್ಯಾಲಯದಲ್ಲಿ ಪ್ರಜಾಸೇವೆ ಸಹಾಯವಾಣಿ ಕೇಂದ್ರವನ್ನು ಸ್ಥಾಪಿಸಲಾಗಿದೆ. ರಾಜ್ಯಾದ್ಯಂತ ಪ್ರತಿ ಜಿಲ್ಲೆಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸ್ಥಳೀಯ ಶಾಸಕರ ನೇತೃತ್ವದಲ್ಲಿ ಪ್ರತಿ ತಿಂಗಳ ಎಲ್ಲಾ ಶನಿವಾರದಂದು ಪ್ರಜಾಸೇವೆ ಆಂದೋಲನ ಸಭೆಯನ್ನು ಆಯೋಜಿಸುವ ಸಂಬಂಧ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಯನ್ವಯ ಈ ಸಹಾಯವಾಣಿ ಕೇಂದ್ರವನ್ನು ಸ್ಥಾಪಿಸಲಾಗಿದೆ.

ಸಾರ್ವಜನಿಕರು ಪ್ರಜಾಸೇವೆ ಸಹಾಯವಾಣಿ ಸಂಖ್ಯೆ: 0816-2271329ಕ್ಕೆ ಕರೆ ಮಾಡುವ ಮೂಲಕ ಇದರ ಪ್ರಯೋಜನ ಪಡೆಯಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ(ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಬಿ-ಜಿ ರಾಮ್ ಜಿ ಯೋಜನೆಯ ಕರಪತ್ರ ಬಿಡುಗಡೆ

## ಗ್ರಾಮೀಣ ಜನರು ಯೋಜನೆಯ ಸದುಪಯೋಗ ಪಡೆಯುವಂತೆ ಅಶ್ವಿಜ ಮನವಿ

**ತುಮಕೂರು:** ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಶ್ವಿಜ ಬಿ ವಿ ಅವರು ಜಿಲ್ಲಾ ಪಂಚಾಯತಿಯಲ್ಲಿಂದು ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕ ಮಿಷನ್(VB GRAM G)ಯೋಜನೆಯ ಮಾಹಿತಿಯುಳ್ಳ ಕರಪತ್ರಗಳನ್ನು ಬಿಡುಗಡೆಗೊಳಿಸಿದರು.



ನಂತರ ಮಾತನಾಡಿದ ಅವರು ಜಿಲ್ಲೆಯಲ್ಲಿ ಜುಲೈ 1 ರಿಂದ ಆರಂಭವಾಗಿರುವ VB G RAM G ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲಾಗುತ್ತಿದ್ದು, ಸದರಿ ಯೋಜನೆಯ ಮಾಹಿತಿಯನ್ನು ಗ್ರಾಮೀಣ ಭಾಗದ ಪ್ರತಿ ಮನೆಗೂ ತಲುಪಿಸುವ ಉದ್ದೇಶದಿಂದ ಈ ಕರಪತ್ರಗಳನ್ನು ಬಿಡುಗಡೆಗೊಳಿಸಲಾಗಿದೆ.

ಗ್ರಾಮೀಣ ಪ್ರದೇಶದ ಅರ್ಹ ಕುಟುಂಬಕ್ಕೆ ಒಂದು ವರ್ಷದಲ್ಲಿ 125 ದಿನಗಳ ಉದ್ಯೋಗ ಮತ್ತು ಒಂದು ಮಾನವ ದಿನಕ್ಕೆ 382 ರೂ.ಗಳ ಕೂಲಿಯನ್ನು ನೀಡಲಾಗುತ್ತಿದೆ. ಸದ್ಯ ರಾಜ್ಯದಲ್ಲಿ ಬರದ ಪರಿಸ್ಥಿತಿ ಇರುವುದರಿಂದ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕ ಮಿಷನ್ ಯೋಜನೆಯ ಸದುಪಯೋಗವನ್ನು ಗ್ರಾಮೀಣ ಜನರು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು. ಗ್ರಾಮ ಪಂಚಾಯಿತಿಯಿಂದ ಉಚಿತವಾಗಿ ಜಾಬ್ ಕಾರ್ಡ್ ನೀಡಲಾಗುತ್ತಿದೆ. ಅಕುಶಲ ಕೆಲಸ ಬೇಕೆಂದು ಗ್ರಾಮ ಪಂಚಾಯಿತಿಗೆ ನಮೂನೆ 6ರಲ್ಲಿ ಅರ್ಜಿ ಸಲ್ಲಿಸಿ ಕೆಲಸ ಕೋರಿದ 15 ದಿನಗಳಲ್ಲಿ ಕೆಲಸವನ್ನು ನೀಡಲಾಗುತ್ತದೆ. ಕೆಲಸ ನೀಡಲು ನಿರಾಕರಿಸಿದರೆ ನಿರುದ್ಯೋಗ ಭತ್ಯೆ ನೀಡಲಾಗುತ್ತದೆ. ಕೂಲಿ ಕೆಲಸ ನಿರ್ವಹಿಸಿದ 15 ದಿನದೊಳಗಾಗಿ ಅರ್ಹ ಫಲಾನುಭವಿಯ ಬ್ಯಾಂಕ್ ಖಾತೆಗೆ ನೇರವಾಗಿ ಕೂಲಿಯನ್ನು ಜಮಾ ಮಾಡಲಾಗುತ್ತದೆ. ವಿಶೇಷ ಚೇತನರು, ವೃದ್ಧರು, ಗರ್ಭಿಣಿಯರಿಗೆ ಕೆಲಸದಲ್ಲಿ ಶೇಕಡ 50ರಷ್ಟು ರಿಯಾಯಿತಿ ನೀಡಲಾಗುತ್ತದೆ ಎಂದರು.

ಸಂಬಂಧಿಸಿದ ಗ್ರಾಮ ಪಂಚಾಯಿತಿ ಕಚೇರಿಗೆ ಭೇಟಿ ನೀಡಿ ನಮೂನೆ 6ರಲ್ಲಿ ಅರ್ಜಿ ಸಲ್ಲಿಸುವ ಮೂಲಕ ಕೆಲಸದ ಬೇಡಿಕೆಯನ್ನು ಸಲ್ಲಿಸಬಹುದು ಅಥವಾ ಗ್ರಾಮ ಪಂಚಾಯಿತಿ ಕಚೇರಿಯಲ್ಲಿರುವ ಕಾಮಗಾರಿ ಬೇಡಿಕೆ ಪೆಟ್ಟಿಗೆಯಲ್ಲಿ ಅರ್ಜಿ ಸಲ್ಲಿಸಬಹುದು. ಉದ್ಯೋಗ ಚೀಟಿ ಪಡೆಯಲು ಸ್ಥಳೀಯ ವಾಸಸ್ಥಳ ದೃಢೀಕರಣ, ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ವಿವರಗಳೊಂದಿಗೆ ನಮೂನೆ 1ರಲ್ಲಿ ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸಿ ಜಾಬ್ ಕಾರ್ಡ್ ಪಡೆಯಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿಯ ಉಪ ಕಾರ್ಯದರ್ಶಿ (ಅಭಿವೃದ್ಧಿ) ಕೆ.ಪಿ ಸಂಜೀವಪ್ಪ, ಉಪ ಕಾರ್ಯದರ್ಶಿ (ಆಡಳಿತ) ಈಶ್ವರಪ್ಪ, ಮುಖ್ಯ ಯೋಜನಾಧಿಕಾರಿ ಸಣ್ಣಮಸಿಯಪ್ಪ, ಯೋಜನಾ ನಿರ್ದೇಶಕರಾದ ನಾರಾಯಣಸ್ವಾಮಿ ಸೇರಿದಂತೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಮತ್ತು VB G RAM G ಯೋಜನೆಯ ಸಿಬ್ಬಂದಿ ಭಾಗಿಯಾಗಿದ್ದರು.

## ಶ್ರೀ ಗ್ರಾಮದೇವತೆ ಜಾತ್ರೆಗೆ ಗುಬ್ಬಿ ಪಟ್ಟಣ ಸಜ್ಜು

**ಗುಬ್ಬಿ:** ಪಟ್ಟಣದ ಅಧಿ ದೇವತೆ ಶ್ರೀ ಗ್ರಾಮದೇವತೆ ಅಮ್ಮನವರ ಜಾತ್ರಾ ಮಹೋತ್ಸವ ಇದೇ ತಿಂಗಳ 31 ರಿಂದ ಸೆ.3 ರವರೆಗೆ ಅದ್ದೂರಿಯಾಗಿ ನಡೆಸಲು ಇಡೀ ಗುಬ್ಬಿ ಪಟ್ಟಣ ಅಲಂಕೃತವಾಗಿ ಸಜ್ಜಾಗುತ್ತಿದೆ ಎಂದು ಹದಿನೆಂಟು ಕೋಮಿನ ದೇವಾಲಯ ಸಮಿತಿ ತಿಳಿಸಿದೆ.



ಆಗಸ್ಟ್ 31 ರ ಸೋಮವಾರ ರಾತ್ರಿ 12 ರವರೆಗೆ ಪಣಗಾರರ ಬೀದಿಯಲ್ಲಿನ ಶ್ರೀ ಗ್ರಾಮದೇವತೆ ಅಮ್ಮನವರ ದೇವಾಲಯದಲ್ಲಿ ಪೂಜಾ ವಿಧಿ ಆರಂಭವಾಗಿ ವಿಶ್ವಕರ್ಮ ಮತಸ್ಥರಿಂದ ಅಮ್ಮನವರಿಗೆ ನೇತ್ರೋನ್ಮಿಲನ ಹಾಗೂ ಆರತಿ ಸೇವೆ ನಡೆಯಲಿದೆ. ಸೆ.1 ರಂದು ಬೆಳಿಗ್ಗೆ 10.30 ಕ್ಕೆ ಸಂತೆ ಮೈದಾನದ ಶಿಲಾ ಗದ್ದುಗೆ ದೇವಾಲಯದಲ್ಲಿ ಗದ್ದುಗೆ ಪೂಜೆ ನಡೆಯಲಿದೆ. ಮಧ್ಯಾಹ್ನ 1.30 ಕ್ಕೆ ಹೂವಿನ ಪಲ್ಲಕ್ಕಿಯಲ್ಲಿ ಅಲಂಕರಿಸಿ ಊರಿನ ರಾಜಬೀದಿಗಳಲ್ಲಿ ವಿವಿಧ ಕಲಾ ತಂಡದೊಂದಿಗೆ ಮೆರವಣಿಗೆ ಸಾಗಿ ಸಂಜೆ 5 ಗಂಟೆಗೆ ಹಳೇ ಸಂತೆ ಮೈದಾನದ ಗದ್ದುಗೆ ತಲುಪಿ ಮೂರು ದಿನಗಳ ಆರತಿ ಸೇವೆಗೆ ಅಮ್ಮನವರನ್ನು ಪ್ರತಿಷ್ಠಾಪಿಸಲಾಗುವುದು. ನಂತರ ವಿವಿಧ ಜನಾಂಗದವರ ಆರತಿ ಸೇವೆ ನಡೆಯಲಿದೆ. ಮುಂದುವರೆದು ಸೆ.2 ರಂದು ಸಹ ಕೆಲ ಸಮುದಾಯದ ಆರತಿ ಸೇವೆ ನಡೆಯಲಿದೆ. ಸೆ.3 ರಂದು ಆರತಿ ಜೊತೆ ಬಾನ ಪೂಜೆ, ಘಟ ಸೇವೆ ನಡೆಯಲಿದೆ. ರಾತ್ರಿ 9 ಗಂಟೆಗೆ ಅಮ್ಮನವರನ್ನು ಉತ್ಸವ ಮೂಲಕ ಮೆರವಣಿಗೆ ಹೊರಟು ಲಕ್ಕೇನಹಳ್ಳಿ ಸಮೀಪದ ಗ್ರಾಮದೇವತೆ ವನದಲ್ಲಿನ ಗದ್ದುಗೆಯಲ್ಲಿ ಮುಂಜಾನೆ ವೇಳೆಗೆ ಅಮ್ಮನವರ ಸ್ಥಾಪಿಸಿ ಬೀಳ್ಕೊಡುವ ಮೂಲಕ ಜಾತ್ರೆ ಅಂತಿಮ ಹಂತಕ್ಕೆ ತಲುಪಲಿದೆ. ನಂತರ ಸೆ.4 ರ ಸಂಜೆ 7.30 ಕ್ಕೆ ಮರುಪೂಜೆ ಸಲ್ಲಿಸಿ ಜಾತ್ರೆ ಸಂಪನ್ನಗೊಳಿಸಲಾಗುವುದು ಎಂದು ಹದಿನೆಂಟು ಕೋಮಿನ ಜಾತ್ರಾ ಸಮಿತಿ ತಿಳಿಸಿದೆ.

## ಇಂದಿನಿಂದ ವಿವಿಧ ಕ್ರೀಡಾಕೂಟ

**ತುಮಕೂರು:** ಮೇಜರ್ ಧ್ಯಾನ್ ಚಂದ್ ಅವರ ಹುಟ್ಟು ಹಬ್ಬದ ಪ್ರಯುಕ್ತ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಆಗಸ್ಟ್ 28 ರಿಂದ ವಿವಿಧ ಕ್ರೀಡಾಕೂಟಗಳನ್ನು ಆಯೋಜಿಸಿದೆ.

ಆಗಸ್ಟ್ 28ರಂದು ನಗರದ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಮ್ಯಾರಾಥಾನ್, ಆಗಸ್ಟ್ 29ರಂದು ಡಾ: ಜಿ. ಪರಮೇಶ್ವರ ಒಳಾಂಗಣ ಕ್ರೀಡಾಂಗಣದಲ್ಲಿ ವೀಲ್ ಚೇರ್ ಬ್ಯಾಸ್ಕೆಟ್ ಬಾಲ್, ಆಗಸ್ಟ್ 30ರಂದು ತುಮಕೂರು ವಿಶ್ವವಿದ್ಯಾನಿಲಯದಲ್ಲಿ ಸೈಕ್ಲಥಾನ್ ಅನ್ನು ಏರ್ಪಡಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಎಂ.ಆರ್. ಶಿವಪ್ರಸಾದ್ (9964529175) ಅವರನ್ನು ಸಂಪರ್ಕಿಸಬಹುದೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ರಾಜ್ಯ ಸರ್ಕಾರ ಅನುದಾನ ನೀಡುತ್ತಿಲ್ಲ: ಮಸಾಲಾ ಜಯರಾಮ್

### ಭಾರತೀಯ ಜನತಾ ಪಕ್ಷ ತುರುವೇಕೆರೆ ಮಂಡಲದ ಕಾರ್ಯಕಾರಿಣಿ ಸಭೆ

**ತುರುವೇಕೆರೆ:** ಪ್ರಸ್ತುತ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ದಿನದಿಂದ ಕ್ಷೇತ್ರದ ಅಭಿವೃದ್ಧಿಯಾಗುತ್ತಿಲ್ಲ, ಇದರಲ್ಲಿ ಶಾಸಕರ ತಪ್ಪೇನು ಇಲ್ಲ, ಕಾರಣ ರಾಜ್ಯ ಸರ್ಕಾರ ಯಾವುದೇ ಅನುದಾನ ನೀಡುತ್ತಿಲ್ಲ ಎಂದು ಮಾಜಿ ಶಾಸಕ ಮಸಾಲಾ ಜಯರಾಮ್ ಹಾಲಿ ಶಾಸಕ ಎಂ.ಟಿ.ಕೃಷ್ಣಪ್ಪನವರ ಪರ ಬ್ಯಾಟಿಂಗ್ ನಡೆಸಿದರು.




ತಾಲ್ಲೂಕಿನ ಚಿಕ್ಕೋನಹಳ್ಳಿ ಗೇಟ್ ಬಳಿ ಇರುವ ಮಸಾಲಾ ಜಯರಾಮ್ ಅವರ ಫಾರ್ಮ್ ಹೌಸಿನಲ್ಲಿ ನಡೆದ ಭಾರತೀಯ ಜನತಾ ಪಕ್ಷ ತುರುವೇಕೆರೆ ಮಂಡಲದ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ನಾನು ಶಾಸಕನಾಗಿದ್ದ ವೇಳೆ ತಂದಿದ್ದ ನೂರಾರು ಕೋಟಿ ರೂಪಾಯಿಗಳ ಅನುದಾನದ ಕೆಲಸಗಳು ಇಂದಿಗೂ ನಡೆಯುತ್ತಿದೆಯೇ ಹೊರತು ಕ್ಷೇತ್ರದಲ್ಲಿ ಕಳೆದ ಮೂರು ವರ್ಷದಿಂದ ಯಾವುದೇ ಹೊಸ ಅಭಿವೃದ್ಧಿ ಕಾಮಗಾರಿಗಳು ನಡೆದಿಲ್ಲ. ಕ್ಷೇತ್ರಕ್ಕೆ ಪ್ರಸ್ತುತ ರಾಜ್ಯ ಕಾಂಗ್ರೆಸ್ ಸರ್ಕಾರದಿಂದ ಯಾವುದೇ ಅನುದಾನ ದೊರೆತಿಲ್ಲ. ಈ ಕಾರಣದಿಂದ ನಾವು ಶಾಸಕರನ್ನು ದೂರುವಂತಿಲ್ಲ ಎಂದರು.

ರಾಜ್ಯ ಸರ್ಕಾರದ ವಿರುದ್ಧದ ಬಿಜೆಪಿಯ ಹೋರಾಟ, ಜಾತಿ ವಿರುದ್ಧವಲ್ಲ. ಸರ್ಕಾರ ಭ್ರಷ್ಟರನ್ನು ಸಚಿವರನ್ನಾಗಿ ಮಾಡಿ ವಿಧಾನಸಭೆಗೆ ಅಗೌರವ ತಂದಿದೆ. ಈ ನಿಟ್ಟಿನಲ್ಲಿ ಭಾರತೀಯ ಜನತಾ ಪಕ್ಷ ಸಚಿವ ನಾಗೇಂದ್ರ ಅವರ ರಾಜೀನಾಮೆಗೆ ಒತ್ತಾಯಿಸುತ್ತಿದೆ. ಸರ್ಕಾರ ನಾಗೇಂದ್ರ ಅವರ ರಾಜೀನಾಮೆ ಪಡೆದು ನಮ್ಮ ತುಮಕೂರು ಜಿಲ್ಲೆಯ ಹಿರಿಯ ಶಾಸಕರಾದ ಕೆ.ಎನ್.ರಾಜಣ್ಣನವರಿಗೆ ನೀಡಲಿ ನಮ್ಮದೇನು ಅಭ್ಯಂತರವಿಲ್ಲ ಎಂದ ಅವರು, ನಾಳೆ ಚುನಾವಣೆ ನಡೆದರೂ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುತ್ತದೆ.

ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಬಿಜೆಪಿ ಸರ್ಕಾರ ಬರುವುದು ಅನಿವಾರ್ಯವಾಗಿದೆ ಎಂದರು.

ಮತದಾರ ಪರಿಷ್ಕರಣೆ ಕಾರ್ಯ ಯಶಸ್ವಿಯಾಗಿ ನಡೆದಿದ್ದು, ರಾಜ್ಯದಲ್ಲಿ ಒಟ್ಟು 1 ಕೋಟಿ 17 ಲಕ್ಷ ಮತದಾರರು ಮತದಾರರ ಪಟ್ಟಿಯಿಂದ ಹೊರಬಿದ್ದಿದ್ದಾರೆ. ತುರುವೇಕೆರೆ ಕ್ಷೇತ್ರದಲ್ಲಿ 12ಸಾವಿರ ಮತದಾರರು ಪರಿಷ್ಕರಣೆ ವೇಳೆ ರದ್ದಾಗಿದೆ. ರಾಜ್ಯದ ಬಹುತೇಕ ಕ್ಷೇತ್ರಗಳಲ್ಲಿ ಬೇರೆ ರಾಜ್ಯಗಳಿಂದ ವಲಸೆ ಬಂದ ಜನತೆ ಅಲ್ಲಿ ಹಾಗೂ ಇಲ್ಲಿ ಎರಡೂ ಕಡೆ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡಿದ್ದರು. ಈಗ ಪರಿಷ್ಕರಣೆಯಿಂದ ಅವರೆಲ್ಲರ ಹೆಸರು ರದ್ದಾಗಿದೆ. ಮತದಾರರ ಪರಿಷ್ಕರಣೆ ಮಾಡಿದ್ದು ಬಹಳ ಒಳ್ಳೆಯದು ಎಂದರು.

ಮಾಜಿ ಶಾಸಕ ಎಂ.ಡಿ.ಲಕ್ಷ್ಮೀನಾರಾಯಣ್ ಮಾತನಾಡಿ, ಸರ್ಕಾರ ಕುರ್ಚಿ ಕದನದಲ್ಲಿ ತೊಡಗಿಸಿಕೊಂಡಿದ್ದು ರಾಜ್ಯದ ಅಭಿವೃದ್ಧಿಯನ್ನು ಮರೆತಿದೆ. ಸರ್ಕಾರದ ವಿರುದ್ಧ ಜನ ಬೇಸರಗೊಂಡಿದ್ದಾರೆ. ರಾಜ್ಯದ ಅಭಿವೃದ್ಧಿಯ ದೃಷ್ಟಿಯಿಂದ 2028ರ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಬಿಜೆಪಿ ಸರ್ಕಾರವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಮುಂಬರುವ ಜನವರಿ ತಿಂಗಳಿನಿಂದಲೇ ಪಕ್ಷದ ಮುಖಂಡರು, ಕಾರ್ಯಕರ್ತರು ಬೂತ್ ಮಟ್ಟದಿಂದ ತಾಲೂಕು ಮಟ್ಟದವರೆಗೆ ವಿವಿಧ ಮೋರ್ಚಾಗಳ ಅಡಿಯಲ್ಲಿ ಕಾರ್ಯಕ್ರಮಗಳನ್ನು ರೂಪಿಸಿ ಕೇಂದ್ರದ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಹಾಗೂ ಹಿಂದೆ ರಾಜ್ಯದ ಬಿಜೆಪಿ ಸರ್ಕಾರದ ಅವಧಿಯಲ್ಲಿ ಜಾರಿಗೊಳಿಸಿದ ಜನಪರ ಯೋಜನೆಗಳನ್ನು ಜನರಿಗೆ ಮನವರಿಕೆ ಮಾಡಿಸಿ ಪಕ್ಷ ಸಂಘಟನೆ ಮಾಡಬೇಕೆಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಬಿಜೆಪಿ ಮಂಡಲದ ಅಧ್ಯಕ್ಷ ಪ್ರಕಾಶ್ ಮಾತನಾಡಿ, 2028ರ ಚುನಾವಣೆಯಲ್ಲೂ ಬಿಜೆಪಿ ಅಭ್ಯರ್ಥಿಯಾಗಿ ಕಣಕ್ಕಿಳಿಯಲಿರುವ ಮಸಾಲಾ ಜಯರಾಮ್ ಅವರನ್ನು ಅತ್ಯಂತ ಹೆಚ್ಚಿನ ಬಹುಮತದಿಂದ ಶಾಸಕರನ್ನಾಗಿ ಆಯ್ಕೆ ಮಾಡುವ ನಿಟ್ಟಿನಲ್ಲಿ ಮುಖಂಡರು, ಕಾರ್ಯಕರ್ತರು ಇಂದಿನಿಂದಲೇ ಸಂಘಟಿತರಾಗಿ ಕಾರ್ಯೋನ್ಮುಖರಾಗಬೇಕೆಂದರು.

ಇದೇ ಸಂದರ್ಭದಲ್ಲಿ ಇತ್ತೀಚೆಗೆ ಅಗಲಿದ ಮಾಜಿ ಸಚಿವ ಬಿ.ಸಿ.ನಾಗೇಶ್ ಅವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಣೆ ಮಾಡಿ ನುಡಿನಮನ ಸಲ್ಲಿಸಲಾಯಿತು. ಜಿಲ್ಲಾ ಉಸ್ತುವಾರಿ ಶಿವಕುಮಾರ್, ಜಿಲ್ಲಾ ಕಾರ್ಯದರ್ಶಿ ಬಸವರಾಜ್, ಉಪಾಧ್ಯಕ್ಷ ನವೀನ್ ಬಾಬು, ತಾಲೂಕು ಕಾರ್ಯದರ್ಶಿ ಯೋಗಾನಂದ್, ಮಹೇಶ್, ಖಜಾಂಚಿ ಹರಿಕಾರನಹಳ್ಳಿ ಪ್ರಸಾದ್, ಮಹಿಳಾ ಘಟಕದ ಅಧ್ಯಕ್ಷೆ ರಾಧಾ, ಯುವ ಘಟಕದ ಅಧ್ಯಕ್ಷ ತೀರ್ಥಕುಮಾರ್, ನಗರ ಅಧ್ಯಕ್ಷ ರಾಘವೇಂದ್ರ ಸೇರಿದಂತೆ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ತಾಲೂಕು ಕ್ರೀಡಾಕೂಟದಲ್ಲಿ ಸರ್ಕಾರಿ ಪಪೂ ಕಾಲೇಜು ವಿದ್ಯಾರ್ಥಿಗಳ ಸಾಧನೆ

**ತುರುವೇಕೆರೆ:** ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಇತ್ತೀಚೆಗೆ ನಡೆದ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಉತ್ತಮ ಪ್ರದರ್ಶನ ನೀಡುವ ಮೂಲಕ ಹೆಚ್ಚು ಪ್ರಶಸ್ತಿಗಳನ್ನು ಗಳಿಸಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ ಎಂದು ಕಾಲೇಜಿನ ಪ್ರಾಂಶುಪಾಲ ವಿ.ಎನ್.ನಂಜೇಗೌಡ ತಿಳಿಸಿದರು.



ಮಾಧ್ಯಮದೊಂದಿಗೆ ಮಾತನಾಡಿದ ಅವರು, ಬಾಲಕಿಯರ ವಿಭಾಗದಲ್ಲಿ ಕಬ್ಬಡಿಯಲ್ಲಿ ಪ್ರಥಮ, ಖೋಖೋದಲ್ಲಿ ಪ್ರಥಮ, ಷಟಲ್ ಬ್ಯಾಡ್ಮಿಂಟನ್ ನಲ್ಲಿ ಪ್ರಥಮ, ಟೆನ್ನಿಕಾಯ್ಟ್ ನಲ್ಲಿ ದ್ವಿತೀಯ ಸ್ಥಾನ ಹಾಗೂ ಬಾಲಕರ ವಿಭಾಗದಲ್ಲಿ ವಾಲಿಬಾಲ್ ಪ್ರಥಮ, ಥ್ರೋಬಾಲ್ ನಲ್ಲಿ ದ್ವಿತೀಯ, ಷಟಲ್ ಬ್ಯಾಡ್ಮಿಂಟನ್ ನಲ್ಲಿ ದ್ವಿತೀಯ ಸ್ಥಾನ ಗಳಿಸಿದೆ. ಅಥ್ಲೆಟಿಕ್ಸ್ ವಿಭಾಗದ ಚಕ್ರ ಎಸೆತದಲ್ಲಿ ದಿಗಂತ್ ಪ್ರಥಮ ಹಾಗೂ ಗುಂಡು ಎಸೆತದಲ್ಲಿ ದ್ವಿತೀಯ ಸ್ಥಾನ ಗಳಿಸಿದರೆ, ಚೆಸ್ ನಲ್ಲಿ ಸಂಜಯ್ ಪ್ರಥಮ ಸ್ಥಾನ ಗಳಿಸಿದರು. ಟ್ರಿಪ್ಪಲ್ ಜಂಪ್ ನಲ್ಲಿ ಚೈತ್ರ ಪ್ರಥಮ ಸ್ಥಾನ ಗಳಿಸಿದರೆ, ಹೈಜಂಪ್ ಮತ್ತು ಲಾಂಗ್ ಜಂಪ್ ನಲ್ಲಿ ದ್ವಿತೀಯ ಸ್ಥಾನ ಹಾಗೂ ಮೂರು ಕಿ.ಮೀ ನಡಿಗೆಯಲ್ಲಿ ಗುಣಶ್ರೀ ದ್ವಿತೀಯ, 4/100 ರಿಲೇನಲ್ಲಿ ಸೌಂದರ್ಯ ಮತ್ತು ತಂಡ ದ್ವಿತೀಯ ಸ್ಥಾನ ಗಳಿಸಿದೆ. 800ಮೀ ಓಟದಲ್ಲಿ ತೃತೀಯ, ಟ್ರಿಪ್ಪಲ್ ಜಂಪ್ ಮತ್ತು ಹೈಜಂಪ್ ನಲ್ಲಿ ಭವ್ಯ ತೃತೀಯ, 100 ಮೀ ಓಟದಲ್ಲಿ ಅಭಿಷೇಕ್ ತೃತೀಯ, 1500 ಮೀ ಓಟದಲ್ಲಿ ರಶ್ಮಿ ತೃತೀಯ ಸ್ಥಾನ ಗಳಿಸಿದ್ದಾರೆ ಎಂದರು. ಕ್ರೀಡಾಕೂಟದಲ್ಲಿ ಉತ್ತಮ ಸಾಧನೆಗೈದು ಕಾಲೇಜಿನ ಕೀರ್ತಿ ಹೆಚ್ಚಿಸಿದ ವಿದ್ಯಾರ್ಥಿಗಳನ್ನು ಉಪನ್ಯಾಸಕರಾದ ಸ್ವಾಮಿ, ತ್ರಿಮೂರ್ತಿ, ಕೋಮಲಾ ಹಾಗೂ ಬೋಧಕ, ಬೋಧಕೇತರ ವರ್ಗ ಅಭಿನಂದಿಸಿದರು.

## ಆ.30 ರಂದು ಗಣಿತ ವಿಜ್ಞಾನ ಕಮ್ಮಟ

**ತುರುವೇಕೆರೆ:** ಶ್ರೀ ಚಿದಂಬರೇಶ್ವರ ಉಚಿತ ಗ್ರಂಥಾಲಯ, ಬೆಂಗಳೂರಿನ ಇಜ್ಞಾನ ಟ್ರಸ್ಟ್, ಗೌರಿಬಿದನೂರಿನ ಕ್ರಿಯಾಕ್ಟೀವ್ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 30 ರಂದು ಬೆಳಿಗ್ಗೆ 9.30 ಕ್ಕೆ ಗ್ರಂಥಾಲಯದ ಆವರಣದಲ್ಲಿ 7ನೇ ಗಣಿತ ವಿಜ್ಞಾನ ಕಮ್ಮಟ 2026 ಅನ್ನು ಆಯೋಜಿಸಲಾಗಿದೆ ಎಂದು ಗ್ರಂಥಾಲಯದ ನಿರ್ದೇಶಕ, ಉಪನ್ಯಾಸಕ ಕೃಷ್ಣ ಚೈತನ್ಯ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗಣಿತ ವಿಜ್ಞಾನ ಕಮ್ಮಟವನ್ನು ಕಳೆದ 6 ವರ್ಷಗಳಿಂದ ನಿರಂತರವಾಗಿ ನಡೆಸಿಕೊಂಡು ಬರುತ್ತಿದ್ದು, ಗಣಿತ, ವಿಜ್ಞಾನ ಶಿಕ್ಷಕರಿಗೆ, ವಿದ್ಯಾರ್ಥಿಗಳಿಗೆ ಬಹಳ ಅನುಕೂಲವಾಗಿದೆ. ಗಣಿತ ವಿಜ್ಞಾನ ಕಮ್ಮಟದಲ್ಲಿ ಮೂರು ಗೋಷ್ಠಿಗಳನ್ನು ಏರ್ಪಡಿಸಲಾಗಿದ್ದು, ಗೌರಬಿದನೂರಿನ ಸಹಾಯಕ ಪ್ರಾಧ್ಯಾಪಕ ಸುಪ್ರಿಯಾ ನಾಯಕ್ ಎಂ.ಕೆ., ಎ.ಎಸ್. ಕೆ.ವಿ.ಎಸ್. ಶರ್ಮ (ಕೊಳ್ಳೆಗಾಲ ಶರ್ಮ) ಹಾಗೂ ಬೆಂಗಳೂರಿನ ಪಿಇಎಸ್ ಕಾಲೇಜಿನ ಗಣಿತ ಉಪನ್ಯಾಸಕ ರಾಘವೇಂದ್ರ ಎಂ. ಅವರು ಆಗಮಿಸಲಿದ್ದು ವಿಶೇಷ ಉಪನ್ಯಾಸ ನೀಡಲಿದ್ದಾರೆ. ಈ ಕಮ್ಮಟದಲ್ಲಿ ಪಾಲ್ಗೊಳ್ಳಲು ಯಾವುದೇ ಶುಲ್ಕವಿಲ್ಲ. ಉಚಿತವಾಗಿ ಗಣಿತ, ವಿಜ್ಞಾನ ವಿಷಯದ ಬಗ್ಗೆ ಹೆಚ್ಚಿನ ಜ್ಞಾನ ತಿಳಿಯಬಯಸುವವರಿಗೆ ಈ ಕಮ್ಮಟ ಪ್ರಯೋಜನವಾಗಲಿದೆ. ಕಮ್ಮಟದಲ್ಲಿ ಪಾಲ್ಗೊಳ್ಳಲು ಕೇವಲ 50 ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿದ್ದು, ಕಮ್ಮಟದಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ನೀಡಲಾಗುವುದು ಎಂದರು. ಕಮ್ಮಟದ ಬಗ್ಗೆ ಹೆಚ್ಚಿನ ವಿವರಗಳಿಗೆ : 9742062000 ಗೆ ಸಂಪರ್ಕಿಸಲು ಕೋರಿದರು.

## ಅವ್ಯಂಗ ಫೌಂಡೇಶನ್ ಕೆಲಸ ಶ್ಲಾಘನೀಯ: ಸಿ.ಬಿ ಸುರೇಶ್ ಬಾಬು




**ಚಿಕ್ಕನಾಯಕನಹಳ್ಳಿ:** ತಮ್ಮ ಚಿತ್ರಕಲೆಯ ಮೂಲಕ ಸರ್ಕಾರಿ ಕನ್ನಡ ಶಾಲೆಗಳನ್ನು ಆಕರ್ಷಿಸುವಂತೆ ಮಾಡುತ್ತಿರುವ ಅವ್ಯಂಗ ಫೌಂಡೇಶನ್ ರವರ ಸೇವೆ ಎಲ್ಲರೂ ಮೆಚ್ಚುವಂಥದ್ದು ಎಂದು ಶಾಸಕ ಸಿಬಿ ಸುರೇಶ್ ಬಾಬು ಶ್ಲಾಘಿಸಿದರು.

ಪಟ್ಟಣದ ಪಿ.ಎಂ.ಶ್ರೀ. ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅವ್ಯಂಗ ಫೌಂಡೇಶನ್ ರವರು ಶಾಲೆ ಯ ಗೋಡೆಗಳ ಮೇಲೆ ವಿವಿಧ ಚಿತ್ರ ಗಳನ್ನು ಬಿಡಿಸಿದ ಸಂದರ್ಭದಲ್ಲಿ ಭೇಟಿ ನೀಡಿ ಮಾತನಾಡಿದ ಅವರು ನಿಮ್ಮ ಸಾಮಾಜಿಕ ಕಾಳಜಿ, ಸೇವಾ ಮನೋಭಾವ ಹಾಗೂ ಕಲಾತ್ಮಕ ಪ್ರತಿಭೆಯಿಂದ ಶಾಲೆಯ ಪರಿಸರವನ್ನು ಸ್ವಚ್ಛವಾಗಿ, ಸುಂದರವಾಗಿ ರೂಪಿಸಿ ಮಕ್ಕಳಲ್ಲಿ ಉತ್ತಮ ಸಂದೇಶ ಮೂಡಿಸಿದ ಅವ್ಯಂಗ್ ಫೌಂಡೇಶನ್ ಹಾಗೂ ತಂಡದ ಪ್ರತಿಯೊಬ್ಬರಿಗೂ ಹೃತ್ಪೂರ್ವಕ ಧನ್ಯವಾದಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆ ಯ ಸ್ಥಾಪಕಿ ಅಶ್ವಿನಿ ಮಾತನಾಡಿ ನಾವು ಪ್ರತಿ ತಿಂಗಳು ಒಂದು ದಿನ ರಾಜ್ಯದ ಯಾವುದಾದರು ಒಂದು ಸರ್ಕಾರಿ ಕನ್ನಡ ಶಾಲೆ ಯಲ್ಲಿ ಈ ರೀತಿಯ ಕೆಲಸ ಮಾಡುತ್ತಿದ್ದು ಇದರ ಉದ್ದೇಶ ಗ್ರಾಮೀಣ ಭಾಗದಲ್ಲಿ ನಮ್ಮ ಕನ್ನಡ ಶಾಲೆ ಗಳನ್ನು ಉಳಿಸುವುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಇನ್ಫೋಸಿಸ್ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಬೇರೆ ಬೇರೆ ವೃತ್ತಿ ಮಾಡುತ್ತಿರುವ ಸುಮಾರು 40 ಮಂದಿ ಭಾಗವಹಿಸಿ ಶಾಲಾ ಆವರಣವನ್ನು ಸ್ವಚ್ಛಗೊಳಿಸಿ , ಶಾಲೆಯ ಸುತ್ತಲಿನ ಕಂಪೌಂಡ್ ಗೋಡೆಗಳ ಮೇಲೆ ಮಕ್ಕಳಿಗೆ ಹಾಗೂ ಸಮಾಜಕ್ಕೆ ಉತ್ತಮ ಸದೇಶ ನೀಡುವ. ವಿಜ್ಞಾನ. ಗಣಿತ. ನಲಿ ಕಲಿ ಯ ಸುಂದರ ಚಿತ್ರಗಳನ್ನು ಬಿಡಿಸಿ, ಕಲೆಯ ಮೂಲಕ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಬಿ ಇ ಒ ಕಾಂತರಾಜ್ ಶಾಲೆಯ ಮುಖ್ಯೋಪಾಧ್ಯಾಯನಿ ಕವಿತಾ. ಎಸ್ ಡಿ ಎಂ ಸಿ ಉಪಾಧ್ಯಕ್ಷ ಮಂಜುನಾಥ್. ಸೇರಿದಂತೆ ಇತರರು ಇದ್ದರು.

## ಎಸ್ಎಸ್ಐಟಿಯಲ್ಲಿ ಆಧುನಿಕ ಬೋಧನಾ ವಿಧಾನಗಳ ಕುರಿತ ಕಾರ್ಯಾಗಾರ

## ಕವಲುದಾರಿಯಲ್ಲಿ ಉನ್ನತ ಶಿಕ್ಷಣ: ಡಾ.ಭಾನು ಪ್ರಶಾಂತ್ ಆತಂಕ

**ತುಮಕೂರು:** ವೇಗವಾಗಿ ಬೆಳೆಯುತ್ತಿರುವ ತಾಂತ್ರಿಕ ಬದಲಾವಣೆಗಳು, ಕೃತಕ ಬುದ್ಧಿಮತ್ತೆ ಮತ್ತು ಸಾಂಪ್ರದಾಯಿಕ ಪದವಿಗಳ ಆರ್ಥಿಕ ವೆಚ್ಚ ಮತ್ತು ನೈಜ-ಪ್ರಪಂಚದ ಮೌಲ್ಯದ ಬಗ್ಗೆ ಹೆಚ್ಚುತ್ತಿರುವ ಪ್ರಶ್ನೆಗಳಿಂದಾಗಿ ಉನ್ನತ ಶಿಕ್ಷಣವು ಇಂದು ಕವಲುದಾರಿಯಲ್ಲಿ ಸಾಗುತ್ತಿದೆ ಎಂದು ಬೆಂಗಳೂರಿನ ಬಿಎಂಎಸ್ ಇಂಜಿನಿಯರಿಂಗ್ ಕಾಲೇಜಿನ ಡೀನ್ ಹಾಗೂ ಪ್ರಾಧ್ಯಾಪಕರಾದ ಡಾ. ಎಸ್.ಬಿ.ಭಾನು ಪ್ರಶಾಂತ್ ಅವರು ಆತಂಕ ವ್ಯಕ್ತಪಡಿಸಿದರು.




ನಗರದ ಶ್ರೀ ಸಿದ್ಧಾರ್ಥ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಎಸ್‌ಎಸ್‌ಐಟಿ)ಯ ಕ್ಯಾಂಪಸ್‌ನ ಸರ್.ಎಂ.ವಿ.ಬ್ಲಾಕ್‌ನ ಜಿ.ಪಿ. ನೆಕ್ಸಸ್ ಸೆಮಿನಾರ್ ಹಾಲ್‌ನಲ್ಲಿ ಸಾಹೇ ವಿವಿ ಮತ್ತು ಆಂತರಿಕ ಗುಣಮಟ್ಟ ಭರವಸೆ ಘಟಕದ ವತಿಯಿಂದ ಗುರುವಾರ(ಇಂದು) ಹಮ್ಮಿಕೊಳ್ಳಲಾಗಿದ್ದ 'ನಾವಿನ್ಯತೆಯ ಬೋಧನಾ ವಿಧಾನಗಳ ಮೂಲಕ ಬೋಧನಾ ಶ್ರೇಷ್ಠತೆಯ ಉನ್ನತೀಕರಣ' ವಿಷಯ ಕುರಿತ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಹೇಗೆ ಕಲಿಯುತ್ತಾರೆ, ಪ್ರಾಧ್ಯಾಪಕರು ಹೇಗೆ ಕಲಿಸುತ್ತಾರೆ ಮತ್ತು ಕಾಲೇಜುಗಳ ಶೈಕ್ಷಣಿಕ ಪ್ರಾಮಾಣಿಕತೆಯನ್ನು ಹೇಗೆ ನಿರ್ವಹಿಸುತ್ತಾರೆ ಎಂಬುದನ್ನು ಕೃತಕ ಬುದ್ಧಿಮತ್ತೆ ಸಾಧನ-ಪರಿಕರಗಳು ಬದಲಾಯಿಸುತ್ತಿವೆ. ಹೂಡಿಕೆಯ ಮೇಲಿನ ವೆಚ್ಚ ಮತ್ತು ಲಾಭದಿಂದಾಗಿ ಪ್ರಮಾಣಿತ ಪದವಿಗೆ ಹೆಚ್ಚಿನ ಬೆಲೆಗೆ ಸಿಗದಂತ ವಾತಾವರಣ ನಿರ್ಮಾಣವಾಗುತ್ತಿದ್ದು, ಈ ನಿಟ್ಟಿನಲ್ಲಿ ಉಪನ್ಯಾಸಕರು ವಿದ್ಯಾರ್ಥಿಗಳಿಗೆ ಕಲಿಸುವ ಮುಂಚೆ ಸೃಜನಾತ್ಮಕ ಭೋದನೆ ಮತ್ತು ನೈಪುಣ್ಯಗಳ ಕಲಿಕೆ ಒತ್ತು ನೀಡುವ ಅಗತ್ಯವಿದೆ ಎಂದರು.

ವಿದ್ಯಾರ್ಥಿಗಳಿಗೆ ವಿದ್ಯೆಯನ್ನು ಕಲಿಸುವಾಗ ಯಾವುದೇ ಉದ್ದೇಶವನ್ನು ಇಟ್ಟುಕೊಳ್ಳದೆ ನಿಸ್ವಾರ್ಥವಾಗಿ ಕಲಿಸುವವನೇ ಉತ್ತಮವಾದ ಶಿಕ್ಷಕ. ಆಗ ವೃತ್ತಿ ಬದುಕು ಸಾರ್ಥಕವಾಗುತ್ತದೆ ಎಂದು ಡಾ. ಎಸ್.ಬಿ.ಭಾನು ಪ್ರಶಾಂತ್ ಅವರು ಪ್ರತಿಪಾದಿಸಿದರು.

ಕಾಲೇಜಿನ ಪ್ರಾಂಶುಪಾಲರಾದ ಎಂ ಎಂ ನಡಕಟ್ಟಿ ಮಾತನಾಡಿ, ಆಧುನಿಕ ಕಲಿಕಾ ಪ್ರವೃತ್ತಿಗಳು ಪ್ರಾಧ್ಯಾಪಕರಿಗೆ ಸವಾಲಾಗಿವೆ. ಇವುಗಳನ್ನು ಮೆಟ್ಟಿನಿಲ್ಲುವು ಸಾಮಾರ್ಥ್ಯವನ್ನು ಬೆಳೆಸಿಕೊಳ್ಳುವ ಅಗತ್ಯತೆ ಇಂದಿನದಾಗಿದೆ ಎಂದರು.

ಶೈಕ್ಷಣಿಕ ವಿಭಾಗದ ಡೀನ್ ಹಾಗೂ ಸೈಬರ್ ಸೆಕ್ಯುರಿಟಿ ವಿಭಾಗದ ಮುಖ್ಯಸ್ಥರಾದ ಡಾ. ರೇಣುಕಾಲತಾ ಅವರು ಮಾತನಾಡಿ ಪ್ರಾಯೋಗಿಕ ಕೌಶಲ್ಯಗಳು, ಡಿಜಿಟಲ್ ಸಾಕ್ಷರತೆ ಮತ್ತು ಉದ್ಯೋಗ ಆದ್ಯತೆಗಳನ್ನು ಗಮನದಲ್ಲಿಟ್ಟುಕೊಂಡು ಕಲಿಕೆಯ ಮೇಲೆ ವಿದ್ಯಾರ್ಥಿಗಳು ಹೆಚ್ಚು ಗಮನಹರಿಬೇಕು. ಅದೇ ರೀತಿ ಭೋದಕರು ತಮ್ಮ ವೃತ್ತಿಪರತೆಯಲ್ಲಿ ಪ್ರಗತಿ ಮತ್ತು ಬೋಧನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ವಿಚಾರ ಸಂಕಿರಣ ಮತ್ತು ಕಾರ್ಯಾಗಾರಗಳು ಉಪಯುಕ್ತವಾಗುತ್ತವೆ ಎಂದರು. ಸಾಹೇ ವಿವಿಯ ಆಂತರಿಕ ಗುಣಮಟ್ಟ ಭರವಸೆ ಘಟಕದ ಸಂಯೋಜ-ಕರಾದ ಡಾ.ಎಂ.ವಿ.ಚಿದಾನಂದ ಮೂರ್ತಿ, ಎಸ್‌ಎಸ್‌ಐಟಿಯ ಘಟಕ ಸಂಯೋಜಕರಾದ ಡಾ.ಟಿ.ಜಿ.ಕೇಶವಮೂರ್ತಿ. ಬೋಧಕರು ಮತ್ತು ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದರು. ತಾಂತ್ರಿಕ ಕ್ಷೇತ್ರದ ಸಂಪನ್ಮೂಲ ವ್ಯಕ್ತಿಗಳಿ ಉಪನ್ಯಾಸ ನೀಡಿ ಸಂವಾದದಲ್ಲಿ ಪಾಲ್ಗೊಂಡರು.

## ಸಂಕಷ್ಟ ಸಮಯದಲ್ಲಿ ಎಲ್ಲರೂ ಒಂದಾಗಬೇಕು



**ಬೆಂಗಳೂರು:** ನೇಪಾಳದಲ್ಲಿ ಬಹಳ ದೊಡ್ಡ ದುರಂತ ಆಗಿದೆ. ದೇವರ ದರ್ಶನಕ್ಕೆ ಹೋದವರು ಬಹಳ ಮಂದಿ ನಾಪತ್ತೆ ಆಗಿದ್ದಾರೆ. ನಮಗೆಲ್ಲರಿಗೂ ದುಃಖ ಆಗಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸಂಕಷ್ಟದ ಸಮಯದಲ್ಲಿ ನಾವೆಲ್ಲರೂ ಒಂದಾಗಿರಬೇಕು

ಭಾರತ ಸರ್ಕಾರ ನೇಪಾಳಕ್ಕೆ ಆದಷ್ಟು ಹೆಚ್ಚಿನ ಸಹಾಯ ಮಾಡಬೇಕಿದೆ ಎಂದರು.

ಪ್ರವಾಹದಲ್ಲಿ ಭಾರತೀಯರು ನಾಪತ್ತೆಯಾಗಿದ್ದವರನ್ನು ಹುಡುಕಿ ಮನೆಗೆ ಕಳಿಸಬೇಕು. ಶವಗಳನ್ನು ಹುಡುಕಿ ಅವರ ಮನೆಗೆ ಕಳಿಸಬೇಕು ಎಂದು ಹೇಳಿದರು.

ಪ್ರವಾಹದಲ್ಲಿ ಸತ್ತವರ ಕುಟುಂಬಕ್ಕೆ ತುಂಬಲಾರದ ನಷ್ಟ ಆಗಿದೆ ಎಂದು ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಸಚಿವ ಸಂಪುಟ ಸರ್ಜರಿ ಬಗ್ಗೆ ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿರುವ ಎಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಮುಖ್ಯಮಂತ್ರಿಗಳು ಇಲ್ಲೇ ಇದ್ದಾರೆ ಅವರನ್ನೇ ಈ ಬಗ್ಗೆ ಕೇಳಿ ಎಂದು ಹೇಳಿ ಈ ಬಗ್ಗೆ ಹೆಚ್ಚು ಮಾತನಾಡಲಿಲ್ಲ.

# ರಾಜ್ಯದ 101 ತಾಲ್ಲೂಕುಗಳಲ್ಲಿ ಬರ

**ಬೆಂಗಳೂರು:** ರಾಜ್ಯ ಸರ್ಕಾರ ಮೊದಲ ಹಂತದಲ್ಲಿ 101 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ರಾಜ್ಯ ಬರಪರಿಸ್ಥಿತಿ ಮಳೆ ಕೊರತೆ ಎಲ್ಲದರ ಬಗ್ಗೆಯೂ ವಿವರ ನೀಡಿದ್ದ ಉಪಮುಖ್ಯಮಂತ್ರಿ, ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ್ ಅವರು ರಾಜ್ಯದಲ್ಲಿ ಮಳೆ ಕೊರತೆಯಾಗಿ ತೀವ್ರ ಬರ ಪರಿಸ್ಥಿತಿ ಎದುರಾಗಿದೆ. ಮೊದಲ ಹಂತದಲ್ಲಿ 101 ತಾಲ್ಲೂಕುಗಳನ್ನು ಬರ ಪೀಡಿತ ಎಂದು ಘೋಷಿಸಿದ್ದೇವೆ ಎಂದರು.

ಇವುಗಳಲ್ಲಿ 89 ತಾಲ್ಲೂಕುಗಳಲ್ಲಿ ತೀವ್ರ ಬರ ಹಾಗೂ 12 ತಾಲ್ಲೂಕುಗಳಲ್ಲಿ ಸಾಧಾರಣ ಬರ ಇದೆ. ಪ್ರತಿ 15 ದಿನಕ್ಕೊಮ್ಮೆ ಪರಿಸ್ಥಿತಿಯನ್ನು ಅವಲೋಕಿಸಿ ಬರ ತಾಲ್ಲೂಕುಗಳನ್ನು ಘೋಷಣೆ ಮಾಡಲಾಗುವುದು ಎಂದರು.

ರಾಜ್ಯ ಸರ್ಕಾರ ಬರ ಪರಿಸ್ಥಿತಿಯನ್ನು ಎದುರಿಸಲು ಸಂಪೂರ್ಣ ಸಜ್ಜಾಗಿದೆ. ಈ ಭಾರೀ ಮಳೆ ಕೊರತೆಯಿಂದ ಕೃಷಿ ಕ್ಷೇತ್ರಕ್ಕೆ ದೊಡ್ಡ ಹೊಡೆತ ಬಿದ್ದಿದೆ ಎಂದು ಹೇಳಿದರು.

ರಾಜ್ಯದಲ್ಲಿ ಈ ವರ್ಷ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದು, ದಕ್ಷಿಣ ಒಳನಾಡಿನಲ್ಲಿ ಶೇ. 41, ಮಲೆನಾಡಿನಲ್ಲಿ ಶೇ. 35, ಉತ್ತರ ಒಳನಾಡಿನಲ್ಲಿ ಶೇ. 31, ಕರಾವಳಿ ಭಾಗದಲ್ಲಿ ಶೇ. 24 ರಷ್ಟು ಮಳೆ ಕೊರತೆಯಾಗಿದೆ ಎಂದು ಪರಮೇಶ್ವರ್ ಮಾಹಿತಿ ನೀಡಿದರು. ಮುಂದಿನ ದಿನಗಳಲ್ಲಿ ರಾಜ್ಯದ 2069 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದು ಎಂದು ಅಂದಾಜಿಸಲಾಗಿದ್ದು, ಪ್ರಸ್ತುತ 758 ಗ್ರಾಮಗಳಿಗೆ 149 ಟ್ಯಾಂಕರ್ ಗಳ ಮೂಲಕ ಕುಡಿಯುವ ನೀರು ಪೂರೈಸಲಾಗುತ್ತಿದೆ ಎಂದರು.

ರಾಜ್ಯದ ಬರ ಪರಿಸ್ಥಿತಿಯ ಬಗ್ಗೆ ಶೀಘ್ರದಲ್ಲೇ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೃಷಿ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಅವರನ್ನು ಭೇಟಿ ಮಾಡಿ ರಾಜ್ಯಕ್ಕೆ ಹೆಚ್ಚಿನ ನೆರವು ನೀಡುವಂತೆ ಕೋರಲಾಗುವುದು ಎಂದರು.

ರಾಜ್ಯದ 29 ಜಿಲ್ಲೆಗಳ 190 ತಾಲ್ಲೂಕುಗಳು ಮಳೆ ಕೊರತೆ ಮತ್ತು ತೀವ್ರ ಮಳೆ ಕೊರತೆಯ ವ್ಯಾಪ್ತಿಯಲ್ಲಿದ್ದು, 12 ತಾಲ್ಲೂಕುಗಳು ಅತ್ಯಂತ ಭೀಕರ ಮಳೆ ಅಭಾವವನ್ನು ಎದುರಿಸುತ್ತಿವೆ. ಆಗಸ್ಟ್ 26ರ ವೇಳೆಗೆ ಸತತ 3 ಅಥವಾ ಅದಕ್ಕಿಂತ ಹೆಚ್ಚು ವಾರಗಳ ಕಾಲ ಮಳೆಯಿಲ್ಲದೆ ಒಣಹವೆ ಅನುಭವಿಸಿದ 134 ತಾಲ್ಲೂಕುಗಳು ಕೇಂದ್ರದ ?ಟ್ರಿಗರ್-1? ಮಾನದಂಡದಡಿ ಮೌಲ್ಯಮಾಪನಕ್ಕೆ ಅರ್ಹತೆ ಪಡೆದಿವೆ. ಕೇಂದ್ರದ ಕೈ ಪಿಡಿಯಲ್ಲಿರುವ ಕೆಲ ತೊಡಕುಗಳಿಂದಾಗಿ ಬರ ಘೋಷಣೆಗೆ ತೊಡಕಾಗುತ್ತಿದ್ದು, ನಿಯಮ ತಿದ್ದುಪಡಿಗೆ ಕೇಂದ್ರವನ್ನು ಒತ್ತಾಯಿಸಲಾಗುತ್ತಿದೆ.ರಾಜ್ಯದಲ್ಲಿ ಆಗಸ್ಟ್ 21 ರವರೆಗಿನ ಅಂಕಿಅಂಶಗಳಂತೆ 84.10 ಲಕ್ಷ ಹೆಕ್ಟೇರ್ ಪೈಕಿ ಕೇವಲ 60 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ (ಶೇ. 71) ಮಾತ್ರ ಬಿತ್ತನೆಯಾಗಿದೆ

ಒಟ್ಟು 240 ತಾಲ್ಲೂಕುಗಳ ಪೈಕಿ 104 ತಾಲ್ಲೂಕುಗಳಲ್ಲಿ ಶೇ. 75ಕ್ಕಿಂತ ಕಡಿಮೆ ಬಿತ್ತನೆಯಾಗಿದ್ದರೆ, 42 ತಾಲ್ಲೂಕುಗಳಲ್ಲಿ ಶೇ. 25ಕ್ಕಿಂತಲೂ ಕಡಿಮೆ ಬಿತ್ತನೆಯಾಗಿದೆ.



ಮೆಕ್ಕೆಜೋಳ (ಶೇ. 84), ತೊಗರಿ (ಶೇ. 89), ಭತ್ತ (ಶೇ. 60), ರಾಗಿ (ಶೇ. 57) ಮತ್ತು ಶೇಂಗಾ (ಶೇ. 34). 4.36 ಲಕ್ಷ ಹೆಕ್ಟೇರ್ ಪೈಕಿ 3.04 ಲಕ್ಷ ಹೆಕ್ಟೇರ್‌ಗಳಲ್ಲಿ (ಶೇ. 69) ಮಾತ್ರ ಬಿತ್ತನೆಯಾಗಿದೆ.

ಮಳೆಯ ಅಭಾವದಿಂದಾಗಿ 178 ತಾಲ್ಲೂಕುಗಳಲ್ಲಿ ಮಣ್ಣಿನ ತೇವಾಂಶ ತೀವ್ರವಾಗಿ ಕುಸಿದಿದ್ದು, 165 ತಾಲ್ಲೂಕುಗಳಲ್ಲಿ ಸಸ್ಯವರ್ಗಗಳು ಒಣಗುತ್ತಿರುವುದು ಉಪಗ್ರಹ ಸಮೀಕ್ಷೆಯಿಂದ ದೃಢಪಟ್ಟಿದೆ. ಭಾರತೀಯ ಮತ್ತು ಜಾಗತಿಕ ಹವಾಮಾನ ಸಂಸ್ಥೆಗಳ ಮುನ್ಸೂಚನೆಯಂತೆ ನೈರುತ್ಯ ಮುಂಗಾರಿನ ದ್ವಿತೀಯಾರ್ಧದಲ್ಲೂ (ಆಗಸ್ಟ್-ಸೆಪ್ಟೆಂಬರ್) ವಾಡಿಕೆಗಿಂತ ಕಡಿಮೆ ಮಳೆಯಾಗಲಿದೆ ಎಂದು ತಿಳಿಸಿದರು.

ಕುಡಿಯುವ ನೀರು ಸರಬರಾಜು: ರಾಜ್ಯದ 758 ಗ್ರಾಮಗಳಿಗೆ 149 ಟ್ಯಾಂಕರ್‌ಗಳು ಹಾಗೂ 714 ಖಾಸಗಿ ಕೊಳವೆಬಾವಿಗಳ ಮೂಲಕ ಕುಡಿಯುವ ನೀರು ನೀಡಲಾಗುತ್ತಿದೆ. ನಗರ ಪ್ರದೇಶದ 18 ಸ್ಥಳೀಯ ಸಂಸ್ಥೆಗಳ 114 ವಾರ್ಡ್‌ಗಳಿಗೆ 48 ಟ್ಯಾಂಕರ್‌ಗಳನ್ನು ಬಳಸಲಾಗುತ್ತಿದೆ. ಮುಂದಿನ ಬೇಸಿಗೆಯಲ್ಲಿ 2,059 ಗ್ರಾಮ ಪಂಚಾಯತಿಗಳಲ್ಲಿ ನೀರಿನ ಸಮಸ್ಯೆ ಎದುರಾಗಬಹುದು ಎಂದು ಅಂದಾಜಿಸಿ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

ಕಳೆದ ವರ್ಷ ಈ ವೇಳೆಗೆ 815.70 ಟಿಎಂಸಿ ನೀರಿತ್ತು. ಈ ವರ್ಷ ಕೇವಲ 684.09 ಟಿಎಂಸಿ ನೀರು ಸಂಗ್ರಹವಾಗಿದೆ. 132 ತಾಲ್ಲೂಕುಗಳಲ್ಲಿ ಅಂತರ್ಜಲ ಮಟ್ಟ ಭೀಕರವಾಗಿ ಕುಸಿದಿದೆ. ಪ್ರಸ್ತುತ 151 ಲಕ್ಷ ಟನ್ ಮೇವು ಲಭ್ಯವಿದ್ದು, 33 ವಾರಗಳಿಗೆ ಸಾಕಾಗಲಿದೆ. ಆದರೆ 18 ತಾಲ್ಲೂಕುಗಳಲ್ಲಿ 20 ವಾರಗಳಿಗಿಂತ ಕಡಿಮೆ ಮೇವಿದೆ. ಮೇವು ಬೆಳೆಯಲು ರೈತರಿಗೆ ಕಿಟ್‌ಗಳನ್ನು ನೀಡಲು ಸರ್ಕಾರ 25 ಕೋಟಿ ರೂ. ಬಿಡುಗಡೆ ಮಾಡಿದೆ. ಸರ್ಕಾರದ ಪರಿಹಾರ ಕಾಯಾಚರಣೆ ಮತ್ತು ಅನುದಾನ ಅನುದಾನ ಬಿಡುಗಡೆ: ಕುಡಿಯುವ ನೀರಿನ ಪೂರೈಕೆಗಾಗಿ 31 ಜಿಲ್ಲೆಗಳಿಗೆ 117 ಕೋಟಿ ರೂ. ಮತ್ತು 189 ಗ್ರಾಮೀಣ ಕ್ಷೇತ್ರಗಳಿಗೆ ತಲಾ 1 ಕೋಟಿ ರೂ. ನಂತೆ ಒಟ್ಟು 306 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಬರ ಎದುರಿಸಲು ಹಣದ ಕೊರತೆಯಿಲ್ಲ.

ದಾಖಲೆ ಮಟ್ಟದ 49 ಲಕ್ಷ ರೈತರು ಫಸಲ್ ಬಿಮಾ ಯೋಜನೆಯಡಿ ನೋಂದಾಯಿಸಿಕೊಂಡಿದ್ದಾರೆ. ಮಳೆ ಅಭಾವದಿಂದ ಬಿತ್ತನೆ ಮಾಡಲು ಯವಾಗದ ರೈತರಿಗೆ ಕ್ಯಾಟಗರಿಯಡಿ ಪರಿಹಾರ ಪಡೆಯಲು ಅವಕಾಶವಿದ್ದು, ಅರ್ಜಿ ಸಲ್ಲಿಕೆಯ ಅಂತಿಮ ದಿನಾಂಕವನ್ನು ಆಗಸ್ಟ್ 31ರವರೆಗೆ ವಿಸ್ತರಿಸಲಾಗಿದೆ. ಗುಳೆ ಹೋಗುವುದನ್ನು ತಡೆಯಲು ವಿಬಿ ಜಿ ರಾಮ್ ಜಿ ಯೋಜನೆಯಡಿ 16,460 ಕಾಮಗಾರಿಗಳನ್ನು ಕೈಗೆತ್ತಿಕೊಂಡು 66.73 ಲಕ್ಷ ಮಾನವ ದಿನಗಳನ್ನು ಸೃಜಿಸಲಾಗಿದೆ ಎಂದು ಮಾಹಿತಿ ನೀಡಿದರು,

1876-78ರ ಭೀಕರ ಬರಗಾಲದಲ್ಲಿ ಬ್ರಿಟಿಷರು ಇಲ್ಲಿನ ಆಹಾರ ಧಾನ್ಯಗಳನ್ನು ಒಯ್ದಿದ್ದರಿಂದ ಭಾರತದಲ್ಲಿ ಸುಮಾರು 60 ಲಕ್ಷದಿಂದ 1 ಕೋಟಿ ಜನರು ಮೃತಪಟ್ಟಿದ್ದರು. ಆದರೆ ಸ್ವತಂತ್ರ ಭಾರತದಲ್ಲಿ ನಾಗರಿಕ ಸರ್ಕಾರಗಳಿರುವುದರಿಂದ ಜನ ಮತ್ತು ಜಾನುವಾರುಗಳ ರಕ್ಷಣೆ ನಮ್ಮ ಮೊದಲ ಆದ್ಯತೆಯಾಗಿದೆ.

ದಕ್ಷಿಣ ಭಾರತದಾದ್ಯಂತ ಮಳೆ ಕೊರತೆ ಇರುವುದರಿಂದ ನೀರಿನ ಆಸರೆ ಇರುವ ರೈತರು ಹೆಚ್ಚಿನ ಪ್ರಮಾಣದಲ್ಲಿ ಮೇವು ಬೆಳೆಯಬೇಕೆಂದು ಸರ್ಕಾರ ಮನವಿ ಮಾಡಿದೆ.

## ಬರ ಘೋಷಣೆಯ ಮಾನದಂಡ ಮತ್ತು ತಾಲ್ಲೂಕುಗಳ ವಿಂಗಡಣೆ

**ಕೇಂದ್ರ ಸರ್ಕಾರದ ಬರ ಕೈಪಿಡಿ 2020 ನಿಯಮಾವಳಿಯಂತೆ ಬರ ಘೋಷಿಸಲು ಎರಡು ಪ್ರಮುಖ ಟ್ರಿಗರ್ ಪಾಯಿಂಟ್‌ಗಳ ಆಧಾರದಲ್ಲಿ ಗ್ರೌಂಡ್ ಟ್ರೂಥಿಂಗ್ (ಸ್ಥಳ ಪರಿಶೀಲನೆ) ನಡೆಸಲಾಗಿದೆ ಎಂದು ತಿಳಿದರು. ಪ್ರತಿ 15 ದಿನಗಳಿಗೊಮ್ಮೆ ಸಮಗ್ರ ಬರ ಮೌಲ್ಯಮಾಪನ ನಡೆಯುತ್ತಿದ್ದು, ಬಾಕಿ ಇರುವ 32 ತಾಲ್ಲೂಕುಗಳನ್ನು ಪರಿಶೀಲಿಸಿ ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಬರಪೀಡಿತ ಪ್ರದೇಶವೆಂದು ಘೋಷಿಸಲಾಗುವುದು ಎಂದು ಉಪಮುಖ್ಯ ಮಂತ್ರಿ ಡಾ,ಪರಮೇಶ್ವರ್ ತಿಳಿಸಿದರು.**

## ಖಾಲಿ ನಿವೇಶನ ಸ್ವಚ್ಛತೆ ಅಭಿಯಾನಕ್ಕೆ ಚಾಲನೆ: ಮಾಲೀಕರಿಂದಲೇ ವೆಚ್ಚ ವಸೂಲಿ

**ಬೆಂಗಳೂರು:** ನಗರವನ್ನು ಸ್ವಚ್ಛ ಹಾಗೂ ಸುಂದರವಾಗಿಸುವ ನಿಟ್ಟಿನಲ್ಲಿ ಖಾಲಿ ನಿವೇಶನಗಳ ಸ್ವಚ್ಛತಾ ಅಭಿಯಾನಕ್ಕೆ ಗುರುವಾರ ಅಧಿಕೃತ ಚಾಲನೆ ದೊರೆಯಿತು. ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ನೇತೃತ್ವದಲ್ಲಿ ಶಾಂತಿನಗರ ವಿಧಾನಸಭಾ ಕ್ಷೇತ್ರದ ದೊಮ್ಮಲೂರು ವಾರ್ಡ್‌ನಲ್ಲಿ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಭೌಗೋಳಿಕನಕ್ಷೆ ಅನ್ವೇಷಿಸಿ



ನೋಟಿಸ್ ನೀಡಿದರೂ ಸ್ವಚ್ಛಗೊಳಿಸದೇ ಗಿಡಗಂಟಿಗಳು ಬೆಳೆದು ನಿಂತಿದ್ದ ಖಾಲಿ ನಿವೇಶನಕ್ಕೆ ಅಧಿಕಾರಿಗಳು ತೆರಳಿ, ಗೇಟ್ ಬೀಗ ತೆರೆಯಿಸಿ ಜೆಸಿಬಿ ಮೂಲಕ ಸ್ವಚ್ಛತಾ ಕಾರ್ಯ ಕೈಗೊಂಡರು. ಸುಮಾರು 100ಘಿ100 ಅಡಿ ವಿಸ್ತೀರ್ಣದ ನಿವೇಶನದಲ್ಲಿ ಗಿಡಗಂಟಿಗಳನ್ನು ತೆರವುಗೊಳಿಸಿ ಸ್ವಚ್ಛತೆ ನಡೆಸಲಾಯಿತು.ನಗರದ ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಈಗಾಗಲೇ 400ಕ್ಕೂ ಹೆಚ್ಚು ಖಾಲಿ ನಿವೇಶನ ಮಾಲೀಕರಿಗೆ ನೋಟಿಸ್ ನೀಡಲಾಗಿದೆ. ನೋಟಿಸ್ ಮತ್ತು ಎಚ್ಚರಿಕೆಯ ಬಳಿಕವೂ ಸ್ವಚ್ಛತೆ ಮಾಡದ ನಿವೇಶನಗಳನ್ನು ಇನ್ನು ಮುಂದೆ ಜಿಬಿಎ ವತಿಯಿಂದಲೇ ಸ್ವಚ್ಛಗೊಳಿಸಲಾಗುತ್ತದೆ.ಸ್ವಚ್ಛತಾ ಕಾರ್ಯ ಹಾಗೂ ತ್ಯಾಜ್ಯ ಸಾಗಾಣಿಕೆಗೆ ಆಗುವ ಸಂಪೂರ್ಣ ವೆಚ್ಚವನ್ನು ಸಂಬಂಧಪಟ್ಟ ನಿವೇಶನ ಮಾಲೀಕರಿಂದಲೇ ವಸೂಲಿ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಮಾಲೀಕರು ವೆಚ್ಚ ಪಾವತಿಸದಿದ್ದರೆ, ಮುಂದಿನ ವರ್ಷ ಕಟ್ಟಡ ತೆರಿಗೆ ವಸೂಲಿ ಸಂದರ್ಭದಲ್ಲಿ ಕ್ಲೀನಿಂಗ್ ಚಾರ್ಜ್ ಅನ್ನು ತೆರಿಗೆಗೆ ಸೇರಿಸಿ ವಸೂಲಿ ಮಾಡುವ ವ್ಯವಸ್ಥೆ ಮಾಡಲಾಗುತ್ತದೆ.ನಿವೇಶನದ ಅಳತೆಗೆ ಅನುಗುಣವಾಗಿ ಶುಲ್ಕ 2030 ಅಡಿ ನಿವೇಶನಕ್ಕೆ ಸ್ವಚ್ಛತಾ ವೆಚ್ಚ 6,700ರಿಂದ ಆರಂಭವಾಗಲಿದ್ದು, ತಡೆಗೋಡೆ ಇದ್ದಲ್ಲಿ ಹೆಚ್ಚುವರಿ ವೆಚ್ಚ ವಿಧಿಸಲಾಗುತ್ತದೆ. ತ್ಯಾಜ್ಯ ಸಾಗಾಣಿಕೆಗೆ ಪ್ರತ್ಯೇಕ ಶುಲ್ಕ ನಿಗದಿಯಾಗಿದೆ. ದೊಡ್ಡ ನಿವೇಶನಗಳಿಗೆ ವೆಚ್ಚವೂ ಹೆಚ್ಚಾಗಲಿದ್ದು, 5080 ಅಡಿ ನಿವೇಶನದ ತ್ಯಾಜ್ಯ ಸಾಗಾಣಿಕೆಗೆ ಬರೋಬ್ಬರಿ 1.28 ಲಕ್ಷದವರೆಗೆ ವೆಚ್ಚ ನಿಗದಿಪಡಿಸಲಾಗಿದೆ. ಇದಕ್ಕಿಂತ ಹೆಚ್ಚಿನ ವಿಸ್ತೀರ್ಣದ ನಿವೇಶನಗಳಿಗೆ ಅಳತೆಗೆ ಅನುಗುಣವಾಗಿ ಶುಲ್ಕ ವಿಧಿಸಲಾಗುತ್ತದೆ. ಈ ಕುರಿತು ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ, ಜುಲೈ 15ರಿಂದ ಸಾರ್ವಜನಿಕ ಹಾಗೂ ಖಾಸಗಿ ಸ್ಥಳಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಮನವಿ ಮಾಡಲಾಗಿತ್ತು ಎಂದು ತಿಳಿಸಿದರು ?ನಮ್ಮ ಮನವಿಗೆ ಸ್ಪಂದಿಸಿ ಸಾವಿರಾರು ಜನ ತಮ್ಮ ಸೈಟ್‌ಗಳನ್ನು ಸ್ವಚ್ಛಗೊಳಿಸಿದ್ದಾರೆ. ಅವರಿಗೆ ಧನ್ಯವಾದಗಳು. ಆದರೆ ಪದೇ ಪದೇ ಮನವಿ ಮಾಡಿದರೂ ಹಲವರು ಸ್ವಚ್ಛತೆ ಮಾಡಿಲ್ಲ. ಅವರಿಗೆ ಆಗಸ್ಟ್ 23ರವರೆಗೆ ಸಮಯ ನೀಡಿದ್ದೆವು. ಈಗ ನಾವು ಕೊಟ್ಟ ಮಾತಿನಂತೆ ಸ್ವಚ್ಛಗೊಳಿಸಲು ಮುಂದಾಗಿದ್ದೇವೆ? ಎಂದು ಹೇಳಿದರು. ನಗರದಾದ್ಯಂತ ಈಗಾಗಲೇ ಸುಮಾರು 67 ಸಾವಿರ ಟನ್ ಡೆಬ್ರಿಸ್ ಮತ್ತು ತ್ಯಾಜ್ಯವನ್ನು ತೆರವುಗೊಳಿಸಲಾಗಿದೆ ಎಂದು ತಿಳಿಸಿದ ಅವರು, ಬಿಬಿಎಂಪಿ/ಜಿಬಿಎ, ಬಿಡಿಎ, ಬೆಸ್ಕಾಂ ಮತ್ತು ಮೆಟ್ರೊ ಸೇರಿದಂತೆ ವಿವಿಧ ಸಂಸ್ಥೆಗಳು ಸ್ವಚ್ಛತಾ ಕಾರ್ಯಕ್ಕೆ ಕೈಜೋಡಿಸಿರುವುದಾಗಿ ಹೇಳಿದರು ಖಾಲಿ ನಿವೇಶನವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಮಾಲೀಕರ ಕರ್ತವ್ಯವಾಗಿದ್ದು, ಇದಕ್ಕೆ *ಜಿಬಿಎ ಕಾಯ್ದೆಯ ಸೆಕ್ಷನ್ 290 ಹಾಗೂ 274(1)*ರಲ್ಲಿ ಕಾನೂನು ಅವಕಾಶವಿದೆ ಎಂದು ಸಚಿವರು ಸ್ಪಷ್ಟಪಡಿಸಿದರು. ?ಸ್ವಚ್ಛತಾ ಶುಲ್ಕ ಜಾಸ್ತಿ ಎಂದು ಅನಿಸಿದರೆ ಜಿಬಿಎ ಸಿಬ್ಬಂದಿ ಬರುವ ಮುನ್ನವೇ ನಿಮ್ಮ ಸೈಟ್ ಅನ್ನು ನೀವೇ ಸ್ವಚ್ಛಗೊಳಿಸಿಕೊಳ್ಳಿ. ನಮಗೂ ತೊಂದರೆ ಬೇಡ, ನಿಮಗೂ ಹೆಚ್ಚುವರಿ ಖರ್ಚು ಬೇಡ. ಮೊದಲ ಬಾರಿಗೆ ದಂಡ ವಿಧಿಸುವುದಿಲ್ಲ, ಸ್ವಚ್ಛತೆಗೆ ಆಗಿರುವ ನಿಜವಾದ ವೆಚ್ಚವನ್ನು ಮಾತ್ರ ಪಡೆಯಲು ಸೂಚಿಸಿದ್ದೇನೆ? ಎಂದು ಕೃಷ್ಣ ಬೈರೇಗೌಡ ಹೇಳಿದರು.

ಖಾಲಿ ನಿವೇಶನಗಳಲ್ಲಿ ಗಿಡಗಂಟಿ ಬೆಳೆಸಿ ನಿರ್ಲಕ್ಷ್ಯ ಮಾಡುವ ಮಾಲೀಕರ ವಿರುದ್ಧ ಜಿಬಿಎ ಈಗ ಕಠಿಣ ಕ್ರಮಕ್ಕೆ ಮುಂದಾಗಿದೆ. ಇಂದಿನಿಂದ ಸ್ವಚ್ಛತೆ ಮಾಡದಿದ್ದರೆ ಜಿಬಿಎಯೇ ಸೈಟ್ ಕ್ಲೀನ್ ಮಾಡಲಿದೆ; ಅದರ ಸಂಪೂರ್ಣ ವೆಚ್ಚ ಮಾಲೀಕರ ಜೇಬಿನಿಂದಲೇ ವಸೂಲಾಗಲಿದೆ. ನಗರ ಸ್ವಚ್ಛತೆಗೆ ಸಾರ್ವಜನಿಕರ ಸಹಕಾರ ಅಗತ್ಯ ಎಂಬ ಸಂದೇಶದೊಂದಿಗೆ ಐದು ನಗರ ಪಾಲಿಕೆಗಳಲ್ಲೂ ಅಭಿಯಾನ ಆರಂಭವಾಗಿದೆ.

## 80 ಸೇತುವೆಗಳು ಹಾನಿ, 40 ಕಿ.ಮೀ ರಸೆಗಳು ನಾಶ

**ನೇಪಾಳದ:** ರಸುವಾ ಜಿಲ್ಲೆಯ ಭೋಟೆ ಕೋಶಿ ನದಿಯಲ್ಲಿ ಸಂಭವಿಸಿದ ಭೀಕರ ಪ್ರವಾಹದಲ್ಲಿ ಹಲವಾರು ಜೀವಹಾನಿ ಸಂಭವಿಸಿದೆ ಎಂದು ನೇಪಾಳಿ ಪತ್ರಿಕೆಗಳು ವರದಿ ಮಾಡಿದ್ದು, ದುರಂತದ ಪ್ರಮಾಣ ಹಿಮಾಲಯ ರಾಷ್ಟ್ರದಾದ್ಯಂತ ಹಾನಿಯನ್ನು ಹೆಚ್ಚಿಸುತ್ತಿದೆ.

ದುರಂತದ ತೀವ್ರತೆಯ ಪರಿಣಾಮವನ್ನು ಪ್ರತಿಬಿಂಬಿಸುತ್ತಾ, ಸ್ಥಳೀಯರೊಬ್ಬರು ಂಓಖ ಜೊತೆ ಮಾತನಾಡಿದ್ದು, "ಪ್ರವಾಹ ಚೀನಾದ ಗಡಿಯಲ್ಲಿರುವ ಚಿತ್ವಾನ್‌ವರೆಗಿನ ಪ್ರದೇಶಗಳ ಮೇಲೆ ಪರಿಣಾಮ ಬೀರಿದೆ. ಸರ್ಕಾರ ಪರಿಹಾರ ಕಾರ್ಯಗಳನ್ನು ನಡೆಸುತ್ತಿದೆ; ಅನೇಕ ಶವಗಳು ಪತ್ತೆಯಾಗಿವೆ. ನೇಪಾಳ ತೀವ್ರವಾಗಿ ಬಳಲುತ್ತಿದೆ. 200 ಪ್ರವಾಸಿಗರು ಸಹ ಕಾಣೆಯಾಗಿದ್ದಾರೆ ಎಂದು ನಾನು ಕೇಳಿದ್ದೇನೆ. ಇದು ನಿಜಕ್ಕೂ ನೋವಿನ ಘಟನೆ. ನಮ್ಮ ನೆರೆಯ ರಾಷ್ಟ್ರಗಳು ನೇಪಾಳಕ್ಕೆ ಸಹಾಯ ಮಾಡುತ್ತವೆ ಎಂದು ನಾವು ಭಾವಿಸುತ್ತೇವೆ." ಎಂದು ಹೇಳಿದ್ದಾರೆ. ಮೇಲ್ಭಾಗದ ಹಿಮಾಲಯ ಕಣಿವೆಗಳು ಹಠಾತ್ ಪ್ರವಾಹದ ವಿನಾಶಕಾರಿ ಪರಿಣಾಮಗಳನ್ನು ಎದುರಿಸುತ್ತಿದ್ದರೂ, ರಾಜಧಾನಿಯಲ್ಲಿನ ಜೀವನ ನೇರ ಪ್ರವಾಹದಿಂದ ತುಲನಾತ್ಮಕವಾಗಿ ತೊಂದರೆಗೊಳಗಾಗದೆ ಉಳಿದಿದೆ. ವಿಪತ್ತಿಗೆ ಅಧಿಕೃತ ಸಂದರ್ಭವನ್ನು ಒದಗಿಸುತ್ತಾ, ಭೋಟೆ ಕೋಶಿ ನದಿಯ ಉದ್ದಕ್ಕೂ ಪ್ರಬಲವಾದ ಉಲ್ಬಣ ನೇಪಾಳವನ್ನು ಭಾರಿ ಹಠಾತ್ ಪ್ರವಾಹಕ್ಕೆ ಸಿಲುಕಿಸಿತು, ಇದರ ಪರಿಣಾಮವಾಗಿ ವ್ಯಾಪಕ ಸ್ಥಳಾಂತರ ಮತ್ತು ಮನೆಗಳು, ರಸ್ತೆಗಳು, ಸೇತುವೆಗಳು, ಜಲವಿದ್ಯುತ್ ಸೌಲಭ್ಯಗಳು ಮತ್ತು ಇತರ ನಿರ್ಣಾಯಕ ಮೂಲಸೌಕರ್ಯಗಳಿಗೆ ವ್ಯಾಪಕ ಹಾನಿಯಾಗಿದೆ.



ನೇಪಾಳ ರಾಯಭಾರ ಕಚೇರಿಯ ಮೂಲಗಳು, "ಇಲ್ಲಿಯವರೆಗೆ 175 ಶವಗಳನ್ನು ಹೊರತೆಗೆಯಲಾಗಿದೆ, ಆದರೆ ಸ್ಥಳೀಯರು ಮತ್ತು ಪ್ರವಾಸಿಗರು ಇಬ್ಬರೂ ಸೇರಿದಂತೆ ಅನೇಕ ಜನರು ಇನ್ನೂ ಕಾಣೆಯಾಗಿದ್ದಾರೆ. ಇತ್ತೀಚಿನ ಲಭ್ಯವಿರುವ ಮಾಹಿತಿಯ ಪ್ರಕಾರ, 28 ದೇಶಗಳಿಂದ 476 ಜನರು ಕಾಣೆಯಾಗಿದ್ದಾರೆ ಎಂದು ವರದಿಯಾಗಿದೆ. ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಗಳು ಮುಂದುವರೆದಂತೆ ಈ ಅಂಕಿ-ಅಂಶಗಳು ಪರಿಶೀಲನೆಗೆ ಒಳಪಟ್ಟಿವೆ." ಈ ದುರಂತ 35 ವಾಹನ ಸಂಚಾರಕ್ಕೆ ಯೋಗ್ಯವಾದ ಸೇತುವೆಗಳು, 45 ತೂಗು ಸೇತುವೆಗಳು ಮತ್ತು 40 ಕಿಲೋಮೀಟರ್‌ಗಳಷ್ಟು ಸುಸಜ್ಜಿತ ರಸ್ತೆಗಳಿಗೆ ತೀವ್ರವಾಗಿ ಹಾನಿಯನ್ನುಂಟುಮಾಡಿದೆ, ಸಮಗ್ರ ನಷ್ಟದ ದತ್ತಾಂಶ ಸಂಗ್ರಹ ಮುಂದುವರೆದಿದೆ.

ಇದಕ್ಕೆ ಪ್ರತಿಕ್ರಿಯೆಯಾಗಿ, ನೇಪಾಳ ಪ್ರಧಾನ ಮಂತ್ರಿಗಳ ಕಚೇರಿ, ತಿಮುರೆ ಮತ್ತು ಸಯಾಪ್ರುಬೆಸಿಯಲ್ಲಿ ಸಿಲುಕಿರುವ ವ್ಯಕ್ತಿಗಳನ್ನು ತಲುಪಲು ರಾತ್ರಿಯಿಡೀ ಕಾರ್ಯಾಚರಣೆ ನಡೆಸಿದ ನೇಪಾಳ ಸೇನೆ, ನೇಪಾಳ ಪೊಲೀಸರು ಮತ್ತು ಎಪಿಎಫ್‌ನ ನೆಲದ ಪಡೆಗಳ ಜೊತೆಗೆ ಮಿಲಿಟರಿ ಮತ್ತು ಖಾಸಗಿ ವಲಯದ ಹೆಲಿಕಾಪ್ಟರ್‌ಗಳನ್ನು ಬಳಸಿಕೊಂಡು ಶೋಧ, ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳನ್ನು ತೀವ್ರವಾಗಿ ಹೆಚ್ಚಿಸಲಾಗಿದೆ ಎಂದು ತಿಳಿಸಿದೆ.

## ಛತ್ತೀಸ್‌ಗಢದ ರಾಯಪುರ ಕೃಷಿ ವಿವಿಯಲ್ಲಿ ಮತ್ತೊಂದು ಪ್ರಶ್ನೆಪತ್ರಿಕೆ ಸೋರಿಕೆ

**ರಾಯಪುರ:** ಛತ್ತೀಸ್‌ಗಢದ ರಾಯಪುರದಲ್ಲಿರುವ ಸರ್ಕಾರಿ ಸ್ವಾಮ್ಯದ ಇಂದಿರಾ ಗಾಂಧಿ ಕೃಷಿ ವಿಶ್ವವಿದ್ಯಾಲಯದಲ್ಲಿ (ಐಜಿಕೆವಿಸಿ) ಬಿಎಸ್‌ಸಿ ಕೃಷಿಯ ಮತ್ತೊಂದು ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆ ಎಂಬ ಆರೋಪ ಕೇಳಿಬಂದಿದೆ.ಈ ಕುರಿತು ಪೊಲೀಸ್ ತನಿಖೆ ನಡೆಸುವಂತೆ ವಿಶ್ವವಿದ್ಯಾಲಯ ಮನವಿ ಮಾಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಹಿಂದೆ ಬಿಎಸ್‌ಸಿ ಕೃಷಿಯ ಎರಡು ವಿಷಯಗಳ ಪ್ರಶ್ನೆಪತ್ರಿಕೆಗಳು ಸೋರಿಕೆಯಾಗಿವೆ ಎಂಬ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಆ ಪರೀಕ್ಷೆಗಳನ್ನು ರದ್ದುಗೊಳಿಸಲಾಗಿತ್ತು. ಇದೀಗ ಎಪಿಬಿ-5121 (ಜೆನೆಟಿಕ್ಸ್‌ನ ಮೂಲಭೂತ ಅಂಶಗಳು) ವಿಷಯದ ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆ ಎಂಬ ಆರೋಪ ಕೇಳಿಬಂದಿದೆ.

ಆ.19ರಂದು ರಾಜ್ಯದ 28 ಕೃಷಿ ಕಾಲೇಜುಗಳಲ್ಲಿ ಈ ಪರೀಕ್ಷೆ ನಡೆದಿತ್ತು. ಈ ಕುರಿತು ಮಾಧ್ಯಮಗಳಲ್ಲಿ ವರದಿ ಪ್ರಕಟವಾದ ಬಳಿಕ ಪ್ರಕರಣ ಬೆಳಕಿಗೆ ಬಂದಿದ್ದು, ವಿಶ್ವವಿದ್ಯಾಲಯಕ್ಕೆ ಸಲ್ಲಿಸಲಾದ ದೂರಿನಲ್ಲೂ ಪ್ರಶ್ನೆಪತ್ರಿಕೆ ಸೋರಿಕೆ ಆರೋಪ ಉಲ್ಲೇಖಿಸಲಾಗಿದೆ.

ಪ್ರಕರಣದ ಪರಿಶೀಲನೆಗಾಗಿ ವಿಶ್ವವಿದ್ಯಾಲಯ ಐವರು ಸದಸ್ಯರ ಸಮಿತಿಯನ್ನು ರಚಿಸಿತ್ತು. ಪ್ರಾಥಮಿಕ ತನಿಖೆಯ ವೇಳೆ ಸಮಿತಿಯು




ಕೃಷಿ ಕಾಲೇಜೊಂದಕ್ಕೆ ಕಳುಹಿಸಲಾಗಿದ್ದ ಬಳಿಕ ವಿಶ್ವವಿದ್ಯಾಲಯಕ್ಕೆ ವಾಪಸ್ ಬಂದ ಪ್ರಶ್ನೆಪತ್ರಿಕೆಗಳ ಲಕೋಟೆಗಳನ್ನು ಪರಿಶೀಲಿಸಿದೆ.

ಈ ವೇಳೆ ಕೆಲವು ಲಕೋಟೆಗಳಲ್ಲಿ ಮೇಲ್ನೋಟಕ್ಕೆ ಕಳ್ಳತನ ಅಥವಾ ಹಸ್ತಕ್ಷೇಪದ ಗುರುತುಗಳು ಕಂಡುಬಂದಿವೆ ಎಂದು ವಿಶ್ವವಿದ್ಯಾಲಯ ತಿಳಿಸಿದೆ. ಜೆನೆಟಿಕ್ಸ್‌ನ ಮೂಲಭೂತ ಅಂಶಗಳ ಪ್ರಶ್ನೆಪತ್ರಿಕೆ ಹೊಂದಿದ್ದ ಲಕೋಟೆಯಲ್ಲಿಯೂ ಇಂತಹ ಗುರುತುಗಳು ಪತ್ತೆಯಾಗಿದ್ದು,

ಈ ಹಿಂದೆ ಪೊಲೀಸ್ ತನಿಖೆಗೆ ಒಳಪಟ್ಟಿದ್ದ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಕಂಡುಬಂದ ಗುರುತುಗಳಿಗೆ ಹೋಲಿಕೆಯಾಗಿವೆ ಎಂದು ವಿಶ್ವವಿದ್ಯಾಲಯ ಹೇಳಿದೆ. ಈ ಕುರಿತು ದೂರು ಸ್ವೀಕರಿಸಲಾಗಿದ್ದು, ಪ್ರಕರಣದ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ

## ವಿದ್ಯಾವಂತರಲ್ಲೇ ಹೆಚ್ಚು ಜಾತಿ ಪ್ರೇಮ: ಮನುವಾದಿಗಳಿಂದ ಉದ್ದೇಶಪೂರ್ವಕವಾಗಿ ಚಾತುರ್ವರ್ಣ ವ್ಯವಸ್ಥೆ ಸೃಷ್ಟಿ: ಸಿದ್ದರಾಮಯ್ಯ

**ಬೆಂಗಳೂರು:** ವಿದ್ಯಾವಂತ ವ್ಯಕ್ತಿಗಳು ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳುವ ಬದಲು ಜಾತಿವಾದ ಪಾಲಿಸುವುದು ಹಾಗೂ ಮೌಢ್ಯ ಮತ್ತು ಮೂಢನಂಬಿಕೆಗಳಿಗೆ ಬದ್ಧರಾಗಿರುವುದು ನಿಜಕ್ಕೂ ದುರದೃಷ್ಟಕರ ಎಂದು ಮಾಜಿ ಸಿಎಂ ಸಿದ್ದರಾಮಯ್ಯ ವಿಷಾದ ವ್ಯಕ್ತ ಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಸಾಮಾಜಿಕ ಸಮಾನತೆ ಮತ್ತು ವೈಚಾರಿಕ ಚಿಂತನೆ ಪ್ರತಿಪಾದಿಸುವ ಶೂದ್ರ ಸೇವಾ ಸಂಸ್ಥೆ ಎಂಬ ಸಂಘಟನೆ ಉದ್ಘಾಟಿಸಿದ ಮಾತನಾಡಿದ ಅವರು, ?ಚಾತುರ್ವರ್ಣ ವ್ಯವಸ್ಥೆಯನ್ನು ಮನುವಾದಿಗಳು ಈ ದೇಶದಲ್ಲಿ ಉದ್ದೇಶಪೂರ್ವಕಾಗಿ ಸೃಷ್ಟಿಸಿದರು.

ಶೂದ್ರ ವರ್ಗದವರು ಅನೇಕ ವರ್ಷಗಳ ಕಾಲ ಅಕ್ಷರ ಸಂಸ್ಕೃತಿ, ಅವಕಾಶಗಳಿಂದ ದೂರ ಇರುವಂತಾಗಿತ್ತು. ಅವರು ಮೇಲ್ವರ್ಗದವರೊಂದಿಗೆ ಸ್ಪರ್ಧಿಸುವುದು ಅಸಾಧ್ಯ. ಅಕ್ಷರ ವಂಚಿತರಾದ ಅವರಿಗೆ ಅಕ್ಷರ ಕಲಿತವರಿಂದ ಸೋಲಾಗುವುದು ಸಾಮಾನ್ಯ. ನಮ್ಮ ಭಿನ್ನಾಭಿಪ್ರಾಯಗಳ ಪರಿಣಾಮ ಬ್ರಿಟಿಷರೂ ನಮ್ಮನ್ನು ಆಳಿದರು. ಎಲ್ಲ ವರ್ಗಗಳಲ್ಲಿ ಒಗ್ಗಟ್ಟು ಮೂಡಬೇಕು? ಎಂದರು ಬುದ್ಧ, ಬಸವಣ್ಣ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ಅವರಂತಹ ಸುಧಾರಕರು ಸಂವಿಧಾನದಲ್ಲಿ ಕಲ್ಪಿಸಿರುವ ಸಮಾನತಾವಾದಿ ಸಮಾಜವನ್ನು ನಿರ್ಮಿಸುವುದು ಪ್ರಸ್ತುತ ಪೀಳಿಗೆಯು ಮೂಢನಂಬಿಕೆಗಳನ್ನು ತೊರೆದು ವೈಚಾರಿಕತೆಯನ್ನು ಅಳವಡಿಸಿಕೊಳ್ಳದ ಹೊರತು ಅಸಾಧ್ಯ ಎಂದು ಅವರು ಒತ್ತಿ ಹೇಳಿದರು. ಶೂದ್ರ ಸೇವಾ ಸಂಸ್ಥೆ ಉದ್ಘಾಟಿಸಿದ




ಸಿದ್ದರಾಮಯ್ಯ ಸಿದ್ದರಾಮಯ್ಯ ನನ್ನನ್ನು ಮುಖ್ಯಮಂತ್ರಿ ಹುದ್ದೆಗೆ ಶಿಫಾರಸು ಮಾಡಿದ್ದರು, ಆದರೆ ಹೈಕಮಾಂಡ್ ಸ್ಕೀಮ್ ಬೇರೆಯೇ ಇತ್ತು:

ಪರಮೇಶ್ವರ್; ತಮ್ಮ ಅಧಿಕಾರಾವಧಿಯಲ್ಲಿ ಜಾರಿಗೆ ತಂದ ಮೂಢನಂಬಿಕೆ ವಿರೋಧಿ ಕಾನೂನು ಸಮರ್ಪಕವಾಗಿ ಜಾರಿಗೆ ಬಂದಿಲ್ಲ ಎಂದರು. ಏಕೆಂದರೆ ವಿದ್ಯಾವಂತ ಜನರು ಇನ್ನೂ ಸಂಪ್ರದಾಯವನ್ನು ಅನುಸರಿಸುತ್ತಾರೆ. ಎಲ್ಲಾ ಹಿಂದುಳಿದ ವರ್ಗಗಳು ಒಂದಾಗಬೇಕೆಂದು ಅವರು ಒತ್ತಾಯಿಸಿದರು, ರಾಜ್ಯ ಖಾತರಿ ಯೋಜನೆಗಳು ಅಸಮಾನತೆಯ ನಿರ್ಮೂಲನೆಗೆ ಸಕ್ರಿಯವಾಗಿ ಸಹಾಯ ಮಾಡುತ್ತವೆ . ವ್ಯವಸ್ಥೆ ಬದಲಾವಣೆಗೆ ಎಲ್ಲರ ಪ್ರಯತ್ನ ಅಗತ್ಯ. ಅದಕ್ಕೆ ಸಮಯವೂ ಬೇಕು. ಸರಿಯಾದ ಮಾರ್ಗದಲ್ಲಿ ಹೋದಾಗಷ್ಟೇ ಯಶ ಸಿಗುತ್ತದೆ? ಎಂದರು.

## ವಿದ್ಯಾರ್ಥಿಗಳ ಸಮಸ್ಯೆ ಶಿಕ್ಷಣ ಸುಧಾರಣೆಗೆ ಸಂಪುಟ ಉಪಸಮಿತಿ ರಚನೆ

**ಬೆಂಗಳೂರು:** ವಿದ್ಯಾರ್ಥಿಗಳ ಸಮಸ್ಯೆಗಳನ್ನು ಆಲಿಸಿ, ಶಿಕ್ಷಣ ವ್ಯವಸ್ಥೆಯಲ್ಲಿ ಅಗತ್ಯ ಸುಧಾರಣೆಗಳನ್ನು ತರಲು ರಾಜ್ಯ ಸರ್ಕಾರ ಮುಂದಾಗಿದೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಆರೋಗ್ಯ ಖಾತೆ ಸಚಿವ ಯು.ಟಿ. ಖಾದರ್ ನೇತೃತ್ವದಲ್ಲಿ ?ವಿದ್ಯಾರ್ಥಿಗಳ ಸಮಸ್ಯೆಗಳು ಮತ್ತು ಶಿಕ್ಷಣ ಸುಧಾರಣೆಗಳ ಕುರಿತು ಸಂಪುಟ ಉಪಸಮಿತಿ? ರಚಿಸಿದ್ದಾರೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಶಿಕ್ಷಣ ವ್ಯವಸ್ಥೆಯಲ್ಲಿ ಅಮೂಲಾಗ್ರ ಬದಲಾವಣೆ ತರುವ ಉದ್ದೇಶದಿಂದ ಮುನ್ನಡೆಸುತ್ತಿರುವ ?ಛಾತ್ರೋಂ ಕಿ ಗೂಂಜ್? ವಿದ್ಯಾರ್ಥಿ ಚಳುವಳಿಗೆ ಸ್ಪಂದಿಸಿರುವ ರಾಜ್ಯ ಸರ್ಕಾರ, ವಿದ್ಯಾರ್ಥಿಗಳ ಸಮಸ್ಯೆ ಹಾಗೂ ಆಕಾಂಕ್ಷೆಗಳನ್ನು ಅರಿತು ಸೂಕ್ತ ಸುಧಾರಣೆಗಳನ್ನು ಜಾರಿಗೆ ತರಲು ಉದ್ದೇಶಿಸಿದೆ.



ಸಚಿವ ಯು.ಟಿ. ಖಾದರ್ ಅವರ ನೇತೃತ್ವದಲ್ಲಿ ರಚಿಸಿರುವ ಈ ಸಂಪುಟ ಉಪಸಮಿತಿಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ, ಸಚಿವರಾದ ಬಸವರಾಜ ರಾಯರೆಡ್ಡಿ, ಪ್ರಿಯಾಂಕ್ ಖರ್ಗೆ, ಶರಣಪ್ರಕಾಶ್ ಪಾಟೀಲ್ ಅವರು ಸದಸ್ಯರಾಗಿದ್ದಾರೆ.ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಅವರ ಸಮಸ್ಯೆಗಳು, ಆಕಾಂಕ್ಷೆಗಳು ಮತ್ತು ಅಭಿಪ್ರಾಯಗಳನ್ನು ಆಲಿಸಿ, ವಿದ್ಯಾರ್ಥಿಗಳು ಹಾಗೂ ಯುವಜನರು ಎದುರಿಸುತ್ತಿರುವ ಸವಾಲುಗಳಿಗೆ ಪರಿಹಾರ ಒದಗಿಸುವಂತಹ ಶಿಕ್ಷಣ ಸುಧಾರಣೆಗಳನ್ನು ಶಿಫಾರಸು ಮಾಡುವಂತೆ ಸಮಿತಿಗೆ ಮುಖ್ಯಮಂತ್ರಿ ಸೂಚಿಸಿದ್ದಾರೆ. ರಾಜ್ಯದ ಭವಿಷ್ಯ ಯುವಜನರ ಮೇಲೆ ನಿಂತಿದ್ದು, ಅವರಿಗೆ ಗುಣಮಟ್ಟದ ಶಿಕ್ಷಣ, ಅಗತ್ಯ ಮೂಲಸೌಕರ್ಯ ಹಾಗೂ ಸಮರ್ಪಕ ಅವಕಾಶಗಳನ್ನು ಒದಗಿಸುವುದು ಸರ್ಕಾರದ ಬದ್ಧತೆಯಾಗಿದೆ ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ವಿದ್ಯಾರ್ಥಿಗಳು ಮತ್ತು ರಾಜ್ಯದ ಯುವಜನರ ಸಮಸ್ಯೆಗಳು ಹಾಗೂ ಭಾವನೆಗಳನ್ನು ಅರ್ಥಮಾಡಿಕೊಂಡು, ಅವರ ಆಕಾಂಕ್ಷೆಗಳಿಗೆ ಸ್ಪಂದಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು, ಯುವಜನರು ಹಾಗೂ ಸಾರ್ವಜನಿಕರಿಂದ ಬರುವ ಸಲಹೆ-ಸೂಚನೆಗಳನ್ನು ಮುಕ್ತವಾಗಿ ಸ್ವೀಕರಿಸಲಾಗುವುದು.

## ಜೀವಾವಧಿ ಶಿಕ್ಷೆಗೆ ಗುರಿಯಾಗಿ ಪೆರೋಲ್ ಪಡೆದು ಪರಾರಿಯಾಗಿದ್ದ ಅಪರಾಧಿ 40 ವರ್ಷಗಳ ಬಳಿಕ ಅರೆಸ್ಟ್

**ಹೈದರಾಬಾದ್:** ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿ ಪೆರೋಲ್ ಪಡೆದ ಬಳಿಕ, ಶಿಕ್ಷೆ ಆರಂಭವಾದ ಆರು ತಿಂಗಳಲ್ಲೇ ಜೈಲಿನಿಂದ ಪರಾರಿಯಾಗಿದ್ದ ಅಪರಾಧಿಯನ್ನು 40 ವರ್ಷಗಳ ಬಳಿಕ ತೆಲಂಗಾಣ ಪೊಲೀಸರು ಬಂಧಿಸಿ ಮತ್ತೆ ಜೈಲಿಗಟ್ಟಿದ್ದಾರೆ.



ನಾಲ್ಕು ದಶಕಗಳ ಕಾಲ ತಲೆಮರೆಸಿಕೊಂಡಿದ್ದ ಅಪರಾಧಿ ಈ ಅವಧಿಯಲ್ಲಿ ಸರ್ಕಾರಿ ಶಿಕ್ಷಕನಾಗಿ ಕೆಲಸ ಗಿಟ್ಟಿಸಿಕೊಳ್ಳುವುದರ ಜತೆಗೆ ರಾಜ್ಯ ಪ್ರಶಸ್ತಿಯನ್ನೂ ಪಡೆದಿದ್ದ ಎಂಬುದು ಇದೀಗ ಬೆಳಕಿಗೆ ಬಂದಿದೆ.

ಈಗ 70ರ ದಶಕದ ಅಂತ್ಯದಲ್ಲಿರುವ ಸಂದೇಲ ವೀರಣ್ಣನಿಗೆ 1970ರ ದಶಕದ ಉತ್ತರಾರ್ಧದಲ್ಲಿ ನಡೆದ ಕೊಲೆ ಪ್ರಕರಣದಲ್ಲಿ 1983ರಲ್ಲಿ ಜೀವಾವಧಿ ಶಿಕ್ಷೆ ವಿಧಿಸಲಾಗಿತ್ತು.

ಆದರೆ, ಪೆರೋಲ್ ಪಡೆದ ಬಳಿಕ ಶಿಕ್ಷೆ ಆರಂಭವಾದ ಆರು ತಿಂಗಳಲ್ಲೇ ಜೈಲಿನಿಂದ ಪರಾರಿಯಾಗಿ ತಲೆಮರೆಸಿಕೊಂಡಿದ್ದ. 40 ವರ್ಷಗಳ ಕಾಲ ಪೊಲೀಸರಿಗೆ ಸಿಗದೆ ಇದ್ದ ವೀರಣ್ಣನನ್ನು ಮೇ 2024ರಲ್ಲಿ ಬಂಧಿಸಲಾಗಿತ್ತು. ಮಹಬೂಬಾಬಾದ್‌ನಲ್ಲಿ ಸ್ಥಳೀಯ ಪೊಲೀಸರ ಸಹಕಾರದೊಂದಿಗೆ ತೆಲಂಗಾಣ ಕಾರಾಗೃಹ ಇಲಾಖೆಯ ವಿಶೇಷ ಕಾರ್ಯಪಡೆ ವೀರಣ್ಣನನ್ನು ಬಂಧಿಸಿತ್ತು. ಬಳಿಕ ಆತನನ್ನು ಚೆರ್ಲಪಲ್ಲಿ ಕೇಂದ್ರ ಕಾರಾಗೃಹದಲ್ಲಿ ಇರಿಸಲಾಗಿದೆ. ವೀರಣ್ಣನ ಪತ್ನಿ ಸಂದೇಲ ಚರಮ ಅವರು ಆತನ ಬಂಧನವನ್ನು ಪ್ರಶ್ನಿಸಿ, ವೈದ್ಯಕೀಯ ಹಾಗೂ ಅನುಕಂಪದ ಆಧಾರದ ಮೇಲೆ ಬಿಡುಗಡೆ ಮಾಡುವಂತೆ ಕೋರಿ ನ್ಯಾಯಾಲಯದ ಮೊರೆ ಹೋಗಿದ್ದರು.

ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಟಿ. ಮಾಧವಿ ದೇವಿ ಅವರು ವೀರಣ್ಣನ ನಡೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿ ಅರ್ಜಿಯನ್ನು ವಜಾಗೊಳಿಸಿದ್ದಾರೆ.

ಅಲ್ಲದೆ, ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ವೀರಣ್ಣನನ್ನು ಮತ್ತೆ ಜೈಲಿಗೆ ಕಳುಹಿಸುವಂತೆ ಆದೇಶಿಸಿದ್ದಾರೆ.

# ಸಂಕೇನಹಳ್ಳಿಯಲ್ಲಿ ಅದ್ಧೂರಿಯಾಗಿ ನೆರವೇರಿದ ಕುಬೇರ ಗಣಪತಿ ಪ್ರತಿಷ್ಠಾಪನೆ ದೇವಸ್ಥಾನ, ಸಮುದಾಯ ಭವನ, ರಾಜಗೋಪುರ ಉದ್ಘಾಟನೆ



**ಕೊರಟಗೆರೆ:** ತಾಲೂಕಿನ ಎಲೆರಾಂಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಂಕೇನಹಳ್ಳಿ ಗ್ರಾಮದಲ್ಲಿ ನೂತನ ಕುಬೇರ ಗಣಪತಿ ದೇವಸ್ಥಾನ ಹಾಗೂ ವಿಗ್ರಹ ಪ್ರತಿಷ್ಠಾಪನೆ, ಸಮುದಾಯ ಭವನ ಮತ್ತು ರಾಜಗೋಪುರ ಉದ್ಘಾಟನಾ ಕಾರ್ಯಕ್ರಮ ಅದ್ಧೂರಿಯಾಗಿ ನೆರವೇರಿತು.

ಗ್ರಾಮಸ್ಥರು ಕಳೆದ ಒಂಬತ್ತು ವರ್ಷಗಳಿಂದ ಕಂಡಿದ್ದ ಕನಸು ಇದೀಗ ನನಸಾಗಿದ್ದು, ನೂತನ ದೇವಸ್ಥಾನದ ಉದ್ಘಾಟನೆಯ ಸಂದರ್ಭದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಎಲೆರಾಂಪುರ ಮಠದ ಶ್ರೀ ಡಾ. ಹನುಮಂತನಾಥ ಸ್ವಾಮೀಜಿ, ಕಾರದ ಮಠದ ಶ್ರೀ ವೀರ ಬಸವಲಿಂಗ ಸ್ವಾಮೀಜಿ, ಸಮಾಜ ಸೇವಕ ಹಾಗೂ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಪಿ.ಎನ್. ಕೃಷ್ಣಮೂರ್ತಿ ಸೇರಿದಂತೆ ಗಣ್ಯರು ಭಾಗವಹಿಸಿ ಕುಬೇರ ಗಣಪತಿಗೆ ವಿಶೇಷ ಪೂಜೆ ಸಲ್ಲಿಸಿದರು.

ಗ್ರಾಮಗಳ ಅಭಿವೃದ್ಧಿಗೆ ಕೈಜೋಡಿಸಿ : ಪಿ.ಎನ್. ಕೃಷ್ಣಮೂರ್ತಿ ಸಮಾಜ ಸೇವಕ ಹಾಗೂ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಪಿ.ಎನ್. ಕೃಷ್ಣಮೂರ್ತಿ ಮಾತನಾಡಿ, ಪ್ರತಿಯೊಂದು ಹಳ್ಳಿಯಲ್ಲಿರುವ ಸಿರಿವಂತರು ಹಾಗೂ ಅನುಕೂಲಸ್ಥರು ತಮ್ಮ ಕೈಲಾದ ರೀತಿಯಲ್ಲಿ ಗ್ರಾಮಗಳ ಅಭಿವೃದ್ಧಿಗೆ ಕೊಡುಗೆ ನೀಡಬೇಕು. ದೇವಸ್ಥಾನಗಳು ನಮ್ಮ ಸಂಸ್ಕೃತಿ, ಸಂಪ್ರದಾಯ ಮತ್ತು ಪರಂಪರೆಯನ್ನು ಉಳಿಸುವ ಕೇಂದ್ರಗಳಾಗಿವೆ. ಇದೇ ರೀತಿಯಲ್ಲಿ ಪ್ರತಿಯೊಂದು ಗ್ರಾಮದಲ್ಲೂ ಉತ್ತಮ ಶಾಲೆಗಳು ಇರಬೇಕು. ಮಕ್ಕಳಿಗೆ ಶಿಕ್ಷಣದ ಜತೆಗೆ ಸಂಸ್ಕಾರ, ಸಂಸ್ಕೃತಿ ಹಾಗೂ ಆಚಾರ-ವಿಚಾರಗಳ ಅರಿವು ಮೂಡಿಸುವ ಜವಾಬ್ದಾರಿ ಪೋಷಕರು ಮತ್ತು ಸಮಾಜದ ಮೇಲಿದೆ ಎಂದು ಹೇಳಿದರು.

**ಹುಟ್ಟೂರಿಗೆ ಕೊಡುಗೆ ನೀಡುವುದು ಕರ್ತವ್ಯ : ನೀಲೇಶ್**

ಉದ್ಯಮಿ ನೀಲೇಶ್ ಮಾತನಾಡಿ, ನಾವು ಎಲ್ಲೇ ಇದ್ದರೂ, ಹೇಗೆ ಇದ್ದರೂ ಹುಟ್ಟಿದ ಗ್ರಾಮವನ್ನು ಮರೆಯಬಾರದು. ನಮ್ಮ ಗ್ರಾಮಕ್ಕೆ ನಮ್ಮ ಕೈಲಾದಷ್ಟು ಕೊಡುಗೆ ನೀಡುವುದು ಪ್ರತಿಯೊಬ್ಬರ ಕರ್ತವ್ಯ. ಗ್ರಾಮಗಳ ಅಭಿವೃದ್ಧಿಗೆ ಹಣದ ಜತೆಗೆ ಸಮಯ, ಶ್ರಮ ಮತ್ತು ಮಾರ್ಗದರ್ಶನ ನೀಡುವ ಮೂಲಕವೂ ಸೇವೆ ಸಲ್ಲಿಸಬಹುದು. ಮುಂದಿನ ಪೀಳಿಗೆಗೆ ಉತ್ತಮ ವಾತಾವರಣ ನಿರ್ಮಿಸುವುದು ಎಲ್ಲರ ಜವಾಬ್ದಾರಿ ಎಂದರು.

**ತಂದೆ-ತಾಯಿಯ ಸೇವೆ ಮಾಡಬೇಕು : ಡಾ. ಹನುಮಂತನಾಥ ಸ್ವಾಮೀಜಿ**

ಎಲೆರಾಂಪುರ ಮಠದ ಶ್ರೀ ಡಾ. ಹನುಮಂತನಾಥ ಸ್ವಾಮೀಜಿ ಆಶೀರ್ವಚನ ನೀಡಿ, 48 ದಿನಗಳ ಕಾಲ ನಿಷ್ಠೆ, ಭಕ್ತಿ ಮತ್ತು ಶ್ರದ್ಧೆಯಿಂದ ಗಣೇಶನ ಪೂಜೆ ಮಾಡುವುದರಿಂದ ಭಗವಂತನ ಅನುಗ್ರಹ ದೊರೆಯುತ್ತದೆ. ಆದರೆ ದೇವರ ಆರಾಧನೆಯ ಜತೆಗೆ ತಂದೆ-ತಾಯಿಯ ಸೇವೆ ಮಾಡುವುದು ಅತ್ಯಂತ ಮುಖ್ಯ. ಹಿರಿಯರನ್ನು ಗೌರವಿಸಿ, ಸತ್ಯ, ಧರ್ಮ ಮತ್ತು ನೀತಿಯ ಮಾರ್ಗದಲ್ಲಿ ಜೀವನ ನಡೆಸಬೇಕು ಎಂದು ತಿಳಿಸಿದರು.

**ಮಕ್ಕಳಿಗೆ ಸಂಸ್ಕಾರ ಕಲಿಸಿ : ವೀರ ಬಸವಲಿಂಗ ಸ್ವಾಮೀಜಿ**

ಕಾರದ ಮಠದ ಶ್ರೀ ವೀರ ಬಸವಲಿಂಗ ಸ್ವಾಮೀಜಿ ಮಾತನಾಡಿ, ಮಕ್ಕಳನ್ನು ಕೇವಲ ವಿದ್ಯಾವಂತರನ್ನಾಗಿ ಮಾಡುವುದಷ್ಟೇ ಅಲ್ಲ, ಸಂಸ್ಕಾರವಂತರನ್ನಾಗಿಯೂ ಬೆಳೆಸಬೇಕು. ಮೊಬೈಲ್ ಹಾಗೂ ಟಿವಿಯ ಬಳಕೆಯನ್ನು ಕಡಿಮೆ ಮಾಡಿ ಕುಟುಂಬದ ಮೌಲ್ಯಗಳನ್ನು ಮಕ್ಕಳಿಗೆ ತಿಳಿಸಬೇಕು. ?ಎ? ಎಂದರೆ ಅಪ್ಪ-ಅಮ್ಮ, ?ಬಿ? ಎಂದರೆ ಬಂಧು-ಬಳಗ ಎಂಬಂತೆ ಸಂಬಂಧಗಳ ಮಹತ್ವವನ್ನು ತಿಳಿಸಬೇಕು. ತಂದೆ-ತಾಯಿ, ಗುರುಗಳು ಹಾಗೂ ಹಿರಿಯರನ್ನು ಗೌರವಿಸುವ ಗುಣವನ್ನು ಬಾಲ್ಯದಿಂದಲೇ ಬೆಳೆಸಬೇಕು ಎಂದು ಕರೆ ನೀಡಿದರು.

**ಗ್ರಾಮಸ್ಥರ ಒಗ್ಗಟ್ಟಿನ ಫಲ : ಶ್ರೀನಾಗ್**

ಉದ್ಯಮಿ ಶ್ರೀನಾಗ್ ಮಾತನಾಡಿ, ಸಂಕೇನಹಳ್ಳಿ ಗ್ರಾಮದಲ್ಲಿ ?ಕುಬೇರ ಗಣಪತಿ? ಎಂಬ ಹೆಸರು ಮೂಡಿಬರಲು ಪ್ರಮುಖ ಕಾರಣ ಗ್ರಾಮಸ್ಥರ ಭಕ್ತಿ, ಒಗ್ಗಟ್ಟು ಮತ್ತು ಸಂಕಲ್ಪ. ಗ್ರಾಮಸ್ಥರೆಲ್ಲರೂ ಒಂದಾಗಿ ನಿಂತು ದೇವಸ್ಥಾನದ ನಿರ್ಮಾಣಕ್ಕೆ ಸಹಕಾರ ನೀಡಿದ್ದಾರೆ. ಇದು ಕೇವಲ ದೇವಸ್ಥಾನವಲ್ಲ, ಗ್ರಾಮದ ಜನರ ಒಗ್ಗಟ್ಟು ಹಾಗೂ ಭಕ್ತಿಯ ಪ್ರತೀಕವಾಗಿದೆ. ಇದೇ ಒಗ್ಗಟ್ಟಿನಿಂದ ಮುಂದಿನ ದಿನಗಳಲ್ಲಿಯೂ ಗ್ರಾಮದ ಅಭಿವೃದ್ಧಿಗೆ ಶ್ರಮಿಸೋಣ ಎಂದರು.

ಸಹಸ್ರಾರು ಭಕ್ತರ ಉಪಸ್ಥಿತಿ

ಕಾರ್ಯಕ್ರಮದ ಅಂಗವಾಗಿ ವಿಶೇಷ ಪೂಜೆ, ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಅನ್ನಸಂತರ್ಪಣೆ ನಡೆಯಿತು. ಸಂಕೇನಹಳ್ಳಿ, ಗೋಕುಲ ಸೇರಿದಂತೆ ಅಕ್ಕಪಕ್ಕದ ಗ್ರಾಮಗಳಿಂದಲೂ ಸಹಸ್ರಾರು ಭಕ್ತರು ಆಗಮಿಸಿ ಕುಬೇರ ಗಣಪತಿಯ ದರ್ಶನ ಪಡೆದು ಪುನೀತರಾದರು. ಭಕ್ತರ ಹೆಚ್ಚಿನ ಸಂಖ್ಯೆಯ ಆಗಮನದಿಂದ ಇಡೀ ಸಂಕೇನಹಳ್ಳಿ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಒಂಬತ್ತು ವರ್ಷಗಳ ಗ್ರಾಮಸ್ಥರ ನಿರಂತರ ಪ್ರಯತ್ನ ಹಾಗೂ ಒಗ್ಗಟ್ಟಿನ ಫಲವಾಗಿ ನಿರ್ಮಾಣಗೊಂಡಿರುವ ಕುಬೇರ ಗಣಪತಿ ದೇವಸ್ಥಾನ ಇದೀಗ ಗ್ರಾಮದ ಭಕ್ತಿ ಮತ್ತು ಸಂಸ್ಕೃತಿಯ ಕೇಂದ್ರವಾಗಿ ಹೊರ ಹೊಮ್ಮಿದೆ.

# ವ್ಯಕ್ತಿಗಿಂತ ಸಂಘ ದೊಡ್ಡದು-ಸಮಾಜಕ್ಕಾಗಿ ನಮ್ಮ ಸೇವೆ ಇರಬೇಕು: ಶಾಸಕ ಸಿ. ಬಿ ಸುರೇಶ್ ಬಾಬು



**ಚಿಕ್ಕನಾಯಕನಹಳ್ಳಿ:** ಮಾತನಾಡಿ ಸಂಘದ ಬೆಳವಣಿಗೆ ಕೇವಲ ಅಧ್ಯಕ್ಷರಿಗೆ ಮಾತ್ರ ಸೇರಿದ್ದಲ್ಲ ಪ್ರತಿಯೊಬ್ಬರೂ ಸಂಘದ ಬೆಳವಣಿಗೆಗೆ ಕೈ ಜೋಡಿಸಬೇಕು. ಸಂಘದಿಂದ ನಂಗೆ ಏನು ಲಾಭ ಎನ್ನುವುದನ್ನು ಬಿಟ್ಟು ಈ ಸಮಾಜಕ್ಕೆ ನನ್ನ ಕೊಡುಗೆ ಏನು ಎಂದು ಅರಿಯಬೇಕು ಎಂದು ಶಾಸಕ ಸಿ. ಬಿ ಸುರೇಶ್ ಬಾಬು ತಿಳಿಸಿದರು.

ತಾಲ್ಲೂಕಿನ ಕಂದಿಕೆರೆಯ ಬಾಬು ಜಗಜೀವನರಾಮ್ ಭವನದಲ್ಲಿ ನಡೆದ 517 ನೇ ನಾಡಪ್ರಭು ಕೆಂಪೇಗೌಡ ಜಯಂತಿ ಹಾಗೂ ಒಕ್ಕಲಿಗರ ಸಂಘದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು

ಸಮಾಜದಲ್ಲಿ ಎಲ್ಲರನ್ನೂ ಒಟ್ಟಿಗೆ ತೆಗೆದುಕೊಂಡು ಹೋಗುವಲ್ಲಿ ಸಂಘಗಳು ಪ್ರಮುಖ ಪಾತ್ರ ವಹಿಸುತ್ತವೆ. ಶಿಕ್ಷಣದ ಮೂಲಕ ಮಕ್ಕಳಿಗೆ ಭವಿಷ್ಯವನ್ನು ರೂಪಿಸುವ ಕೆಲಸ ಸಂಘಗಳು ಮಾಡುತ್ತಿವೆ ತಾಲೂಕಿನಲ್ಲಿ ಎಲ್ಲಾದ್ರೂ ಜಾಗವನ್ನು ಗುರುತಿಸಿ ಹೇಳಿದರೆ ನಾನು ಅದನ್ನು ಮಂಜೂರು ಮಾಡಿಸುವ ಕೆಲಸ ಮಾಡುತ್ತೇನೆ. ಈಗಾಗಲೇ ತಾಲೂಕಿನ ಒಂದು ಭಾಗಕ್ಕೆ ಹೇಮಾವತಿ ನೀರು ಹರಿಯುತ್ತಿದ್ದೂ ಇನ್ನು ಎರಡು ಮೂರು ತಿಂಗಳಲ್ಲಿ ಈ ಭಾಗದ ಕೆಲಸವನ್ನು ಮುಗಿಸಿ ನೀರು ಹರಿಸುವುದಾಗಿ ತಿಳಿಸಿದರು.ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿ ಪ್ರಸನ್ನನಾಥಸ್ವಾಮೀಜಿ ಮಾತನಾಡಿ, ಸಂಘ ಕಟ್ಟುವ ಮೂಲಕ ಸಮಾಜ ಕಟ್ಟಬೇಕು, ಸಮುದಾಯ ಭವನ ನಿರ್ಮಾಣವಾಗಲಿ, ಚಿ.ನಾ.ಹಳ್ಳಿಯಲ್ಲಿ ಇಂದು ಆರಂಭವಾಗಿರುವುದು 4ನೇ ಸಂಘ, ಪೋಷಕರು ತಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ, ಬುದ್ದಿವಂತರನ್ನಾಗಿ, ಜ್ಞಾನವಂತರನ್ನಾಗಿ ಮಾಡಿ, ಸದಾ ಒಳ್ಳೆಯ ಕೆಲಸ ಮಾಡುವ ಚಿಂತನೆ ಮಾಡುವ ಮನಸ್ಸು ನಿಮ್ಮದಾಗಲಿ ಎಂದರಲ್ಲದೆ, ಒಳ್ಳೆಯ ವಿಚಾರಗಳು, ಚಿಂತನೆಗಳು, ಬಂದರೆ ಮಾತ್ರ ಬೆಳವಣಿಗೆ ಕಾಣಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ತಿಪಟೂರು ಜೆಡಿಎಸ್ ಮುಖಂಡ ಕೆ.ಟಿ.ಶಾಂತಕುಮಾರ್, ರಾಜ್ಯ ಒಕ್ಕಲಿಗರ ಸಂಘದ ಹನುಮಂತರಾಯಪ್ಪ, ತಾಲ್ಲೂಕು ಒಕ್ಕಲಿಗರ ಸಂಘದ ಉಪಾಧ್ಯಕ್ಷ ಕೆ.ಜಿ.ಕೃಷ್ಣೆಗೌಡ, ಪ್ರಧಾನ ಕಾರ್ಯದರ್ಶಿ ಹರೀಶ್ ಎಂ.ಪಿ, ನೂತನವಾಗಿ ಆರಂಭವಾದ ಕಂದಿಕೆರೆ ಒಕ್ಕಲಿಗರ ಸಂಘದ ಗೌರವಾಧ್ಯಕ್ಷ ಮುನಿಯಪ್ಪ, ಅಧ್ಯಕ್ಷ ಉದಯ್ ಕುಮಾರ್ ಕೆ, ಉಪಾಧ್ಯಕ್ಷ ವಸಂತ್ ಕುಮಾರ್ ಕೆ.ಎಸ್, ಪ್ರಧಾನ ಕಾರ್ಯದರ್ಶಿ ಯಶವಂತ್ ಕುಮಾರ್ ಕೆ.ಈ, ಸಂಘಟನಾ ಕಾರ್ಯದರ್ಶಿ ದಿನೇಶ್ ಕುಮಾರ್ ಕೆ, ಸಂಘಟನಾ ಕಾರ್ಯದರ್ಶಿ ಕೋದಂಡರಾಮು ಕೆ.ಪಿ, ನಿರ್ದೇಶಕರುಗಳಾದ ಶಾಂತಕುಮಾರ್ ಕೆ.ಎಂ, ರಂಗಸ್ವಾಮಿ, ಪುಟ್ಟರಂಗಪ್ಪ ಸೇರಿದಂತೆ ಹಲವರು ಇದ್ದರು.

# ಅಡಿಕೆ ಗಿಡ ಕತ್ತರಿಸಿದ ದುಷ್ಕರ್ಮಿಗಳು



**ವೈ.ಎನ್.ಹೊಸಕೋಟೆ:** ಹೋಬಳಿಯ ಮೇಗಳಪಾಳ್ಯದ ಬಳಿ ಇರುವ ಸರ್ವೆ ನಂಬರ್ 7 ಮತ್ತು 8/1 ರಲ್ಲಿರುವ ಅಡಿಕೆ ಗಿಡಗಳ ಪೈಕಿ ಸುಮಾರು 63 ಕ್ಕೂ ಹೆಚ್ಚು ಫಸಲಿಗೆ ಬಂದಿದ್ದ ಗಿಡಗಳನ್ನು ದುಷ್ಕರ್ಮಿಗಳು ಮಂಗಳವಾರ ರಾತ್ರಿ ತುಂಡರಿಸಿದ್ದಾರೆ.

ವೈ.ಎನ್.ಹೊಸಕೋಟೆ ಗ್ರಾಮದ ವಾಸಿಯಾದ ಹೆಚ್.ಪಿ.ಕೃಷ್ಣ ಎನ್ನುವ ರೈತ ತನ್ನ ಜಮೀನಿನಲ್ಲಿ ಸುಮಾರು ಎರಡುವರೆ ಸಾವಿರ ಅಡಿಕೆ ಗಿಡಗಳನ್ನು ಬೆಳೆಸಿಕೊಂಡು ಜೀವನ ಮಾಡುತ್ತಿದ್ದಾರೆ. ದುರುದ್ದೇಶ ಹೊಂದಿರುವ ಯಾರೋ ದುಷ್ಕರ್ಮಿಗಳು ಈ ರೀತಿ ರಾತ್ರೋರಾತ್ರಿ ಕತ್ತರಿಸಿ ರೈತನಿಗೆ ನಷ್ಟ ಉಂಟು ಮಾಡಿದ್ದಾರೆ. ಜೊತೆಗೆ ನೀರು ಪೂರೈಕೆಯ ಪೈಪ್ ಲೈನ್ ಮತ್ತು ಔಷದಿಯ ಪಿಲ್ಲರ್ ಗಳನ್ನು ಒಡೆದು ಹಾಕಿದ್ದಾರೆ.

ರೈತ ಹೆಚ್.ಪಿ.ಕೃಷ್ಣಪ್ಪ ಮಾತನಾಡಿ, ಪರಿಶಿಷ್ಟ ಪಂಗಡಕ್ಕೆ ಸೇರಿರುವ ನಾನು ಕಷ್ಟಪಟ್ಟು ಅಡಿಕೆ ಗಿಡಗಳನ್ನು ಮೂರು ವರ್ಷಗಳಿಂದ ಬೆಳೆಸುತ್ತಿದ್ದೇನೆ. ಹೆಚ್ಚಿನ ಪ್ರಮಾಣದಲ್ಲಿ ಗೊಬ್ಬರ, ರಸಗೊಬ್ಬರ ಇಟ್ಟು ಮಗನಂತೆ ಬೆಳೆಸಿರುತ್ತೇನೆ. ನಾನು ಆರ್ಥಿಕವಾಗಿ ಬೆಳೆಯಬಾರದು, ನಾನು ಪ್ರಗತಿಯನ್ನು ಹೊಂದಬಾರದು ಎಂಬ ದುರುದ್ದೇಶದಿಂದ ಇಂತಹ ಹೀನ ಕೃತ್ಯ ಎಸಗಿದ್ದಾರೆ. ಹಿಂದಿನವಾರ ನಾನು ಕೊಳವೆಬಾವಿಯ ದುರಸ್ಥಿಗಾಗಿ ಮೋಟಾರನ್ನು ಮೇಲೆತ್ತಿದ್ದೆನು. ಇದನ್ನು ಗಮನಿಸಿದ್ದ ಯಾರೋ ದುಷ್ಕರ್ಮಿಗಳು ಕೊಳವೆ ಬಾವಿಯಲ್ಲಿ ಕಲ್ಲು ಹಾಕಿರುತ್ತಾರೆ. ಇದನ್ನೆಲ್ಲಾ ಗಮನಿಸಿದಾಗ ಉದ್ದೇಶಪೂರ್ವಕವಾಗಿ ನನಗೆ ತೊಂದರೆ ನೀಡಬೇಕು ಎಂಬ ಹಿನ್ನೆಲೆಯಲ್ಲೇ ಈ ರೀತಿಯ ಕೃತ್ಯಗಳನ್ನು ಮಾಡುತ್ತಿದ್ದಾರೆ. ಈ ಬಗ್ಗೆ ಸಂಬಂಧಿಸಿದ ಇಲಾಖೆಯವರು ಅತಿ ಸೂಕ್ಷ್ಮವಾಗಿ ಗಮನಿಸಿ, ಈ ಕೃತ್ಯಗಳನ್ನು ಎಸಗಿಸವರನ್ನು ಪತ್ತೆ ಹಚ್ಚಿ ಅವರ ಮೇಲೆ ಅಗತ್ಯ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಕೋರುತ್ತೇನೆ. ಒಂದು ವೇಳೆ ಇವರಿಗೆ ತಕ್ಕಶಿಕ್ಷೆ ಆಗದಿದ್ದರೆ, ನಮ್ಮಂತಹ ಕೆಳಮಟ್ಟ ವರ್ಗದ ರೈತರು ಬಾಳಲು ಸಾಧ್ಯವಾಗುವುದಿಲ್ಲ. ರಾತ್ರಿ ವೇಳೆ ಒಬ್ಬೊಂಟಿಗರಾಗಿ ಓಡಾಡುವ ನಮ್ಮ ಪ್ರಾಣವನ್ನು ತೆಗೆಯಲು ಸಹಾ ಪ್ರಯತ್ನಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

ಈ ಸಂಬಂಧ ವೈ.ಎನ್.ಹೊಸಕೋಟೆ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪದವಿ ಹಂತ ವಿದ್ಯಾರ್ಥಿ ಜೀವನದ ಅಂತಿಮ ಘಟ್ಟ: ಪ್ರಮೋದ್.ಎಲ್. ಪಾಟೀಲ್ ಅಭಿಮತ



**ತುಮಕೂರು:** ನಗರದ ಶ್ರೀ ಸಿದ್ಧಾರ್ಥ ವಾಣಿಜ್ಯ ನಿರ್ವಹಣಾ ಸಂಸ್ಥೆ(ಎಸ್‌ಎಸ್‌ಐಬಿಎಮ್) ವತಿಯಿಂದ 2026-27ನೇ ಸಾಲಿನ ಬಿಬಿಎಮ್ ಹಾಗೂ ಬಿಸಿಎ ಹೊಸ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭವನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಇನೊವೇಷನ್ ಅಂಡ್ ಟೆಕ್ನಾಲಜಿ ಸೊಸೈಟಿ ವ್ಯವಸ್ಥಾಪಕರಾದ ಶ್ರೀ ಪ್ರಮೋದ್ ಎಲ್ ಪಾಟೀಲ್ ಅವರು ವಿದ್ಯಾರ್ಥಿಗಳ ಜೀವನ ಅತ್ಯಂತ ಪ್ರಮುಖವಾದುದು, ಅದರಲ್ಲೂ ಬಹುತೇಕ ಪದವಿ ವಿದ್ಯಾರ್ಥಿಗಳ ಜೀವನ, ಕಲಿಕೆಯ ಅಂತಿಮ ಹಂತ, ಮುಂದಿನ ಜೀವನವನ್ನು ರೂಪಿಸಿಕೊಳ್ಳಲು ಇರುವ ಸುವರ್ಣ ಅವಕಾಶ, ಆದ್ದರಿಂದ ಇದನ್ನು ಸದುಪಯೋಗ ಪಡಿಸಿಕೊಳ್ಳಿ ಎಂದರು. ಇವತ್ತಿನಿಂದಲೇ ಮುಂದೆ ನೀವೇನಾಗಬೇಕೋ, ಅದರ ಕುರಿತು ಯೋಜನೆ ತಯಾರಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಭವಿಷ್ಯದ ಕನಸನ್ನು ನನಸಾಗಿಸಿಕೊಳ್ಳಲು ಇಂದಿನಿಂದಲೇ ಪರಿಶ್ರಮ ಪಟ್ಟು ಓದಬೇಕು. ಭವಿಷ್ಯದಲ್ಲಿ ಸಾಧಿಸಲು ಈ ಪದವಿ ಅಧ್ಯಯನದ ಸಮಯವನ್ನು ಸರಿಯಾ ಉಪಯೋಗಿಸಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಮಹಾಂತೇಶ ಎಂ. ನಡಕಟ್ಟಿಯವರು ಮಾತನಾಡುತ್ತಾ, ನೂತನ ವಿದ್ಯಾರ್ಥಿಗಳಿಗೆ ಕಲಿಸುವುದು ಸುಲಭ, ದೊಡ್ಡ ಕನಸು ಕಾಣಿರಿ, ಗುರಿಯನ್ನು ಈಗಲೇ ನಿಶ್ಚಯಿಸಿಕೊಳ್ಳಿ, ನಿಮ್ಮ ಪದವಿ ವ್ಯಾಸಂಗಕ್ಕಾಗಿ ಸರಿಯಾದ ಸಂಸ್ಥೆಯನ್ನೇ ಆಯ್ಕೆ ಮಾಡಿಕೊಂಡಿದ್ದೀರಿ. ಇಲ್ಲಿ ನಿಮಗೆ ಸವಲತ್ತುಗಳ ಜತೆಗೆ ಉತ್ತಮ ಬೋಧನೆಯೂ ಮತ್ತು ಅವಕಾಶಗಳೂ ಸಿಗಲಿವೆ ಎಂದರು. ನಿಮ್ಮನ್ನು ನೀವು ಎಂದಿಗೂ ಕಡೆಗಣಿಸಿಕೊಳ್ಳಬೇಡಿ ಆತ್ಮವಿಶ್ವಾಸದಿಂದ ಮುನ್ನಡೆಯಿರಿ, ತಂದೆ ತಾಯಿ ಮತ್ತು ಶಿಕ್ಷಕರ ನಿರೀಕ್ಷೆಗಳನ್ನು ಸಾಕಾರಗೊಳಿಸಲು ಸಜ್ಜಾಗಿ ಎಂದು ವಿದ್ಯಾರ್ಥಿಗಳನ್ನು ಹುರಿದುಂಬಿಸಿದರು. ಬಿಬಿಎಂ ಪ್ರಾಂಶುಪಾಲರಾದ ಡಾ. ಜಿ. ಮಮತ ಅವರು ಮಾತನಾಡುತ್ತಾ, ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆ ಇಂದು ಬೃಹದಾಕಾರವಾಗಿ ಬೆಳೆದಿದೆ. ಕೌಶಲ್ಯಗಳನ್ನು ಬೆಳೆಸಿಕೊಂಡು ಉನ್ನತ ಹಂತವನ್ನು ತಲುಪಿರಿ, ತಮಗೆಲ್ಲರಿಗೂ ಸಿದ್ಧಾರ್ಥ ಶಿಕ್ಷಣ ಸಂಸ್ಥೆಗೆ ಸ್ವಾಗತ ಎಂದು ವಿದ್ಯಾರ್ಥಿಗಳನ್ನು ಸ್ವಾಗತಿಸಿದರು.

ಇದೇ ಸಂದರ್ಭದಲ್ಲಿ ಕಳೆದ ಸಾಲಿನ ರ‍್ಯಾಂಕ್ ವಿಜೇತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ರ‍್ಯಾಂಕ್ ವಿಜೇತ ವಿದ್ಯಾರ್ಥಿ ವೆಂಕಟ್ ಸಾಯಿ ಕಿರಿಯ ವಿದ್ಯಾರ್ಥಿಗಳಿಗೆ ಹಿರಿಯ ವಿದ್ಯಾರ್ಥಿಗಳು ಸಹಕಾರ ಬೆಂಬಲ ನೀಡುವುದು ವಾಡಿಕೆ, ಸಂಸ್ಥೆಯಲ್ಲೂ ನಿಮಗೆ ಎಲ್ಲಾ ರೀತಿಯ ಸಹಕಾರ ಸೌಲಭ್ಯಗಳು ಸಿಗುತ್ತವೆ. ನಿಮಗೆ ನೀವೇ ಸಾಟಿ, ಬೇರೆಯವರೊಂದಿಗೆ ಎಂದಿಗೂ ನಿಮ್ಮನ್ನು ನೀವು ಹೋಲಿಸಿಕೊಳ್ಳಬೇಡಿ, ವಿಷಯಗಳನ್ನು ಕಲಿಯುವುದರ ಜತೆಗೆ ಸಂವಹನ ಕಲೆಯನ್ನೂ ಕರಗತ ಮಾಡಿಕೊಳ್ಳಿ, ಅಂಕಗಳು ಪರಿಗಣನೆಗೆ ಬಂದರೂ ಅದು ನಿಮ್ಮ ಅಸ್ಮಿತೆಯಾಗದಂತೆ ನೋಡಿಕೊಳ್ಳಿ ಎಂದು ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ಅಂತಿಮ ವರ್ಷದ ಬಿಸಿಎ ವಿದ್ಯಾರ್ಥಿನಿ ಕು.ಸುಹಾಶ್ರೀ ಪ್ರಾರ್ಥಿಸಿದರೆ, ಹರ್ಷಿತ ಮತ್ತು ನಿಹಾರಿಕ ನಿರೂಪಿಸಿದರು, ಗ್ರೇಟ್ ಆಲ್ಮ ಅಲೆಕ್ಸ್ ಸ್ವಾಗತ ಮಾಡಿದರೆ, ಯಶಸ್ವಿನಿ ಕಾರ್ಯಕ್ರಮದಲ್ಲಿದ್ದವರನ್ನು ವಂದಿಸಿದರು. ಬೋಧಕ ಮತ್ತು ಬೋಧಕೇತರ ವರ್ಗ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಹಾಗೂ ಪೋಷಕರು ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಸೆ. 6ರ ರಜತ ಮಹೋತ್ಸವಕ್ಕೆ ಸಜ್ಜಾದ ಹಿಂದುಳಿದ ಸಮುದಾಯ ಬೃಹತ್ ಜನಜಾಗೃತಿ ಸಮಾವೇಶದ ಪೂರ್ವಭಾವಿ ಸಭೆ



**ಮಧುಗಿರಿ:** ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ (ರಿ) 25ನೇ ವರ್ಷದ ರಜತ ಮಹೋತ್ಸವ, ಬೃಹತ್ ಜನಜಾಗೃತಿ ಸಮಾವೇಶ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅಭಿನಂದನಾ ಕಾರ್ಯಕ್ರಮವನ್ನು ಸೆಪ್ಟೆಂಬರ್ 6 ರಂದು ಅದ್ಧೂರಿಯಾಗಿ ಆಯೋಜಿಸಲು ಶರವೇಗದ ಸಿದ್ಧತೆಗಳು ನಡೆದಿವೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಒಕ್ಕೂಟದ ರಾಜ್ಯಾಧ್ಯಕ್ಷ ಕೆ. ಎಂ. ರಾಮಚಂದ್ರಪ್ಪ,"ಮಾಜಿ ಸಿಎಂ ಡಿ. ದೇವರಾಜ ಅರಸು ಅವರು ಹಾಲನೂರು ಸಮೀಕ್ಷಾ ವರದಿಯನ್ನು ಯಥಾವತ್ತಾಗಿ ಜಾರಿಗೆ ತಂದು ಹಿಂದುಳಿದ ವರ್ಗಗಳಿಗೆ ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯ ನ್ಯಾಯ ಒದಗಿಸಿದ್ದರು. ಅವರ ಹಾದಿಯಲ್ಲೇ ಸಾಗುತ್ತಿರುವ ಸಿದ್ದರಾಮಯ್ಯನವರು ಈ ಸಮುದಾಯಗಳ ಆಶಾಕಿರಣವಾಗಿದ್ದಾರೆ. ಪ್ರಸ್ತುತ ಹಿಂದುಳಿದ ಜಾತಿಗಳ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಪಡೆಯಲು ಕಾಂತರಾಜು ಹಾಗೂ ಮಧುಸೂದನ ನಾಯಕ್ ವರದಿಗಳನ್ನು ತಕ್ಷಣ ಅನುಷ್ಠಾನಗೊಳಿಸಬೇಕಿದೆ" ಎಂದು ಪ್ರತಿಪಾದಿಸಿದರು.

ಮಾಜಿ ಸದಸ್ಯರು ಹಿಂದುಳಿದ ವರ್ಗಗಳ ಆಯೋಗದ ಜೆ. ಡಿ. ಗೋಪಾಲ್ ಮಾತನಾಡಿ ಹಿಂದುಳಿದ ವರ್ಗಗಳ ಮೀಸಲಾತಿ ಹಕ್ಕುಗಳನ್ನು ಪಡೆದುಕೊಳ್ಳಲು ಹಾಗೂ ವರದಿಗಳ ಜಾರಿಗೆ ಒತ್ತಾಯಿಸಿ ಸೆಪ್ಟೆಂಬರ್ 6ರ ರಜತ ಮಹೋತ್ಸವ ಸಮಾವೇಶವನ್ನು ಯಶಸ್ವಿಗೊಳಿಸಬೇಕು.

ಕರ್ನಾಟಕ ಪ್ರದೇಶ ಕುರುಬರ ಸಂಘದ ಚಿತ್ರದುರ್ಗ ನಿರ್ದೇಶಕರಾದ ಬಿ. ಟಿ. ಜಗದೀಶ್ ಮಾತನಾಡಿ ಸಮಾಜದ ಧ್ವನಿ ಗಟ್ಟಿಗೊಳಿಸಲು ಬೆಂಗಳೂರಿನ ತ್ರಿಪುರವಾಸಿನಿ ಮೈದಾನದಲ್ಲಿ ನಡೆಯುವ ಈ ಬೃಹತ್ ಕಾರ್ಯಕ್ರಮಕ್ಕೆ ಅಹಿಂಧ ವರ್ಗಗಳ ಪ್ರತಿಯೊಬ್ಬ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕು.

ಕುಂಬಾರ ಸಮುದಾಯದ ಮುಖಂಡ ವೆಂಕಟರಮಣಪ್ಪಎಂ. ಜಿ. ಮಾತನಾಡಿ ಹಾಲನೂರು ವರದಿ ಆಧರಿಸಿ ಹಿಂದುಳಿದ ವರ್ಗಗಳನ್ನು ಪ್ರವರ್ಗವಾರು ವಿಂಗಡಿಸಿ ಮೀಸಲಾತಿ ನೀಡಿದ್ದು ಡಿ. ದೇವರಾಜ ಅರಸು ಅವರು. ಸಿದ್ದರಾಮಯ್ಯ ಸರ್ಕಾರ ಸ್ವೀಕರಿಸಿರುವ ಸಾಮಾಜಿಕ-ಆರ್ಥಿಕ ಸಮೀಕ್ಷೆ ವರದಿಯ ಜಾರಿಗೆ ಎಲ್ಲರೂ ಶ್ರಮಿಸಬೇಕು ಎಂದರು.

ಸಿದ್ದಾಪುರ ರಂಗಶಾಮಣ್ಣ ಮಾತನಾಡಿ ಸಚಿವ ಕೆ. ಎನ್. ರಾಜಣ್ಣ ಅವರ ನೇತೃತ್ವದಲ್ಲಿ ಜಿಲ್ಲೆಯಲ್ಲಿ ಈ ಬೃಹತ್ ಸಮಾವೇಶವನ್ನು ಅತ್ಯಂತ ಯಶಸ್ವಿಯಾಗಿ ಆಯೋಜಿಸಲಾಗುವುದು. ಮುಂಬರುವ ತಾಲೂಕು, ಜಿಲ್ಲಾ ಪಂಚಾಯತಿ ಚುನಾವಣೆಗಳಲ್ಲಿ ಹಿಂದುಳಿದ ವರ್ಗಗಳು ಒಗ್ಗಟ್ಟು ಪ್ರದರ್ಶಿಸಿ ರಾಜಕೀಯ ಅಧಿಕಾರ ಹಿಡಿಯಲು ಸಂಘಟಿತರಾಗಬೇಕು ಎಂದರು.

ಸಭೆಯಲ್ಲಿ ಗೊಲ್ಲ ಸಮುದಾಯದ ನಾಯಕ ರಘು ಯಾದವ್, ಕಾಳಿದಾಸ ವಿದ್ಯಾವರ್ಧಕ ಸಂಘದ ಜಿಲ್ಲಾಧ್ಯಕ್ಷ ಮೈಲಪ್ಪ, ಹಿಂದುಳಿದ ವರ್ಗಗಳ ಮುಖಂಡರಾದ, ಮರಿಯಣ್ಣ, ರಘುರಾಮ್ ಏಕೇಶ್, ದೇವರಾಜ್, ಕೆಂಪಣ್ಣ, ರಘುನಂದನ್, ರಂಗಸ್ವಾಮಿ, ಅಯ್ಯಪ್ಪ, ಸುರೇಶ್, ರಂಗಧಾಮಯ್ಯ, ರಾಮಾಂಜನಿ, ಮುಂತಾದ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

# ಪರಿಸರ ಶುದ್ಧವಿದ್ದರೆ ಮನಸ್ಸು ಶುದ್ಧ: ವೀರಭದ್ರ ಶಿವಾಚಾರ್ಯ ಮಹಾ ಸ್ವಾಮೀಜಿ



**ಕೊರಟಗೆರೆ:**ನಮ್ಮ ಮನಸ್ಸುಶುದ್ಧವಾಗಿರಬೇಕಾದರೆ ನಾವು ಉತ್ತಮ ಮತ್ತು ಸಕಾರಾತ್ಮಕ ವಾತಾವರಣದಲ್ಲಿ ಬದುಕಬೇಕು. ಸುತ್ತಮುತ್ತಲಿನ ಪರಿಸರ ಹಾಗೂ ನಮ್ಮ ಒಡನಾಟಗಳು ನಮ್ಮ ಚಿಂತನೆಗಳ ಮೇಲೆ ಪ್ರಭಾವ ಬೀರುತ್ತವೆ ಎಂದು ಸಿದ್ದರಬೆಟ್ಟದ ಬಾಳೆಹೊನ್ನೂರು ಖಾಸಾ ಶಾಖಾ ಮಠದ ಪೀಠಾಧ್ಯಕ್ಷ ವೀರಭದ್ರ ಶಿವಾಚಾರ್ಯ ಮಹಾ ಸ್ವಾಮೀಜಿ ತಿಳಿಸಿದರು.

ಪಟ್ಟಣದ ಜಗಜ್ಯೋತಿ ಬಸವೇಶ್ವರ ದೇವಾಲಯದಲ್ಲಿ ಶ್ರಾವಣ ಮಾಸದ ಸೋಮವಾರದ ಅಂಗವಾಗಿ ಹಮ್ಮಿಕೊಂಡಿದ್ದ ರಾತ್ರಿ ವಿಶೇಷ ಪೂಜೆ ಮತ್ತು ಪ್ರವಚನ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ಸಕಾರಾತ್ಮಕ ಚಿಂತನೆಗಳು ಮನುಷ್ಯನ ಬೌದ್ಧಿಕ ಶಕ್ತಿಯನ್ನು ಹೆಚ್ಚಿಸುವುದರ ಜೊತೆಗೆ ಬದುಕಿನಲ್ಲಿ ಆತ್ಮವಿಶ್ವಾಸವನ್ನು ಬೆಳೆಸುತ್ತವೆ. ವಿಶೇಷವಾಗಿ ಮಕ್ಕಳು ಸೂಕ್ಷ್ಮ ಮನಸ್ಸಿನವರಾಗಿದ್ದು, ಅವರ ಮನೋಭಾವ, ಚಿಂತನೆ ಮತ್ತು ಭಾವನೆಗಳನ್ನು ಪೋಷಕರು ಸೇರಿದಂತೆ ಶಿಕ್ಷಕರು ಸೂಕ್ಷ್ಮವಾಗಿ ಅರ್ಥಮಾಡಿಕೊಳ್ಳಬೇಕು. ಮಕ್ಕಳ ತಪ್ಪುಗಳನ್ನು ಕೇವಲ ಗದರಿಸುವ ಮೂಲಕ ತಿದ್ದುವುದಕ್ಕಿಂತ, ಪ್ರೀತಿ, ಪ್ರೋತ್ಸಾಹ ಮತ್ತು ಸ್ಫೂರ್ತಿದಾಯಕ ಮಾತುಗಳ ಮೂಲಕ ಸರಿದಾರಿಗೆ ತರುವ ಪ್ರಯತ್ನ ಮಾಡಬೇಕು ಎಂದು ಸಲಹೆ ನೀಡಿದರು.

ಒಬ್ಬ ವ್ಯಕ್ತಿಯ ಬದುಕನ್ನು ಬದಲಾಯಿಸುವ ಶಕ್ತಿ ಉತ್ತಮ ಮಾತುಗಳಿಗಿದೆ. ಆದ್ದರಿಂದ ನಾವು ಇನ್ನೊಬ್ಬರ ಬದುಕಿನಲ್ಲಿ ಕತ್ತಲೆಯಾಗುವ ಬದಲು, ಸಾಧ್ಯವಾದಷ್ಟು ಒಂದು ಸಣ್ಣ ದೀಪವಾಗಿ ಬೆಳಕು ನೀಡುವ ಮನೋಭಾವ ಬೆಳೆಸಿಕೊಳ್ಳಬೇಕು. ನಮ್ಮಿಂದ ಮತ್ತೊಬ್ಬರ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆ ಉಂಟಾದಾಗ ಮಾತ್ರ ನಮ್ಮ ಜೀವನ ಸಾರ್ಥಕವಾಗುತ್ತದೆ ಎಂದು ಸ್ವಾಮೀಜಿ ಹೇಳಿದರು.

ಈ ಸಂದರ್ಭದಲ್ಲಿ ದಾಸೋಹ ಸೇವೆಗೆ ಸಹಕರಿಸಿದ ನಾಗರಾಜು ಅವರ ಕುಟುಂಬವನ್ನು ಶ್ರೀಗಳು ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾ ಮಹಿಳಾ ಅಧ್ಯಕ್ಷೆ ಮಮತಾ ದಿವಾಕರ್, ಜಗಜ್ಯೋತಿ ಬಸವೇಶ್ವರ ದೇವಾಲಯ ಸಮಿತಿ ಅಧ್ಯಕ್ಷ ಸುರೇಶ್ ಕೆ.ಎಂ., ಉಪಾಧ್ಯಕ್ಷ ಕೆ.ಸಿ. ಶಿವಕುಮಾರ್, ಕಾರ್ಯದರ್ಶಿ ಕೆ.ಬಿ. ಜಗದೀಶ್, ಖಜಾಂಚಿ ಕೆ.ಆರ್. ಕಿರಣ್, ಬಸವ ಸದನ ಕಟ್ಟಡ ಸಮಿತಿ ಅಧ್ಯಕ್ಷ ಡೈರಿ ಸದಾಶಿವಯ್ಯ, ಶಿಕ್ಷಕ ಗಂಗಾಧರ್, ಕಾಳಪ್ಪ, ಮುಖಂಡರಾದ ವೀರೇಶ್, ಶಿವಲಿಂಗಯ್ಯ, ಬಸವರಾಜು, ಮಹಂತೇಶ್ ಸೇರಿದಂತೆ ನೂರಾರು ಭಕ್ತರು ಇದ್ದರು.

ಈ ಸಂದರ್ಭದಲ್ಲಿ ದೇವಾಲಯ ಸಮಿತಿಯ ಸದಸ್ಯರು ಸೇರಿದಂತೆ ಇತರರು ಇದ್ದರು.

# ಶ್ರೀ ಗುರು ರಾಯರ 355ನೇ ಆರಾಧನಾ ಮಹೋತ್ಸವ, ಅಷ್ಟಾಕ್ಷರಿ ಹೋಮ, ಮಂತ್ರ ಪಠಣ ಮತ್ತು ರಥೋತ್ಸವ

**ಚಿಕ್ಕನಾಯಕನಹಳ್ಳಿ:** ಪಟ್ಟಣದ ಚಿಕ್ಕನಾಯಕನಹಳ್ಳಿಯ ಶ್ರೀ ಹಳೆಯೂರು ಆಂಜನೇಯ ಸ್ವಾಮಿ ದೇವಾಲಯದಲ್ಲಿ ದಿನಾಂಕ 30.8 2026ನೇ ಭಾನುವಾರ ಮಧ್ಯಾರಾಧನೆ ಅಂಗವಾಗಿ ಶ್ರೀ ಗುರು ರಾಘವೇಂದ್ರ ರಾಯರ 35ನೇ ಆರಾಧನಾ ಮಹೋತ್ಸವವನ್ನು ಹಮ್ಮಿಕೊಳ್ಳಲಾಗಿದೆ

ಅಂದು ತುಮಕೂರಿನ ಶ್ರೀ ರಾಯರ ಮಠದ ಶ್ರೀ ಅನಂತಚಾರ್ಯ ರವರ ನೇತೃತ್ವದಲ್ಲಿ ಪೂಜಾ ಕಾರ್ಯಕ್ರಮಗಳನ್ನು ಅರ್ಚಕರಾದ ಲಕ್ಷ್ಮೀಶ್ ಪ್ರಜ್ವಲ್ ನೆರವೇರಿಸಿ ಕೊಡಲಿದ್ದಾರೆ. ಅಂದು ಮಧ್ಯಾಹ್ನ 1:30ಕ್ಕೆ ಗೋ ಪೂಜೆ, ಮಧ್ಯಾಹ್ನ 2:00ಕ್ಕೆ ಗಣಪತಿ ಹೋಮ ಅಷ್ಟಾಕ್ಷರಿ ಹೋಮ ಶ್ರೀರಾಯರಿಗೆ ಪಂಚಾಮೃತ ಅಭಿಷೇಕ, ಶ್ರೀರಾಯರ 8 ಸುತ್ತು ಪ್ರಾಂಗಣ ಉತ್ಸವ ಮಹಾಮಂಗಳಾರತಿ ಮತ್ತು ಪ್ರಸಾದ ವಿತರಣೆಯನ್ನು ಮಾಡಲಾಗುವುದು.

ಶ್ರೀ ಗುರುರಾಯರ ಅಷ್ಟಾಕ್ಷರಿ ಮಂತ್ರ ಲೇಖನ ಬರೆಯುವರು ಶ್ರೀ ಆಂಜನೇಯ ಸ್ವಾಮಿ ಅರ್ಚಕ ಬಳಿ ಪಡೆದು ಪೂಜಾ ಸಮಯದಲ್ಲಿ ಲೇಖನ ಪತ್ರ,ತುಳಸಿ ಪತ್ರೆ ಯೊಂದಿಗೆ ಅರ್ಪಿಸಬಹುದಾಗಿದೆ.

ದಿನಾಂಕ 31 8 2026ನೇ ಸೋಮವಾರ ಉತ್ತರಾರಾದನೆ ಅಂಗವಾಗಿ ಊರಿನ ಪ್ರಮುಖ ಬೀದಿಗಳಲ್ಲಿ ಸಂಜೆ 6ಕ್ಕೆ ವಿದ್ಯುತ್ ದೀಪ ಅಲಂಕಾರಗೊಂಡ ವಾಹನದಲ್ಲಿ ರಾಯರ ಉತ್ಸವವನ್ನು ಏರ್ಪಡಿಸಲಾಗಿದ್ದು ಹೆಚ್ಚಿನ ಸಂಖ್ಯೆ ಲಿ ರಾಯರ ಭಕ್ತರು ಭಾಗವಹಿಸಬೇಕಾಗಿ ಶ್ರೀ ಗುರುರಾಯರ ಆರಾಧನಾ ಸಮಿತಿ ತಿಳಿಸಿದ್ದಾರೆ.

# ಮಕ್ಕಳಿಗೆ ಕಾನೂನು ಅರಿವು ಅಗತ್ಯ: ಪಿಎಸ್‌ಐ ತೀರ್ಥೇಶ್




**ಕೊರಟಗೆರೆ :** ಚಿಕ್ಕ ವಯಸ್ಸಿನಲ್ಲಿ ಮಾಡುವ ಸಣ್ಣ ತಪ್ಪುಗಳು ಮುಂದೆ ದೊಡ್ಡ ಸಮಸ್ಯೆಗಳಿಗೆ ಕಾರಣವಾಗಬಹುದು. ಆದ್ದರಿಂದ ವಿದ್ಯಾರ್ಥಿಗಳು ಬಾಲ್ಯದಿಂದಲೇ ಕಾನೂನು, ಶಿಸ್ತು ಹಾಗೂ ಜವಾಬ್ದಾರಿಯ ಅರಿವು ಬೆಳೆಸಿಕೊಂಡು ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಕೊರಟಗೆರೆ ಪೊಲೀಸ್ ಠಾಣೆಯ ಪಿಎಸ್‌ಐ ತೀರ್ಥೇಶ್ ತಿಳಿಸಿದರು.

ಪಟ್ಟಣದ ಪೊಲೀಸ್ ಠಾಣೆಗೆ ಕನ್ನಿಕಾ ವಿದ್ಯಾಪೀಠದ ವಿದ್ಯಾರ್ಥಿಗಳು ಶೈಕ್ಷಣಿಕ ಭೇಟಿಯಾಗಿ ಪೊಲೀಸ್ ಇಲಾಖೆಯ ಕಾರ್ಯವೈಖರಿ ಮತ್ತು ಕಾನೂನು-ಸುವ್ಯವಸ್ಥೆ ಕುರಿತು ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಮಕ್ಕಳೊಂದಿಗೆ ಸಂವಾದ ನಡೆಸಿದ ಪಿಎಸ್‌ಐ ತೀರ್ಥೇಶ್ ಅವರು, ಕಾನೂನು ಉಲ್ಲಂಘನೆ ಮಾಡಿದವರಿಗೆ ಕಾನೂನಿನ ಪ್ರಕಾರ ಶಿಕ್ಷೆ ಇರುತ್ತದೆ. ವಿದ್ಯಾರ್ಥಿಗಳು ಯಾವುದೇ ರೀತಿಯ ತಪ್ಪು ಚಟುವಟಿಕೆಗಳಿಗೆ ಒಳಗಾಗದೆ, ಶಿಸ್ತುಬದ್ಧ ಜೀವನ ನಡೆಸುವ ಮೂಲಕ ತಮ್ಮ ಭವಿಷ್ಯವನ್ನು ಉತ್ತಮವಾಗಿ ಕಟ್ಟಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಪೊಲೀಸರು ಕೇವಲ ಅಪರಾಧಿಗಳನ್ನು ಹಿಡಿದು ಶಿಕ್ಷಿಸುವ ಕೆಲಸ ಮಾಡುತ್ತಾರೆ ಎಂಬ ಭಾವನೆ ಮಕ್ಕಳಲ್ಲಿ ಇರಬಾರದು. ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡುವುದು, ಜನರ ಸುರಕ್ಷತೆ ಮತ್ತು ಕಾನೂನಿನ ರಕ್ಷಣೆ ಪೊಲೀಸರ ಪ್ರಮುಖ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಪೊಲೀಸ್ ಠಾಣೆಯ ಭೇಟಿಯ ವೇಳೆ ವಿದ್ಯಾರ್ಥಿಗಳು ಆರೋಪಿಗಳನ್ನು ಕಾನೂನಿನ ಮುಂದೆ ಹೇಗೆ ವಿಚಾರಣೆಗೆ ಒಳಪಡಿಸಲಾಗುತ್ತದೆ, ತಪ್ಪಿತಸ್ಥರಿಗೆ ಯಾವ ರೀತಿಯ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ, ದೂರು ಸ್ವೀಕರಿಸುವ ವಿಧಾನ, ಪೊಲೀಸ್ ಸಿಬ್ಬಂದಿಯ ಕರ್ತವ್ಯಗಳು ಸೇರಿದಂತೆ ವಿವಿಧ ವಿಷಯಗಳ ಕುರಿತು ಕುತೂಹಲದಿಂದ ಮಾಹಿತಿ ಪಡೆದರು. ಪೊಲೀಸ್ ಠಾಣೆಗೆ ಭೇಟಿ ನೀಡುವ ಮೂಲಕ ಮಕ್ಕಳಲ್ಲಿ ಪೊಲೀಸರ ಬಗ್ಗೆ ಇದ್ದ ಭಯವನ್ನು ದೂರ ಮಾಡುವುದರ ಜೊತೆಗೆ, ಕಾನೂನು ಪಾಲನೆ, ಸಾಮಾಜಿಕ ಜವಾಬ್ದಾರಿ ಮತ್ತು ನಾಗರಿಕ ಕರ್ತವ್ಯಗಳ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಈ ಶೈಕ್ಷಣಿಕ ಭೇಟಿ ಆಯೋಜಿಸಲಾಗಿತ್ತು. ವಿದ್ಯಾರ್ಥಿಗಳು ಪೊಲೀಸ್ ಸಿಬ್ಬಂದಿಯೊಂದಿಗೆ ಸಂವಾದ ನಡೆಸಿ ತಮ್ಮ ಹಲವು ಪ್ರಶ್ನೆಗಳಿಗೆ ಉತ್ತರ ಪಡೆದುಕೊಂಡರು. ಈ ಸಂದರ್ಭದಲ್ಲಿ ಎಎಸ್‌ಐ ಜನಾರ್ದನ್, ಗೋವಿಂದಾಯ್ಕ, ಪೊಲೀಸ್ ಸಿಬ್ಬಂದಿಗಳಾದ ಮಹೇಶ್, ಸಂಜೀವರಡ್ಡಿ, ರಂಗರಾಜು, ಆಕಾಶ್, ದಯಾನಂದ, ಮಾಲ, ಕನ್ನಿಕಾ ವಿದ್ಯಾಪೀಠದ ಶಿಕ್ಷಕಿಯರಾದ ಚೇತನ, ದೀಪಾ, ದಿವ್ಯಶ್ರೀ, ಅನುಶ್ರೀ ಸೇರಿದಂತೆ ಪೊಲೀಸ್ ಸಿಬ್ಬಂದಿಗಳು ಇದ್ದರು.

# ದಸರಾ ಪ್ರಮುಖ ಆಕರ್ಷಣೆ ಜಂಬೂಸವಾರಿ: ಡಾ.ಯತೀಂದ್ರ



**ಮೈಸೂರು:** ವಿಶ್ವ ವಿಖ್ಯಾತ ಮೈಸೂರು ದಸರಾದ ಪ್ರಮುಖ ಆಕರ್ಷಣೆ ಜಂಬೂಸವಾರಿ ಆಗಿದ್ದು, ಜಂಬೂ ಸವಾರಿಯಲ್ಲಿ ಭಾಗವಹಿಸುವ ಆನೆಗಳ ಗಜ ಪಯಣಕ್ಕೆ ಇಂದು ಚಾಲನೆ ನೀಡಲಾಗಿದೆ ಎಂದು ನಗರಾಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ ಯತೀಂದ್ರ ಸಿದ್ದರಾಮಯ್ಯ ಅವರು ತಿಳಿಸಿದರು. ವಾರ್ತಾಪತ್ರಿಕೆಚಂದಾದಾರಿಕೆ

ಇಂದು ಹುಣಸೂರು ತಾಲ್ಲೂಕಿನ ವೀರನಹೊಸಹಳ್ಳಿ ಗ್ರಾಮದಲ್ಲಿ ದಸರಾ ಗಜಪಯಣ 2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮೈಸೂರು ದಸರಾಕ್ಕೆ 400 ಕ್ಕೂ ಹೆಚ್ಚಿನ ವರ್ಷಗಳ ಇತಿಹಾಸವಿದೆ. ನಾಡಹಬ್ಬ ದಸರಾ ನಮ್ಮ ಸಂಸ್ಕೃತಿ ಕಲೆ ಸಾಹಿತ್ಯ ವನ್ನು ಬಿಂಬಿಸುವ ಹಬ್ಬ. ದಸರಾ ವಿಶ್ವವಿಖ್ಯಾತ ವಾಗಿದೆ. ದಸರಾದಲ್ಲಿ ಪ್ರಮುಖ ಆಕರ್ಷಣೆ ಜಂಬೂಸವಾರಿ. ನಮ್ಮ ಗಜ ಪಡೆಯು ಜಂಬೂಸವಾರಿಯಲ್ಲಿ ಆನೆ ಅಂಬಾರಿಯನ್ನು ಹೊತ್ತು ಸಾಗುತ್ತದೆ. ಇಂದು ಆನೆಗಳನ್ನು ಮೈಸೂರಿಗೆ ಕರೆದುಕೊಂಡು ಹೋಗಿ 2 ತಿಂಗಳು ತರಬೇತಿ ನೀಡಲಾಗುತ್ತದೆ. ಅಲ್ಲಿ ಉತ್ತಮ ಪೌಷ್ಟಿಕ ಆಹಾರವನ್ನು ನೀಡಲಾಗುತ್ತದೆ. ಅಲ್ಲದೆ ವರ್ಷ ಪೂರ್ತಿ ಪೌಷ್ಟಿಕ ಆಹಾರ ನೀಡಿ ಆನೆಗಳ ಆರೋಗ್ಯ ತಪಾಸಣೆಯನ್ನು ಕಾಲ ಕಾಲಕ್ಕೆ ಮಾಡಲಾಗುತ್ತದೆ ಎಂದರು.

ಸುಮಾರು 6 ವರ್ಷಗಳ ಕಾಲ ಅಂಬಾರಿಯನ್ನು ಹೊತ್ತು ನಿವೃತ್ತಿ ಹೊಂದಿದ ಅಭಿಮನ್ಯು ಆನೆಗೆ ಇಂದು ಬೀಳ್ಕೊಡುಗೆ ನೀಡಲಾಗುತ್ತಿದೆ. ಅಭಿಮನ್ಯು ಆರೋಗ್ಯ ಯುತವಾಗಿ ನೂರಾರು ವರ್ಷ ಬದುಕಲಿ ಎಂದು ಹಾರೈಸುತ್ತೇನೆ. ಅರಣ್ಯದಂಚಿನ ರೈತರು ಸಾಗುವಳಿ ಮಾಡುತ್ತಿರುವ ಪ್ರದೇಶ ಹಾಗೂ ಮನೆ ಕಟ್ಟಿಕೊಂಡಿರುವ ಪ್ರದೇಶ ಅರಣ್ಯ ಇಲಾಖೆಗೆ ಸೇರಿದ್ದು ಎಂದು ತೊಂದರೆ ಆಗುತ್ತಿರುವ ಕುರಿತು ಹುಣಸೂರು ಶಾಸಕರಾದ ಜಿ ಡಿ ಹರೀಶ್ ಗೌಡ ಅವರು ಗಮನ ಸೆಳೆದಿದ್ದು, ಈ ಬಗ್ಗೆ ಕಂದಾಯ ಮತ್ತು ಅರಣ್ಯ ಇಲಾಖೆಯ ಜಂಟಿ ಸರ್ವೇ ಮಾಡಿ ಪರಿಹಾರ ಕಂಡುಕೊಳ್ಳಲಾಗುವುದು. ಲಕ್ಷ್ಮಣ ತೀರ್ಥ ನದಿಗೆ ಚರಂಡಿ ನೀರು ಸೇರದಂತೆ ತಡೆಯಲು ಒಳಚರಂಡಿ ವ್ಯವಸ್ಥೆ ಮಾಡಲು ಅನುಧಾನ ನೀಡಿ ಕ್ರಮ ವಹಿಸಲಾಗುವುದು ಎಂದರು.

ಮಾನವ ಮತ್ತು ಪ್ರಾಣಿ ಸಂಘರ್ಷ ತಡೆಯಲು ಬ್ಯಾರಿಕೇಡ್ ವ್ಯವಸ್ಥೆ ಹಾಗೂ ಬೇಲಿ ವ್ಯವಸ್ಥೆ ಮಾಡಲಾಗಿದೆ. ಪ್ರಾಣಿಗಳ ಜೊತೆ ಸೌಹಾರ್ದತೆಯಿಂದ ವರ್ತಿಸಬೇಕು. ಪ್ರಾಣಿಗಳಿಗೆ ತೊಂದರೆ ನೀಡದೇ ಕಾಡಿನಲ್ಲಿ ಸ್ವತಂತ್ರ್ಯವಾಗಿ ಇರಲು ಬಿಡಬೇಕು. ಈ ಬಾರಿ ದಸರಾದಲ್ಲಿ ಏರ್ ಶೋ ಮಾಡಲು ಕ್ರಮ ವಹಿಸಲಾಗುವುದು ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹುಣಸೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ ಡಿ ಹರೀಶ್ ಗೌಡ ಅವರು ಮಾತನಾಡಿ 400 ವರ್ಷಗಳ ಇತಿಹಾಸ ಇರುವ ಮೈಸೂರು ದಸರಾ ಒಂದು ವಿಶಿಷ್ಟ ಕಾರ್ಯಕ್ರಮ, ಅಂದಿನ ಮಹಾರಾಜರ ಕಾಲದಿಂದ ಇಂದಿನ ಪ್ರಜಾಪ್ರಭುತ್ವದ ಕಾಲದಲ್ಲಿಯೂ ದಸರಾವನ್ನು ವಿಜೃಂಭಣೆಯಿಂದ ಆಚರಣೆ ಮಾಡಲಾಗುತ್ತಿದೆ. ದಸರಾವು ನಮ್ಮ ಹುಣಸೂರು ತಾಲೂಕಿನಿಂದ ಗಜಪಯಣದ ಮೂಲಕ ಆರಂಭವಾಗುತ್ತದೆ. ಇದು ಹುಣಸೂರಿನ ಜನತೆಗೆ ಹೆಮ್ಮೆಯ ವಿಷಯ. ಕಳೆದ ಹಲವು ವರ್ಷಗಳಿಂದ ಅಂಬಾರಿ ಹೊತ್ತಿದ್ದ ಅಭಿಮನ್ಯುಗೆ ಬೀಳ್ಕೊಡುಗೆ ನೀಡಲಾಗುತ್ತಿದೆ. ಆನೆಗಳಲ್ಲಿ ಭೀಮ, ಮಹೇಂದ್ರ, ಅಭಿಮನ್ಯು ಎಂದರೆ ಕ್ರೇಜ್ ಆನೆಗಳು ತಮ್ಮದೇ ಆದ ಅಭಿಮಾನಿ ಬಳಗವನ್ನು ಹೊಂದಿವೆ ಎಂದರು.

ಈ ಬಾರಿ ಬರ ಬಂದಿದ್ದು, ಹುಣಸೂರು ತಾಲ್ಲೂಕಿನಲ್ಲಿ ಕೆರೆ ಕಟ್ಟೆಗಳಿಗೆ ನೀರು ತುಂಬಿಸಲು ಕಷ್ಟವಾಗಿದೆ. ಹುಣಸೂರು ತಾಲ್ಲೂಕಿನಲ್ಲಿ ಹೆಚ್ಚಿನ ಬೆಳೆ ನಷ್ಟವಾಗಿದೆ. ಹುಣಸೂರು ತಾಲ್ಲೂಕನ್ನು ಬರ ಪೀಡಿತ ತಾಲ್ಲೂಕು ಆಗಿ ಘೋಷಣೆ ಮಾಡಬೇಕು. ಕಾಡಂಚಿನ ಪ್ರದೇಶಗಳಲ್ಲಿ ರೈತರು ವ್ಯವಸಾಯ ಮಾಡುತ್ತಿದ್ದು, ಈ ಭೂಮಿ ಅರಣ್ಯ ಇಲಾಖೆಗೆ ಸೇರಿದ್ದು ಎಂದು ನೋಟಿಸ್ ಗಳನ್ನು ನೀಡಲಾಗುತ್ತಿದೆ. ಆದ್ದರಿಂದ ಅರಣ್ಯ ಇಲಾಖೆ ಹಾಗೂ ಕಂದಾಯ ಇಲಾಖೆ ಜಂಟಿ ಸರ್ವೇ ಮಾಡಿ ಅರಣ್ಯ ಗಡಿಯನ್ನು ಗುರುತಿಸಬೇಕು. ರೈತರಿಗೆ ತೊಂದರೆ ಆಗದಂತೆ ಸರ್ಕಾರ ಕ್ರಮ ವಹಿಸಬೇಕು. ಕಾಡುಪ್ರಾಣಿಗಳಿಂದ ಬೆಳೆ ನಷ್ಟ ಆದರೆ ಪರಿಹಾರವನ್ನು ನೀಡಬೇಕು ಎಂದು ಮನವಿ ಮಾಡಿದರು. ಲಕ್ಷ್ಮಣ ತೀರ್ಥ ನದಿ ಕಲುಷಿತವಾಗುತ್ತಿದ್ದು, ಒಳ ಚರಂಡಿ ನೀರನ್ನು ಲಕ್ಷ್ಮಣ ತೀರ್ಥ ನದಿಗೆ ಬಿಡದಂತೆ ಕ್ರಮವಹಿಸಬೇಕು ಎಂದರು.

ದಸರಾ ಗಜಪಯಣದ ಕಿರುಹೊತ್ತಿಗೆಯನ್ನು ಬಿಡುಗಡೆ ಮಾಡಲಾಯಿತು. ಆನೆಗಳ ಮಾವುತರಿಗೆ ಹಾಗೂ ಕಾವಡಿಗಳಿಗೆ ಸನ್ಮಾನ ಮಾಡಲಾಯಿತು. ಅರ್ಜುನ ಪ್ರಶಸ್ತಿಯನ್ನು ಅಭಿಮನ್ಯು ಮಾವುತ ವಸಂತ ಹಾಗೂ ಕಾವಡಿ ರಾಘು ಜೆ ಕೆ ಅವರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಅರಣ್ಯ ವಸತಿ ವಿಹಾರಧಾಮಗಳ ಅಧ್ಯಕ್ಷರು ಹಾಗೂ ಹೆಚ್ ಡಿ ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಅನಿಲ್ ಚಿಕ್ಕಮಾದು, ಕೆ ಆರ್ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಿ ರವಿಶಂಕರ್, ಕರ್ನಾಟಕ ಮೃಗಾಲಯದ ಅಧ್ಯಕ್ಷರಾದ ರಂಗಸ್ವಾಮಿ, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಅಯೂಬ್ ಖಾನ್, ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾದ ರಾಮಪ್ಪ, ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷರಾದ ಪುಷ್ಪ ಅಮರನಾಥ್, ಪ್ರಾದೇಶಿಕ ಆಯುಕ್ತರಾದ ನಿತೀಶ್ ಪಾಟೀಲ್, ಜಿಲ್ಲಾಧಿಕಾರಿಗಳಾದ ಜಿ ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಳಾದ ಎಸ್ ಯುಕೇಶ್ ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಮಲ್ಲಿಕಾರ್ಜುನ ಬಾಲದಂಡಿ, ಡಿ ಸಿ ಎಫ್ ಪ್ರಭುಗೌಡ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಅರಣ್ಯಭವನ ತಲುಪಿದ ದಸರಾ ಆನೆಗಳು, ನಾಳೆ ಅರಮನೆ ಪ್ರವೇಶ



**ಮೈಸೂರು:** ವಿಶ್ವವಿಖ್ಯಾತ ಮೈಸೂರು ದಸರಾ ಜಂಬೂಸವಾರಿಯಲ್ಲಿ ಪಾಲ್ಗೊಳ್ಳಲಿರುವ ಮೊದಲ ಹಂತದ ಗಜಪಡೆ ನಗರದ ಅರಣ್ಯಭವನ ತಲುಪಿದ್ದು, ನಾಳೆ ಅರಮನೆ ಪ್ರವೇಶಿಸಲಿದೆ.ಹುಣಸೂರು ತಾಲ್ಲೂಕಿನ ವೀರನಹೊಸಳ್ಳಿ ಗೇಟ್‌ನಿಂದ ನಿನ್ನೆ ಅದ್ದೂರಿಯಾಗಿ ಗಜಪಯಣಕ್ಕೆ ಚಾಲನೆ ನೀಡಲಾಗಿತ್ತು. ಸಂಜೆ ವೇಳೆಗೆ ಆನೆಗಳು ಸಾಂಸ್ಕೃತಿಕ ನಗರಿ ಮೈಸೂರಿಗೆ ಆಗಮಿಸಿ, ಅರಣ್ಯಭವನದಲ್ಲಿ ವಿಶ್ರಾಂತಿ ಪಡೆದವು.

ನಾಳೆ ಬೆಳಿಗ್ಗೆ 10 ಗಂಟೆಗೆ ಮಹೇಂದ್ರ, ಧನಂಜಯ, ಏಕಲವ್ಯ, ಗೋಪಿ, ಶ್ರೀರಾಮ, ಪ್ರಶಾಂತ, ಶ್ರೀಕಂಠ, ಲಕ್ಷ್ಮಿ ಹಾಗೂ ಕಾವೇರಿ ಆನೆಗಳು ಅರಮನೆ ಪ್ರವೇಶಿಸಲಿವೆ. ಆನೆಗಳ ಸ್ವಾಗತಕ್ಕೆ ಜಿಲ್ಲಾಡಳಿತ, ಅರಮನೆ ಆಡಳಿತ ಹಾಗೂ ಅರಣ್ಯ ಇಲಾಖೆ ವತಿಯಿಂದ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಗಜಪಡೆಗಳಿಗೆ ಪೂಜೆ ಸಲ್ಲಿಸಿ ಅದ್ದೂರಿಯಾಗಿ ಸ್ವಾಗತಿಸಲಾಗುವುದು.

ಅರಮನೆ ಪ್ರವೇಶದ ಬಳಿಕ ಆನೆಗಳಿಗೆ ವಿಶೇಷ ಆರೈಕೆ ನೀಡಲಾಗುವುದಲ್ಲದೆ, ಜಂಬೂಸವಾರಿಯಲ್ಲಿ ಪಾಲ್ಗೊಳ್ಳಲು ಅಗತ್ಯವಾದ ತರಬೇತಿಯನ್ನೂ ನೀಡಲಾಗುವುದು. ದುಬಾರೆ ಸಾಕಾನೆ ಶಿಬಿರದ ಸುಗ್ರೀವ ಆನೆಯು ಕೊಡಗಿನಲ್ಲಿ ನಡೆದ ಕಾಡಾನೆ ಸೆರೆ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರಿಂದ ವಿಶ್ರಾಂತಿಯ ಅಗತ್ಯವಿದೆ. ಹೀಗಾಗಿ ಸುಗ್ರೀವನ ಬದಲಿಗೆ ಮತ್ತಿಗೂಡು ಶಿಬಿರದ ಶ್ರೀಕಂಠನನ್ನು ಮೊದಲ ತಂಡಕ್ಕೆ ಆಯ್ಕೆ ಮಾಡಿ ಮೈಸೂರಿಗೆ ಕರೆತರಲಾಗಿದೆ. ಎರಡನೇ ಹಂತದಲ್ಲಿ ಸುಗ್ರೀವ ಮೈಸೂರಿಗೆ ಆಗಮಿಸಲಿದ್ದಾನೆ ಎಂದು ಅರಣ್ಯ ಅಧಿಕಾರಿಗಳು ತಿಳಿಸಿದ್ದಾರೆ.

ಸತತ ಆರು ಬಾರಿ ಚಿನ್ನದ ಅಂಬಾರಿ ಹೊತ್ತು ಸೈ ಎನಿಸಿಕೊಂಡಿದ್ದ ಅಭಿಮನ್ಯು ನಿವೃತ್ತಿಯಾದ ಹಿನ್ನೆಲೆಯಲ್ಲಿ, ನಿನ್ನೆ ವೀರನಹೊಸಳ್ಳಿಯಲ್ಲಿ ಅದ್ದೂರಿಯಾಗಿ ಬೀಳ್ಕೊಡಲಾಯಿತು. ಈ ಬಾರಿ ಚಿನ್ನದ ಅಂಬಾರಿ ಹೊರುವ ಅದೃಷ್ಟ ಯಾವ ಆನೆಗೆ ಒಲಿಯಲಿದೆ ಎಂಬುದು ಸಾರ್ವಜನಿಕರಲ್ಲಿ ಕುತೂಹಲ ಮೂಡಿಸಿದೆ. ಆನೆಗಳಿಗೆ ತಾಲೀಮು ನೀಡಿದ ಬಳಿಕ ಚಿನ್ನದ ಅಂಬಾರಿ ಹೊರುವ ಆನೆ ಹಾಗೂ ಅದರ ಸಾರಥಿಯನ್ನು ಅಂತಿಮವಾಗಿ ನಿರ್ಧರಿಸಲಾಗುವುದು ಎಂದು ಮೂಲಗಳು ತಿಳಿಸಿವೆ.

# ವಿದ್ಯಾರ್ಥಿಗಳ ಸಮಸ್ಯೆ ಶಿಕ್ಷಣ ಸುಧಾರಣೆಗೆ ಸಂಪುಟ ಉಪಸಮಿತಿ ರಚನೆ



**ಬೆಂಗಳೂರು:** ವಿದ್ಯಾರ್ಥಿಗಳ ಸಮಸ್ಯೆಗಳನ್ನು ಆಲಿಸಿ, ಶಿಕ್ಷಣ ವ್ಯವಸ್ಥೆಯಲ್ಲಿ ಅಗತ್ಯ ಸುಧಾರಣೆಗಳನ್ನು ತರಲು ರಾಜ್ಯ ಸರ್ಕಾರ ಮುಂದಾಗಿದೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಆರೋಗ್ಯ ಖಾತೆ ಸಚಿವ ಯು.ಟಿ. ಖಾದರ್ ನೇತೃತ್ವದಲ್ಲಿ ?ವಿದ್ಯಾರ್ಥಿಗಳ ಸಮಸ್ಯೆಗಳು ಮತ್ತು ಶಿಕ್ಷಣ ಸುಧಾರಣೆಗಳ ಕುರಿತು ಸಂಪುಟ ಉಪಸಮಿತಿ? ರಚಿಸಿದ್ದಾರೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಶಿಕ್ಷಣ ವ್ಯವಸ್ಥೆಯಲ್ಲಿ ಅಮೂಲಾಗ್ರ ಬದಲಾವಣೆ ತರುವ ಉದ್ದೇಶದಿಂದ ಮುನ್ನಡೆಸುತ್ತಿರುವ ?ಛಾತ್ರೋಂ ಕಿ ಗೂಂಜ್? ವಿದ್ಯಾರ್ಥಿ ಚಳುವಳಿಗೆ ಸ್ಪಂದಿಸಿರುವ ರಾಜ್ಯ ಸರ್ಕಾರ, ವಿದ್ಯಾರ್ಥಿಗಳ ಸಮಸ್ಯೆ ಹಾಗೂ ಆಕಾಂಕ್ಷೆಗಳನ್ನು ಅರಿತು ಸೂಕ್ತ ಸುಧಾರಣೆಗಳನ್ನು ಜಾರಿಗೆ ತರಲು ಉದ್ದೇಶಿಸಿದೆ.

ಸಚಿವ ಯು.ಟಿ. ಖಾದರ್ ಅವರ ನೇತೃತ್ವದಲ್ಲಿ ರಚಿಸಿರುವ ಈ ಸಂಪುಟ ಉಪಸಮಿತಿಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ, ಸಚಿವರಾದ ಬಸವರಾಜ ರಾಯರೆಡ್ಡಿ, ಪ್ರಿಯಾಂಕ್ ಖರ್ಗೆ, ಶರಣಪ್ರಕಾಶ್ ಪಾಟೀಲ್ ಅವರು ಸದಸ್ಯರಾಗಿದ್ದಾರೆ.ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ,

ಅವರ ಸಮಸ್ಯೆಗಳು, ಆಕಾಂಕ್ಷೆಗಳು ಮತ್ತು ಅಭಿಪ್ರಾಯಗಳನ್ನು ಆಲಿಸಿ, ವಿದ್ಯಾರ್ಥಿಗಳು ಹಾಗೂ ಯುವಜನರು ಎದುರಿಸುತ್ತಿರುವ ಸವಾಲುಗಳಿಗೆ ಪರಿಹಾರ ಒದಗಿಸುವಂತಹ ಶಿಕ್ಷಣ ಸುಧಾರಣೆಗಳನ್ನು ಶಿಫಾರಸು ಮಾಡುವಂತೆ ಸಮಿತಿಗೆ ಮುಖ್ಯಮಂತ್ರಿ ಸೂಚಿಸಿದ್ದಾರೆ. ರಾಜ್ಯದ ಭವಿಷ್ಯ ಯುವಜನರ ಮೇಲೆ ನಿಂತಿದ್ದು, ಅವರಿಗೆ ಗುಣಮಟ್ಟದ ಶಿಕ್ಷಣ, ಅಗತ್ಯ ಮೂಲಸೌಕರ್ಯ ಹಾಗೂ ಸಮರ್ಪಕ ಅವಕಾಶಗಳನ್ನು ಒದಗಿಸುವುದು ಸರ್ಕಾರದ ಬದ್ಧತೆಯಾಗಿದೆ ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ವಿದ್ಯಾರ್ಥಿಗಳು ಮತ್ತು ರಾಜ್ಯದ ಯುವಜನರ ಸಮಸ್ಯೆಗಳು ಹಾಗೂ ಭಾವನೆಗಳನ್ನು ಅರ್ಥಮಾಡಿಕೊಂಡು,

ಅವರ ಆಕಾಂಕ್ಷೆಗಳಿಗೆ ಸ್ಪಂದಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು, ಯುವಜನರು ಹಾಗೂ ಸಾರ್ವಜನಿಕರಿಂದ ಬರುವ ಸಲಹೆ–ಸೂಚನೆಗಳನ್ನು ಮುಕ್ತವಾಗಿ ಸ್ವೀಕರಿಸಲಾಗುವುದು.

ಎಲ್ಲರೂ ಒಟ್ಟಾಗಿ ಯುವಜನರಿಗೆ ಉತ್ತಮ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಕೈಜೋಡಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

# ಜೀವಾವಧಿ ಶಿಕ್ಷೆಗೆ ಗುರಿಯಾಗಿ ಪೆರೋಲ್ ಪಡೆದು ಪರಾರಿಯಾಗಿದ್ದ ಅಪರಾಧಿ 40 ವರ್ಷಗಳ ಬಳಿಕ ಅರೆಸ್ಟ್



**ಹೈದರಾಬಾದ್:** ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿ ಪೆರೋಲ್ ಪಡೆದ ಬಳಿಕ, ಶಿಕ್ಷೆ ಆರಂಭವಾದ ಆರು ತಿಂಗಳಲ್ಲೇ ಜೈಲಿನಿಂದ ಪರಾರಿಯಾಗಿದ್ದ ಅಪರಾಧಿಯನ್ನು 40 ವರ್ಷಗಳ ಬಳಿಕ ತೆಲಂಗಾಣ ಪೊಲೀಸರು ಬಂಧಿಸಿ ಮತ್ತೆ ಜೈಲಿಗಟ್ಟಿದ್ದಾರೆ.ನಾಲ್ಕು ದಶಕಗಳ ಕಾಲ ತಲೆಮರೆಸಿಕೊಂಡಿದ್ದ ಅಪರಾಧಿ ಈ ಅವಧಿಯಲ್ಲಿ ಸರ್ಕಾರಿ ಶಿಕ್ಷಕನಾಗಿ ಕೆಲಸ ಗಿಟ್ಟಿಸಿಕೊಳ್ಳುವುದರ ಜತೆಗೆ ರಾಜ್ಯ ಪ್ರಶಸ್ತಿಯನ್ನೂ ಪಡೆದಿದ್ದ ಎಂಬುದು ಇದೀಗ ಬೆಳಕಿಗೆ ಬಂದಿದೆ.

ಈಗ 70ರ ದಶಕದ ಅಂತ್ಯದಲ್ಲಿರುವ ಸಂದೇಲ ವೀರಣ್ಣನಿಗೆ 1970ರ ದಶಕದ ಉತ್ತರಾರ್ಧದಲ್ಲಿ ನಡೆದ ಕೊಲೆ ಪ್ರಕರಣದಲ್ಲಿ 1983ರಲ್ಲಿ ಜೀವಾವಧಿ ಶಿಕ್ಷೆ ವಿಧಿಸಲಾಗಿತ್ತು. ಆದರೆ, ಪೆರೋಲ್ ಪಡೆದ ಬಳಿಕ ಶಿಕ್ಷೆ ಆರಂಭವಾದ ಆರು ತಿಂಗಳಲ್ಲೇ ಜೈಲಿನಿಂದ ಪರಾರಿಯಾಗಿ ತಲೆಮರೆಸಿಕೊಂಡಿದ್ದ. 40 ವರ್ಷಗಳ ಕಾಲ ಪೊಲೀಸರಿಗೆ ಸಿಗದೆ ಇದ್ದ ವೀರಣ್ಣನನ್ನು ಮೇ 2024ರಲ್ಲಿ ಬಂಧಿಸಲಾಗಿತ್ತು. ಮಹಬೂಬಾಬಾದ್‌ನಲ್ಲಿ ಸ್ಥಳೀಯ ಪೊಲೀಸರ ಸಹಕಾರದೊಂದಿಗೆ ತೆಲಂಗಾಣ ಕಾರಾಗೃಹ ಇಲಾಖೆಯ ವಿಶೇಷ ಕಾರ್ಯಪಡೆ ವೀರಣ್ಣನನ್ನು ಬಂಧಿಸಿತ್ತು. ಬಳಿಕ ಆತನನ್ನು ಚೆರ್ಲಪಲ್ಲಿ ಕೇಂದ್ರ ಕಾರಾಗೃಹದಲ್ಲಿ ಇರಿಸಲಾಗಿದೆ. ವೀರಣ್ಣನ ಪತ್ನಿ ಸಂದೇಲ ಚರಮ ಅವರು ಆತನ ಬಂಧನವನ್ನು ಪ್ರಶ್ನಿಸಿ, ವೈದ್ಯಕೀಯ ಹಾಗೂ ಅನುಕಂಪದ ಆಧಾರದ ಮೇಲೆ ಬಿಡುಗಡೆ ಮಾಡುವಂತೆ ಕೋರಿ ನ್ಯಾಯಾಲಯದ ಮೊರೆ ಹೋಗಿದ್ದರು.ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಟಿ. ಮಾಧವಿ ದೇವಿ ಅವರು ವೀರಣ್ಣನ ನಡೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿ ಅರ್ಜಿಯನ್ನು ವಜಾಗೊಳಿಸಿದ್ದಾರೆ. ಅಲ್ಲದೆ, ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ವೀರಣ್ಣನನ್ನು ಮತ್ತೆ ಜೈಲಿಗೆ ಕಳುಹಿಸುವಂತೆ ಆದೇಶಿಸಿದ್ದಾರೆ.

ಪೆರೋಲ್ ಉಲ್ಲಂಘನೆಗೆ ಸಂಬಂಧಿಸಿದಂತೆ ತನ್ನ ವಾದ ಮಂಡಿಸಲು ವೀರಣ್ಣನಿಗೆ ನ್ಯಾಯಯುತ ಅವಕಾಶ ನೀಡಲಾಗಿಲ್ಲ ಎಂಬ ಪ್ರತಿವಾದವನ್ನು ನ್ಯಾಯಾಲಯ ತಿರಸ್ಕರಿಸಿದೆ. ಜೈಲು ಅಧಿಕಾರಿಗಳು ಶೋಕಾಸ್ ನೋಟಿಸ್ ಜಾರಿ ಮಾಡಿ, ಇತ್ತೀಚಿನ ಪೆರೋಲ್ ಮನವಿಯನ್ನು ತಿರಸ್ಕರಿಸುವ ಮುನ್ನ ವಿಚಾರಣೆ ನಡೆಸಿದ್ದಾರೆ ಎಂಬುದು ನ್ಯಾಯಾಲಯದ ಗಮನಕ್ಕೆ ಬಂದಿದೆ. ಇದಲ್ಲದೆ, ವೀರಣ್ಣನಿಗೆ ವರದಿಯಾಗಿರುವ ಅನಾರೋಗ್ಯಗಳಿಗೆ ಅಗತ್ಯ ವೈದ್ಯಕೀಯ ಆರೈಕೆ ಒದಗಿಸಲು ಜೈಲು ವ್ಯವಸ್ಥೆ ಸಜ್ಜಾಗಿದೆ ಎಂದು ರಾಜ್ಯ ಸರ್ಕಾರದ ಕಾನೂನು ಪ್ರತಿನಿಧಿ ನ್ಯಾಯಾಲಯಕ್ಕೆ ತಿಳಿಸಿದ್ದಾರೆ.

# ಮತ್ತೆ ಸಂಸತ್ ಅಧಿವೇಶನ ಕರೆಯುವ ಸಾಧ್ಯತೆಗಳ ಬಗ್ಗೆ ಸುಳಿವು ನೀಡಿದ ಸಚಿವ ಕಿರಣ್ ರಿಜಿಜು



**ನವದೆಹಲಿ:** ಸಂಸತ್ತಿನ ಮಳೆಗಾಲದ ಅಧಿವೇಶನ ಮುಕ್ತಾಯಗೊಂಡು ಅನಿರ್ದಿಷ್ಟಾವಧಿಗೆ ಮುಂದೂಡಲ್ಪಟ್ಟಿದ್ದರೂ, ಸದನವನ್ನು ಔಪಚಾರಿಕವಾಗಿ ಮುಕ್ತಾಯಗೊಳಿಸದಿರುವ ಹಿನ್ನೆಲೆಯಲ್ಲಿ ಸಂಸತ್ತನ್ನು ಮತ್ತೆ ಕರೆಯುವ ಸಾಧ್ಯತೆಗಳ ಬಗ್ಗೆ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಹತ್ವದ ಸುಳಿವು ನೀಡಿದ್ದಾರೆ.ಇಂಡಿಯಾ ಟುಡೇ ಟಿವಿಗೆ ನೀಡಿದ ಸಂದರ್ಶನದಲ್ಲಿ ಅವರು ಈ ಕುರಿತು ಮಾತನಾಡಿದ್ದು, ರಾಜಕೀಯ ವಲಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ.

ಕಳೆದ ಆ.13ರಂದು ಉಭಯ ಸದನಗಳನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಗಿದ್ದರೂ, ಇದುವರೆಗೂ ಅಧಿವೇಶನವನ್ನು ಔಪಚಾರಿಕವಾಗಿ ಮುಕ್ತಾಯಗೊಳಿಸಲಾಗಿಲ್ಲ. 1952ರಿಂದಲೂ ಸಂಸತ್ತಿನ ಅಧಿವೇಶನವನ್ನು ಔಪಚಾರಿಕವಾಗಿ ಮುಕ್ತಾಯಗೊಳಿಸದೆ, ಸದನವನ್ನು ಮತ್ತೆ ಕರೆಯಲಾದ ಹಲವು ನಿದರ್ಶನಗಳಿವೆ ಎಂದು ಕಿರಣ್ ರಿಜಿಜು ತಿಳಿಸಿದ್ದಾರೆ.

ಡಿಲಿಮಿಟೇಶನ್ (ಕ್ಷೇತ್ರ ಪುನರ್‌ವಿಂಗಡಣೆ) ಮಸೂದೆ ಹಾಗೂ ಮಹಿಳಾ ಮೀಸಲಾತಿ ತಿದ್ದುಪಡಿ ಮಸೂದೆಯಂತಹ ಪ್ರಮುಖ ಬಾಕಿ ಮಸೂದೆಗಳನ್ನು ಮತ್ತೆ ಮಂಡಿಸಲು ಸರ್ಕಾರ ಇದೇ ಅಧಿವೇಶನವನ್ನು ಬಳಸಿಕೊಳ್ಳಬಹುದೆಂಬ ಚರ್ಚೆಗಳು ಮುನ್ನೆಲೆಗೆ ಬಂದಿವೆ.

ವಿಶೇಷ ಅಧಿವೇಶನ ಅಥವಾ ಸದನವನ್ನು ಮತ್ತೆ ಕರೆಯುವ ಕುರಿತು ನೇರ ಉತ್ತರ ನೀಡಲು ಸಚಿವರು ನಿರಾಕರಿಸಿದ್ದಾರೆ. ತಮ್ಮ ಹೇಳಿಕೆಗಳನ್ನು ಎರಡೂ ರೀತಿಯಲ್ಲಿ ವ್ಯಾಖ್ಯಾನಿಸಬಹುದು ಎಂದು ಹೇಳುವ ಮೂಲಕ ಅವರು ಈ ವಿಚಾರದಲ್ಲಿ ಕುತೂಹಲ ಕಾಯ್ದುಕೊಂಡಿದ್ದಾರೆ.

ಕಳೆದ ಏಪ್ರಿಲ್‌ನಲ್ಲಿ ನಡೆದ ಮೂರು ದಿನಗಳ ವಿಶೇಷ ಅಧಿವೇಶನದಲ್ಲಿ ಮಹಿಳಾ ಮೀಸಲಾತಿ ಮಸೂದೆಗೆ ಸಂಬಂಧಿಸಿದ 131ನೇ ಸಾಂವಿಧಾನಿಕ ತಿದ್ದುಪಡಿ ಹಾಗೂ ಡಿಲಿಮಿಟೇಶನ್ ಮಸೂದೆಗಳು ಲೋಕಸಭೆಯಲ್ಲಿ ಅಗತ್ಯವಿರುವ ಮೂರನೇ ಎರಡರಷ್ಟು ಬಹುಮತ ಪಡೆಯುವಲ್ಲಿ ವಿಫಲವಾಗಿದ್ದವು.

ಅಧಿವೇಶನವನ್ನು ಸಂಪೂರ್ಣವಾಗಿ ಮುಕ್ತಾಯಗೊಳಿಸದಿರುವ ಹಿನ್ನೆಲೆಯಲ್ಲಿ, ಸರ್ಕಾರ ಮತ್ತೆ ಸದನವನ್ನು ಕರೆದು ಬಾಕಿ ಉಳಿದಿರುವ ಪ್ರಮುಖ ಶಾಸಕಾಂಗ ಕಾರ್ಯಕಲಾಪಗಳನ್ನು ಕೈಗೆತ್ತಿಕೊಳ್ಳಲಿದೆಯೇ ಅಥವಾ ಹೊಸ ತಂತ್ರಗಾರಿಕೆ ರೂಪಿಸಲಿದೆಯೇ ಎಂಬುದು ಮುಂದಿನ ದಿನಗಳಲ್ಲಿ ಸ್ಪಷ್ಟವಾಗಬೇಕಿದೆ. ಸಂಸತ್ತನ್ನು ಯಾವಾಗ ಮತ್ತೆ ಕರೆಯಬೇಕು ಎಂಬುದು ಸಂಪೂರ್ಣವಾಗಿ ಸರ್ಕಾರದ ತೀರ್ಮಾನಕ್ಕೆ ಬಿಟ್ಟ ವಿಚಾರ ಎಂದು ರಿಜಿಜು ಸ್ಪಷ್ಟಪಡಿಸಿದ್ದಾರೆ.

# ಶಾಶ್ವತ ಗಣೇಶ ವಿಸರ್ಜನೆ ಹೊಂಡಕ್ಕೆ ಸ್ಥಳ ಪರಿಶೀಲನೆ: ಡಿಸಿ ಸೂಚನೆ



**ವಿಜಯಪುರ:** ನಗರದ ವಿಸ್ತರಣೆ ಹಾಗೂ ಗಣೇಶೋತ್ಸವದ ಸಂದರ್ಭದಲ್ಲಿ ಹೆಚ್ಚುತ್ತಿರುವ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು ಗಣೇಶ ಮೂರ್ತಿಗಳ ವಿಸರ್ಜನೆಗಾಗಿ ಶಾಶ್ವತ ಹೊಂಡ ನಿರ್ಮಿಸಲು ಸೂಕ್ತ ಸ್ಥಳ ಗುರುತಿಸಿ, ಸ್ಥಳ ಪರಿಶೀಲನೆ ನಡೆಸಿ ಅಂತಿಮ ತೀರ್ಮಾನ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅಧಿಕಾರಿಗಳಿಗೆ ಸೂಚಿಸಿದರು.

ಮಹಾನಗರ ಪಾಲಿಕೆ ಕೇಂದ್ರ ಕಚೇರಿಯಲ್ಲಿ 2026–27ನೇ ಸಾಲಿನ ಗಣೇಶೋತ್ಸವದ ಹಿನ್ನೆಲೆಯಲ್ಲಿ ಬುಧವಾರ ಆಯೋಜಿಸಿದ್ದ ನಗರದ ವಿವಿಧ ಗಜಾನನ ಮಹಾಮಂಡಳಿಗಳು,

ಜನಪ್ರತಿನಿಧಿಗಳು ಹಾಗೂ ಸಂಘ–ಸಂಸ್ಥೆಗಳ ಪದಾಧಿಕಾರಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಐತಿಹಾಸಿಕ ತಾಸಬಾವಡಿಯನ್ನು ಪ್ರಸ್ತುತ ಟಾಟಾ ಕನ್ಸಲ್ಟನ್ಸಿ ಸರ್ವಿಸಸ್ ಸಂಸ್ಥೆ ಪುನರುಜ್ಜೀವನಗೊಳಿಸುತ್ತಿದೆ. ಈ ಹಿನ್ನೆಲೆಯಲ್ಲಿ ತಾಸಬಾವಡಿ ಆವರಣದಲ್ಲಿ ವಿಸರ್ಜನಾ ಹೊಂಡ ನಿರ್ಮಿಸಿದರೆ ಸ್ಥಳಾವಕಾಶದ ಕೊರತೆ ಉಂಟಾಗುವ ಸಾಧ್ಯತೆ ಇರುವುದರಿಂದ, ನಗರದ ಇತರೆ ಸೂಕ್ತ ಸ್ಥಳಗಳಲ್ಲಿ ಶಾಶ್ವತ ಹೊಂಡ ನಿರ್ಮಿಸುವ ಕುರಿತು ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಯಿತು.

ಈ ಹಿನ್ನೆಲೆಯಲ್ಲಿ ಗಜಾನನ ಮಹಾಮಂಡಳದ ಪದಾಧಿಕಾರಿಗಳು ಹಾಗೂ ಅಧಿಕಾರಿಗಳನ್ನೊಳಗೊಂಡ ಜಂಟಿ ತಂಡವು ಆಗಸ್ಟ್ 27ರಂದು ನಗರದ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದೆ. ಸೂಕ್ತ ಸ್ಥಳವನ್ನು ಅಂತಿಮವಾಗಿ ಗುರುತಿಸಿದ ಬಳಿಕ, ಪ್ರಸ್ತಾವನೆಯನ್ನು ವಿಜಯಪುರ ಮಹಾನಗರ ಪಾಲಿಕೆಯ ಮುಂಬರುವ ಸಾಮಾನ್ಯ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಗಣೇಶೋತ್ಸವವನ್ನು ಶಾಂತಿಯುತವಾಗಿ ಹಾಗೂ ಸುವ್ಯವಸ್ಥಿತವಾಗಿ ಆಚರಿಸಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

# ಪ್ರವಾಹದಿಂದ ನೇಪಾಳ ತತ್ತರ: ಸಾವಿನ ಸಂಖ್ಯೆ 165ಕ್ಕೆ ಏರಿಕೆ, 823 ಮಂದಿ ನಾಪತ್ತೆ, ನೆರವಿಗೆ ನಿಂತ ಭಾರತ



**ಕಠ್ಮಂಡು:** ನೇಪಾಳದ ಟಿಬೆಟ್ ಗಡಿ ಪ್ರದೇಶದ ಭೋಟೆ ಕೋಶಿ ನದಿಯಲ್ಲಿ ಸಂಭವಿಸಿದ ವಿನಾಶಕಾರಿ ಹಠಾತ್ ಪ್ರವಾಹದಿಂದ ಅಪಾರ ಸಾವುನೋವು ಸಂಭವಿಸಿದ್ದು, ದೇಶದಲ್ಲಿ ತೀವ್ರ ಆತಂಕದ ವಾತಾವರಣ ನಿರ್ಮಾಣವಾಗಿದೆ.ಹಿಮನದಿ ಕುಸಿತ ಹಾಗೂ ಭೂಕಂಪನ ಚಟುವಟಿಕೆಯಿಂದ ಉಂಟಾದ ಈ ದುರಂತದಲ್ಲಿ ಸಾವಿನ ಸಂಖ್ಯೆ 165ಕ್ಕೆ ಏರಿಕೆಯಾಗಿದೆ ಎಂದು ನೇಪಾಳ ಪೊಲೀಸರು ಹಾಗೂ ರಾಷ್ಟ್ರೀಯ ವಿಪತ್ತು ಅಪಾಯ ಕಡಿತ ಮತ್ತು ನಿರ್ವಹಣಾ ಪ್ರಾಧಿಕಾರ ದೃಢಪಡಿಸಿದೆ.

ನೇಪಾಳದಲ್ಲಿ ಸಂಭವಿಸಿದ ಭೀಕರ ಪ್ರವಾಹದಲ್ಲಿ 300ಕ್ಕೂ ಹೆಚ್ಚು ಭಾರತೀಯರು ನಾಪತ್ತೆಯಾಗಿರುವ ಸಾಧ್ಯತೆಯಿದೆ ಎಂದು ನೇಪಾಳದ ವಿದೇಶಾಂಗ ಸಚಿವ ಶಿಶಿರ್ ಖನಾಲ್ ತಿಳಿಸಿದ್ದಾರೆ. ಸಂವಹನ ಜಾಲಗಳು ಹಾಗೂ ವಿದ್ಯುತ್ ಸಂಪರ್ಕ ಕಡಿತಗೊಂಡಿರುವುದರಿಂದ ಅವರೊಂದಿಗೆ ಸಂಪರ್ಕ ಸಾಧಿಸಲು ಸಾಧ್ಯವಾಗುತ್ತಿಲ್ಲ ಎಂದು ನೇಪಾಳದಲ್ಲಿರುವ ಭಾರತೀಯ ರಾಯಭಾರಿ ನವೀನ್ ಶ್ರೀವಾಸ್ತವ ತಿಳಿಸಿದ್ದಾರೆ.

ನೇಪಾಳದ ವಿಪತ್ತು ನಿರ್ವಹಣಾ ಸಂಸ್ಥೆಯ ಪ್ರಕಾರ, ಒಟ್ಟು 823 ಮಂದಿ ಇನ್ನೂ ಸಂಪರ್ಕಕ್ಕೆ ಸಿಗುತ್ತಿಲ್ಲ. ಇವರಲ್ಲಿ ನೂರಾರು ವಿದೇಶಿ ಪ್ರವಾಸಿಗರು ಹಾಗೂ ಸ್ಥಳೀಯರು ಸೇರಿದ್ದಾರೆ. ಚೀನಾದ ಸರ್ಕಾರಿ ಮಾಧ್ಯಮದ ವರದಿ ಪ್ರಕಾರ, ಟಿಬೆಟ್‌ನಲ್ಲೂ 260 ವಿದೇಶಿ ಪ್ರಜೆಗಳು ಸೇರಿದಂತೆ 558 ಮಂದಿ ನಾಪತ್ತೆಯಾಗಿದ್ದಾರೆ.ಅಮೆರಿಕ ಭೂವೈಜ್ಞಾನಿಕ ಸಮೀಕ್ಷೆಯ ಪ್ರಕಾರ, ಇದು ಸಾಂಪ್ರದಾಯಿಕ ಭೂಕಂಪದಿಂದ ಉಂಟಾದ ಪ್ರವಾಹವಲ್ಲ. ಬದಲಾಗಿ ಹಿಮನದಿ ಕುಸಿತ ಹಾಗೂ ಶಿಲಾಖಂಡರಾಶಿಗಳ ಹರಿವಿನಿಂದ ಉಂಟಾದ ಹಠಾತ್ ಪ್ರವಾಹವಾಗಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ನೇಪಾಳದ ಪ್ರಧಾನಿ ಬಾಲೇಂದ್ರ ಶಾ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿ, ಅಗತ್ಯವಿರುವ ಎಲ್ಲ ಮಾನವೀಯ ನೆರವು ನೀಡುವುದಾಗಿ ಭರವಸೆ ನೀಡಿದ್ದಾರೆ. ಇದರ ಭಾಗವಾಗಿ ಭಾರತೀಯ ವಾಯುಪಡೆಯ ಸಿ–130ಜೆ ವಿಮಾನದ ಮೂಲಕ 10 ಟನ್ ಪರಿಹಾರ ಸಾಮಗ್ರಿಗಳನ್ನು ನೇಪಾಳಕ್ಕೆ ಕಳುಹಿಸಲಾಗಿದೆ. ಔಷಧಿಗಳು, ತಾತ್ಕಾಲಿಕ ಆಶ್ರಯ ಸಾಮಗ್ರಿಗಳು ಹಾಗೂ ಕಂಬಳಿಗಳು ಇದರಲ್ಲಿ ಸೇರಿವೆ ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ತಿಳಿಸಿದ್ದಾರೆ.

ಕರ್ನಾಟಕ, ಬಿಹಾರ, ಉತ್ತರ ಪ್ರದೇಶ, ಮಹಾರಾಷ್ಟ್ರ ಸೇರಿದಂತೆ ಹಲವು ರಾಜ್ಯಗಳು ತಮ್ಮ ತುರ್ತು ಸಹಾಯವಾಣಿಗಳನ್ನು ಸಕ್ರಿಯಗೊಳಿಸಿವೆ. ಕರ್ನಾಟಕದ ನಿವಾಸಿಗಳು ನೆರವಿಗಾಗಿ 1070 ಅಥವಾ 080–22253707 ಸಂಖ್ಯೆಗೆ ಸಂಪರ್ಕಿಸಬಹುದು.ಅಮೆರಿಕ ಸರ್ಕಾರ 5 ಲಕ್ಷ ಡಾಲರ್ ತುರ್ತು ನೆರವು ಘೋಷಿಸಿದ್ದು, ಪರಿಣತರ ತಂಡವನ್ನೂ ಕಳುಹಿಸುತ್ತಿದೆ. ಆಸ್ಟ್ರೇಲಿಯಾ ಸರ್ಕಾರ ತನ್ನ ನಾಪತ್ತೆಯಾದ ನಾಗರಿಕರ ಪತ್ತೆಗೂ ಕ್ರಮ ಕೈಗೊಂಡಿದೆ.

ಭಾರತದ ಗಡಿ ಜಿಲ್ಲೆಗಳಾದ ಉತ್ತರ ಪ್ರದೇಶ, ಬಿಹಾರ ಹಾಗೂ ಉತ್ತರಾಖಂಡದಲ್ಲಿ ನದಿ ನೀರಿನ ಮಟ್ಟ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಹೈಅಲರ್ಟ್ ಘೋಷಿಸಲಾಗಿದೆ. ರಕ್ಷಣಾ ಪಡೆಗಳು ಹಾಗೂ ಹೆಲಿಕಾಪ್ಟರ್‌ಗಳ ನೆರವಿನಿಂದ ಪೀಡಿತ ಪ್ರದೇಶಗಳಲ್ಲಿ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ.

ಭಾರತೀಯರ ಸ್ಥಿತಿ ಇನ್ನೂ ಆತಂಕಕಾರಿ

ಈ ದುರಂತದಲ್ಲಿ ಭಾರತೀಯರ ನಾಪತ್ತೆ ಕುರಿತು ವಿವಿಧ ಹಂತಗಳಲ್ಲಿ ವಿಭಿನ್ನ ಅಂಕಿಅಂಶಗಳು ಹೊರಬಿದ್ದಿವೆ. ಆರಂಭದಲ್ಲಿ ನೇಪಾಳ ಪ್ರವಾಸೋದ್ಯಮ ಮಂಡಳಿಯ ಪಟ್ಟಿಯಲ್ಲಿ 105 ಭಾರತೀಯರು ಸೇರಿದಂತೆ 384 ಪ್ರವಾಸಿಗರು ನಾಪತ್ತೆಯಾಗಿದ್ದಾರೆ ಎಂದು ಗುರುತಿಸಲಾಗಿತ್ತು. ಬಳಿಕದ ಅಧಿಕೃತ ಮಾಹಿತಿಯಲ್ಲಿ ಕನಿಷ್ಠ 133 ಭಾರತೀಯರು ಹಾಗೂ 37 ಎನ್‌ಆರ್‌ಐಗಳು ಸಂಪರ್ಕಕ್ಕೆ ಸಿಗುತ್ತಿಲ್ಲ ಎಂದು ತಿಳಿಸಲಾಗಿತ್ತು.

ಗುರುವಾರ ಬೆಳಗ್ಗೆ ನೇಪಾಳದ ವಿದೇಶಾಂಗ ಸಚಿವ ಶಿಶಿರ್ ಖನಾಲ್ ಅವರು ಸುಮಾರು 300 ಭಾರತೀಯರು ನಾಪತ್ತೆಯಾಗಿರುವ ಸಾಧ್ಯತೆಯಿದೆ ಎಂದು ತಿಳಿಸಿದ್ದಾರೆ. ಸಂವಹನ ವ್ಯವಸ್ಥೆ ಹಾಗೂ ವಿದ್ಯುತ್ ಸಂಪರ್ಕ ಕಡಿತಗೊಂಡಿರುವುದು ಮತ್ತು ವಿವಿಧ ಸಂಸ್ಥೆಗಳು ಸಿದ್ಧಪಡಿಸಿರುವ ನಾಪತ್ತೆಯಾದವರ ಪಟ್ಟಿಗಳಲ್ಲಿನ ವ್ಯತ್ಯಾಸವೇ ಅಂಕಿಅಂಶಗಳಲ್ಲಿನ ಗೊಂದಲಕ್ಕೆ ಪ್ರಮುಖ ಕಾರಣ ಎನ್ನಲಾಗಿದೆ.

ನೇಪಾಳದಲ್ಲಿರುವ ಭಾರತದ ರಾಯಭಾರಿ ನವೀನ್ ಶ್ರೀವಾಸ್ತವ ಕೂಡ ಸಂಪರ್ಕ ವ್ಯವಸ್ಥೆ ಸ್ಥಗಿತಗೊಂಡಿರುವುದರಿಂದ ಅನೇಕ ಭಾರತೀಯರನ್ನು ಸಂಪರ್ಕಿಸಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದ್ದಾರೆ. ಹೀಗಾಗಿ ಪಟ್ಟಿಯಲ್ಲಿ ?ನಾಪತ್ತೆ? ಎಂದು ದಾಖಲಾಗಿರುವ ಪ್ರತಿಯೊಬ್ಬರೂ ನಿಜವಾಗಿಯೂ ಕಾಣೆಯಾಗಿದ್ದಾರೆ ಎಂದು ಅರ್ಥೈಸಲು ಸಾಧ್ಯವಿಲ್ಲ. ಅವರ ನೈಜ ಸ್ಥಿತಿಗತಿ ಪತ್ತೆಹಚ್ಚುವ ಕಾರ್ಯ ಮುಂದುವರಿದಿದೆ.

ಕೈಲಾಸ ಮಾನಸ ಸರೋವರ ಯಾತ್ರಿಕರೂ ಸಂಕಷ್ಟದಲ್ಲಿ

ಪ್ರವಾಹದಿಂದಾಗಿ ಟಿಬೆಟ್‌ನ ಕೈಲಾಸ ಮಾನಸ ಸರೋವರ ಯಾತ್ರೆಯ ಮಾರ್ಗವೂ ತೀವ್ರವಾಗಿ ಹಾನಿಗೊಳಗಾಗಿದೆ. ನಾಪತ್ತೆಯಾದ ಭಾರತೀಯರಲ್ಲಿ ಕನಿಷ್ಠ 50 ಮಂದಿ ಕೈಲಾಸ ಮಾನಸ ಸರೋವರ ಯಾತ್ರೆಯಲ್ಲಿದ್ದವರು ಎಂದು ವರದಿಯಾಗಿದೆ.ಭಾರತೀಯ ಯಾತ್ರಿಕರು ಹಾಗೂ ಪ್ರವಾಸಿಗರ ಜತೆಗೆ ಅಮೆರಿಕ, ಆಸ್ಟ್ರೇಲಿಯಾ, ಬ್ರಿಟನ್, ಕೆನಡಾ, ಮಲೇಷ್ಯಾ, ನೆದರ್‌ಲ್ಯಾಂಡ್ಸ್ ಹಾಗೂ ದಕ್ಷಿಣ ಆಫ್ರಿಕಾ ಸೇರಿದಂತೆ ಹಲವು ದೇಶಗಳ ನಾಗರಿಕರೂ ಸಂಪರ್ಕಕ್ಕೆ ಸಿಗುತ್ತಿಲ್ಲ.

ನೇಪಾಳದ ವಿಪತ್ತು ನಿರ್ವಹಣಾ ಸಂಸ್ಥೆಯ ಪ್ರಕಾರ, 823 ಮಂದಿ ಇನ್ನೂ ಸಂಪರ್ಕಕ್ಕೆ ಸಿಗುತ್ತಿಲ್ಲ. ಇವರಲ್ಲಿ ನೇಪಾಳಿ ಹಾಗೂ ವಿದೇಶಿ ನಾಗರಿಕರು ಮತ್ತು ಪ್ರವಾಸಿಗರು ಸೇರಿದ್ದಾರೆ. ಒಂದು ಹಂತದಲ್ಲಿ 579 ಪ್ರವಾಸಿಗರು ಸಂಪರ್ಕಕ್ಕೆ ಸಿಗುತ್ತಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದರು.

ರಕ್ಷಣಾ ತಂಡಗಳು ಪೀಡಿತ ಪ್ರದೇಶಗಳಲ್ಲಿ ಮನೆಗಳು, ವಾಹನಗಳು, ಸೇತುವೆಗಳು ಹಾಗೂ ನದಿಪಾತ್ರಗಳ ಬಳಿ ವ್ಯಾಪಕ ಶೋಧ ಕಾರ್ಯಾಚರಣೆ ನಡೆಸುತ್ತಿವೆ. ನಾಪತ್ತೆಯಾದವರ ಪತ್ತೆ ಹಾಗೂ ಸಂತ್ರಸ್ತರ ರಕ್ಷಣೆಗೆ ಕಾರ್ಯಾಚರಣೆ ಮತ್ತಷ್ಟು ತೀವ್ರಗೊಳಿಸಲಾಗಿದೆ.

# ಮೇಕೆದಾಟು ಯೋಜನೆ: ತಮಿಳುನಾಡು–ಕರ್ನಾಟಕ ರಾಜಕೀಯ ನಾಯಕರ ಮಾತಿನ ಸಮರ

**ಚೆನ್ನೈ:** ಕರ್ನಾಟಕದ ಮಹತ್ವಾಕಾಂಕ್ಷೆಯ ಮೇಕೆದಾಟು ಸಮತೋಲನ ಜಲಾಶಯ ಯೋಜನೆ ವಿಚಾರವಾಗಿ ಕರ್ನಾಟಕ ಮತ್ತು ತಮಿಳುನಾಡಿನ ರಾಜಕೀಯ ನಾಯಕರ ನಡುವೆ ಮಾತಿನ ಸಮರ ತೀವ್ರಗೊಂಡಿದೆ. ಯೋಜನೆಯನ್ನು ಯಾವುದೇ ಕಾರಣಕ್ಕೂ ಅನುಷ್ಠಾನಗೊಳಿಸಲು ಬಿಡುವುದಿಲ್ಲ ಎಂದು ತಮಿಳುನಾಡಿನ ಎಐಎಡಿಎಂಕೆ ಪ್ರಮುಖ ನಾಯಕ ಕೋವೈ ಸತ್ಯನ್ ಕರ್ನಾಟಕದ ನಾಯಕರಿಗೆ ಎಚ್ಚರಿಕೆ ನೀಡಿದ್ದಾರೆ.

ಕಾವೇರಿ ನದಿ ನೀರಿನ ವಿವಾದಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನ ತೀರ್ಪು ಸ್ಪಷ್ಟವಾಗಿದ್ದು, ಕರ್ನಾಟಕ ಏಕಪಕ್ಷೀಯವಾಗಿ ಮೇಕೆದಾಟು ಯೋಜನೆಯನ್ನು ಮುಂದುವರಿಸಲು ಸಾಧ್ಯವಿಲ್ಲ ಎಂದು ಕೋವೈ ಸತ್ಯನ್ ಹೇಳಿದ್ದಾರೆ. ರಾಜಕೀಯ ಲಾಭಕ್ಕಾಗಿ ಹಾಗೂ ಜನರನ್ನು ದಾರಿ ತಪ್ಪಿಸಲು ಕರ್ನಾಟಕದ ಕಾಂಗ್ರೆಸ್ ನಾಯಕರು ಮೇಕೆದಾಟು ಯೋಜನೆ ವಿಷಯವನ್ನು ಪದೇಪದೆ ಪ್ರಸ್ತಾಪಿಸುತ್ತಿದ್ದಾರೆ ಎಂದು ಅವರು ವಾಗ್ದಾಳಿ ನಡೆಸಿದ್ದಾರೆ. ಯೋಜನೆಯ ಪರವಾಗಿ ಒಂದು ಇಟ್ಟಿಗೆಯನ್ನೂ ಇಡಲು ಅಥವಾ ಒಂದು ಕಲ್ಲನ್ನೂ ಅಲುಗಾಡಿಸಲು ಬಿಡುವುದಿಲ್ಲ ಎಂದು ಹೇಳಿರುವ ಅವರು, ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿದರೆ ಅದು ನ್ಯಾಯಾಂಗ ನಿಂದನೆಗೆ ಕಾರಣವಾಗಬಹುದು ಎಂದು ಎಚ್ಚರಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಚಿವ ಚೆಲುವರಾಯಸ್ವಾಮಿ ಅವರ ಹೇಳಿಕೆಗಳನ್ನು ತೀವ್ರವಾಗಿ ಖಂಡಿಸಿರುವ ಸತ್ಯನ್, ಇದು ತಮಿಳುನಾಡಿನ ಹಿತಾಸಕ್ತಿಗೆ ಧಕ್ಕೆ ತರುವ ಪ್ರಯತ್ನ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ಜಿಲ್ಲೆಗಳ ಕುಡಿಯುವ ನೀರಿನ ಅಗತ್ಯವನ್ನು ಪೂರೈಸುವುದರ ಜತೆಗೆ ವಿದ್ಯುತ್ ಉತ್ಪಾದಿಸುವ ಉದ್ದೇಶದಿಂದ ಕಾವೇರಿ ನದಿಗೆ ಅಡ್ಡಲಾಗಿ ಕರ್ನಾಟಕ ಸರ್ಕಾರ ಮೇಕೆದಾಟು ಯೋಜನೆಯನ್ನು ಪ್ರಸ್ತಾಪಿಸಿದೆ. ಆದರೆ, ಯೋಜನೆಯಿಂದ ತಮಿಳುನಾಡಿಗೆ ಲಭ್ಯವಾಗುವ ಕಾವೇರಿ ನೀರಿನ ಪ್ರಮಾಣ ಕಡಿಮೆಯಾಗಲಿದೆ ಎಂದು ಆರೋಪಿಸಿ ತಮಿಳುನಾಡು ಸರ್ಕಾರ ಹಾಗೂ ಅಲ್ಲಿನ ವಿವಿಧ ರಾಜಕೀಯ ಪಕ್ಷಗಳು ಆರಂಭದಿಂದಲೂ ಯೋಜನೆಯನ್ನು ತೀವ್ರವಾಗಿ ವಿರೋಧಿಸುತ್ತಿವೆ.

Printed By: J AMBRISH, DEVANAHALLI TQ, BANGALORE RURAL DIST. PRINTED AT: KALYANI PRINTERS, GROUND FLOOR, FLAT NO. 12/1, 1ST CROSS ROAD, MYSURE ROAD, OLD TOLLGATE, NEAR BY GOPALAN MALL, BENGALURU, KARNATAKA-560026. Published & owned by RADHIKA A. R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI TALUK, TUMAKURU DIST. KARNATAKA PIN-572132, and published at TUMAKURU. BEHAIND AC OFFICE, SWEET WATER BORE WELL ROAD, MADHUGIRI, MADHUGIRI TALUK, TUMAKURU. DIST. KARNATAKA PIN-572132 Editor: RADHIKA A.R. “KARNATAKA SUCCESS NO 1 ” KANNADA Daily News Paper